ಸಂಪುಟ: 13 Volume | ಸಂಚಿಕೆ: 350 Issue | ಪುಟಗಳು 08 Pages | ಶನಿವಾರ 14 ಮಾರ್ಚ್ 2026 | ₹6 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 7204184576

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಡಾ.ಎಂ.ಮಹ್ಮದ್ ಬಾಷ ಗೂಳ್ಯಂ

**ಬೆಳಗು**

ನಾವು ಬಿಡುಗಡೆ, ಸ್ವಾತಂತ್ರ್ಯ ಪಡೆಯಬೇಕಾದದ್ದು ಅಜ್ಞಾನದಿಂದ, ಅಧರ್ಮದಿಂದ.

–ಬಿ.ಎಂ.ಶ್ರೀ.

ಸಿಲಿಂಡರ್ ಕೊರತೆಯಿಲ್ಲ: ಜಿಲ್ಲಾಧಿಕಾರಿ 6

ದ್ರಾಕ್ಷಿ ವಿಮೆ ಬಿಡುಗಡೆಗೆ ಬಿಜೆಪಿ ಆಗ್ರಹ 7

ಕಾಂಗ್ರೆಸ್ ಕಾರ್ಯಾಗಾರ 15ರಂದು 8

## ಮಲ್ಲಮ್ಮ ನುಡಿ ಯುಗಾದಿ ವಿಶೇಷಾಂಕ- 2026

ಸದಾ ಹೊಸತನಕ್ಕೆ ಹೆಸರಾದ ಪ್ರತಿಷ್ಠಿತ ಪ್ರಾದೇಶಿಕ ಮಲ್ಲಮ್ಮನುಡಿ ದಿನಪತ್ರಿಕೆಯು ಈ ಬಾರಿ ಯುಗಾದಿ ವಿನೂತನ ವಿಶೇಷಾಂಕ–2026 ಹೊರತರಲಿದೆ. ಇದರ ಸಿದ್ಧತೆಯು ಈಗಾಗಲೇ ಆರಂಭವಾಗಿದೆ. ಇದರ ಪ್ರಯುಕ್ತ ವಿಶೇಷ ಸಂಚಿಕೆಗಾಗಿ ಲೇಖಕರಿಂದ ಬರಹಗಳನ್ನು ಆಹ್ವಾನಿಸುತ್ತಿದೆ.


**ಲೇಖಕರು ಪಾಲಿಸಬೇಕಾದ ಸೂಚನೆಗಳು**

- ನನ್ನೂರು ಹಲವು ವೈಶಿಷ್ಟ್ಯಗಳ ತವರು: 200 ಪದ ಮಿತಿ
- ನನ್ನ ಜೀವನದ ಟರ್ನಿಂಗ್ ಪಾಯಿಂಟ್: 200 ಪದಮಿತಿ
- ನಾನು ಪ್ರೀತಿಸಿದೆ. ಆದರೆ ಆಕೆಗೆ ಹೇಳಲೇ ಇಲ್ಲ, ಸ್ವ ಅನುಭವ: 200 ಪದ ಮಿತಿ
- ಕಥೆಗಳು: 600 ಪದಮಿತಿ
- ಯಾವುದೇ ವಿಷಯ ಕುರಿತ ಲಲಿತ ಪ್ರಬಂಧ: 300 ಪದ
- ಕವನ 24 ಸಾಲು ಮೀರದಿರಲಿ.

► ಲೇಖನಗಳನ್ನು ಕಳುಹಿಸಲು ಅಂತಿಮ ದಿನಾಂಕ: 5–03–2026

► ಬರಹಗಳ ಆಯ್ಕೆಯಲ್ಲಿ ಸಂಚಿಕೆ ಸಂಪಾದಕರ ತೀರ್ಮಾನವೇ ಅಂತಿಮ.

ಈ ಮೇಲ್: mallammanudi@gmail.com



ಕಲಬುರಗಿ: ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಹಮ್ಮಿಕೊಂಡ ಒಳ ಮೀಸಲಾತಿ ಜಾರಿಗಾಗಿ ಹಮ್ಮಿಕೊಂಡ ಹೋರಾಟದಲ್ಲಿ ಮಾದಿಗ ದಂಡೋರಾ ಹೋರಾಟ ಸಮಿತಿಯ ರಾಜ್ಯ ಉಪಾಧ್ಯಕ್ಷರಾದ ರಾಜು ಹದನೂರ ರವರ ನೇತೃತ್ವದಲ್ಲಿ ಕಲಬುರಗಿ ಜಿಲ್ಲೆಯಿಂದ ನೂರಾರು ಮಾದಿಗ ಸಮಾಜದ ಮುಖಂಡರು ಹೋರಾಟದಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಿದರು.

## ಇರಾಕ್‌ನಲ್ಲಿ ಅಮೆರಿಕ ವಿಮಾನ ಪತನ

ವಾಷಿಂಗ್ಟನ್: ಇರಾನ್ ವಿರುದ್ಧ ನಡೆಯುತ್ತಿರುವ ಸೇನಾ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದ ಅಮೆರಿಕದ ಇಂಧನ ತುಂಬುವ ವಿಮಾನ ಇರಾಕ್‌ನಲ್ಲಿ ಪತನಗೊಂಡಿದ್ದು, 4 ಸಿಬ್ಬಂದಿ ಮೃತಪಟ್ಟಿದ್ದಾರೆ. ಪಶ್ಚಿಮ ಇರಾಕ್‌ನಲ್ಲಿ ಅಪಘಾತಕ್ಕೀಡಾಗಿದೆ ಎಂದು ಅಮೆರಿಕನ್ ಮಿಲಿಟರಿ ಯುಎಸ್ ಸೆಂಟ್ರಲ್ ಕಮಾಂಡ್ ಘೋಷಿಸಿದೆ. ಸೆಂಟ್ರಲ್ ಕಮಾಂಡ್ ಮಾಹಿತಿ ಪ್ರಕಾರ, ಈ ಕಾರ್ಯಾಚರಣೆಯಲ್ಲಿ ಎರಡು ವಿಮಾನಗಳು ಭಾಗಿಯಾಗಿದ್ದು, ಒಂದು ವಿಮಾನ ಸುರಕ್ಷಿತವಾಗಿ ಇಳಿದಿದ್ದರೆ ಮತ್ತೊಂದು ಪಶ್ಚಿಮ ಇರಾಕ್‌ನಲ್ಲಿ ಪತನಗೊಂಡಿದೆ ಎಂದು ದೃಢಪಡಿಸಲಾಗಿದೆ.

## ಬೌದ್ಧವಿಹಾರ: ಕಲಬುರಗಿಯಲ್ಲಿ ಉತ್ಖನನ?

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಕರ್ನಾಟಕದ ಕಲಬುರಗಿಯಲ್ಲಿ ಪತ್ತೆಯಾದ ಪುರಾತನ ಬೌದ್ಧ ವಿಹಾರದ ವಿವರವಾದ ಉತ್ಖನನವನ್ನು ಕೈಗೊಳ್ಳಬೇಕು ಎಂದು ರಾಜ್ಯಸಭೆಯ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ರಾಜ್ಯಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಮಾತನಾಡಿ, ಶಾತವಾಹನ ರಾಜವಂಶದ ಅವಧಿಯಲ್ಲಿ ಬೌದ್ಧಧರ್ಮದ ಹರಡುವಿಕೆಗೆ ಸಂಬಂಧಿಸಿದೆ ಎಂದು ನಂಬಲಾದ ಮಠದ ಸಮೀಕ್ಷೆ ಮತ್ತು ಮತ್ತಷ್ಟು ಉತ್ಖನನವನ್ನು ಕೋರಿ ಸರ್ಕಾರಕ್ಕೆ ಪತ್ರಗಳನ್ನು ಬರೆದಿದ್ದೇನೆ. ಬೌದ್ಧಧರ್ಮದ ಹರಡುವಿಕೆಗೆ ಸಂಬಂಧಿಸಿದ ಹಲವಾರು ಐತಿಹಾಸಿಕ ಅವಶೇಷಗಳನ್ನು ಇನ್ನೂ ಸರಿಯಾಗಿ ಅಧ್ಯಯನ ಮಾಡಲಾಗಿಲ್ಲ ಎಂದು ತಿಳಿಸಿದ್ದಾರೆ.



ಐತಿಹಾಸಿಕ ವೃತ್ತಾಂತಗಳನ್ನು ಉಲ್ಲೇಖಿಸಿದ ಖರ್ಗೆ ಆ ಅವಧಿಯಲ್ಲಿ ಅಮರಾವತಿಯಿಂದ ಕಲಬುರಗಿ ಮತ್ತು ರಾಯಚೂರು ಮುಂತಾದ ಪ್ರದೇಶಗಳಿಗೆ ಬೌದ್ಧಧರ್ಮ ಹರಡಿತ್ತು. ತಮ್ಮ ಕ್ಷೇತ್ರದಲ್ಲಿ ಕಂಡುಬರುವ ಬೌದ್ಧ ಮಠದ ಸಮೀಕ್ಷೆ ಮಾಡುವಂತೆ ತಾವು ಈ ಹಿಂದೆ ಕೋರಿದ್ದೆವು. ಆದರೆ ಸರ್ಕಾರಕ್ಕೆ ಪದೇ ಪದೆ ಮನವಿ ಮಾಡಿದರೂ ಹೆಚ್ಚಿನ ಉತ್ಖನನ ನಡೆದಿಲ್ಲ ಎಂದು ವಿಷಾದಿಸಿದ್ದಾರೆ.

## ಬಳ್ಳಾರಿ ಏರ್‌ಪೋರ್ಟ್‌ಗೆ ಹೊಸ ತಾಣ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬಳ್ಳಾರಿ, ಹೊಸಪೇಟೆ, ಹಂಪೆ, ಆನೆಗೊಂದಿ, ಸಂಡೂರು, ಕೊಪ್ಪಳ, ಕುರುಗೋಡು, ಸಿರಗುಪ್ಪ ಮುಂತಾದ ಭಾಗಗಳಿಗೆ ಅನುಕೂಲವಾಗುವಂತೆ ವಿಮಾನ ನಿಲ್ದಾಣ ಬರಬೇಕೆಂಬುದು ಸರಕಾರದ ಉದ್ದೇಶವಾಗಿದೆ. ಹೀಗಾಗಿ ಬಳ್ಳಾರಿಯಿಂದ 19 ಕಿ.ಮೀ.ದೂರದಲ್ಲಿ ಜಾಗವನ್ನು ಗುರುತಿಸಲಾಗಿದೆ. ಇದು ಕಾರ್ಯಸಾಧು ಎನಿಸಿದರೆ ಎಲ್ಲ ಜನಪ್ರತಿನಿಧಿಗಳ ಜತೆ ಚರ್ಚಿಸಿ ಮುಂದಿನ ಹೆಜ್ಜೆ ಇಡಲಾಗುವುದು ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ. ಗಂಗಾವತಿಯ ಬಿಜೆಪಿ ಶಾಸಕ ಜನಾರ್ದನ ರೆಡ್ಡಿ ವಿಧಾನಸಭೆಯಲ್ಲಿ ಕೇಳಿದ ಪ್ರಶ್ನೆಗೆ ಉತ್ತರಿಸಿ, ಬಳ್ಳಾರಿ ವಿಮಾನ ನಿಲ್ದಾಣದಿಂದ ಆ ಜಿಲ್ಲೆಯ ಜತೆಗೆ ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಜನರಿಗೂ ಪ್ರಯೋಜನ ಆಗಬೇಕು. ಬಳ್ಳಾರಿ ಏರ್ಪೋರ್ಟ್‌ನಿಂದ ನೆರೆಯ ಆಂಧ್ರಪ್ರದೇಶಕ್ಕೂ ಲಾಭವಾಗಲಿದೆ. ಈ ಯೋಜನೆಯ ಸಂಬಂಧ ಸದ್ಯದಲ್ಲೇ ಮೂರೂ ಜಿಲ್ಲೆಗಳ ಜನಪ್ರತಿನಿಧಿಗಳ ಸಭೆ ಕರೆದು, ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಾಧಕಬಾಧಕಗಳನ್ನು ಯೋಚಿಸಲಾಗುವುದು ಎಂದು ವಿವರಿಸಿದ್ದಾರೆ.



ವಿಮಾನ ನಿಲ್ದಾಣ ಕಟ್ಟುವಾಗಲೇ ದೂರದೃಷ್ಟಿ ಇರಬೇಕು. ಇಲ್ಲದೆ ಹೋದರೆ ಹುಬ್ಬಳ್ಳಿ, ಬೆಳಗಾವಿ, ವಿಜಯಪುರ ಇಲ್ಲೆಲ್ಲ ಆಗಿರುವ ತಪ್ಪುಗಳೇ ಮುಂದುವರಿಯುತ್ತವೆ. ಬೆಳಗಾವಿ ಮತ್ತು ಹುಬ್ಬಳ್ಳಿ ಏರ್ಪೋರ್ಟ್ ಮಧ್ಯೆ ಕೇವಲ 70 ಕಿ.ಮೀ. ಅಂತರವಿದೆ ಎಂದಿದ್ದಾರೆ.

# ಕಮಲ ಮಂತ್ರ ಕೈ ತಂತ್ರ

### ಒಡಿಶಾ ಕಾಂಗ್ರೆಸ್ ಪಕ್ಷದಲ್ಲಿ ಆಪರೇಷನ್ ಬಿಜೆಪಿ ಭೀತಿ | ಬಿಡದಿ ಖಾಸಗಿ ರೆಸಾರ್ಟ್‌ಗೆ ಬಂದಿರುವ 14 ಶಾಸಕರು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಒಡಿಶಾ ಕಾಂಗ್ರೆಸ್ ಪಕ್ಷದಲ್ಲಿ ಇದೀಗ ಆಪರೇಷನ್ ಕಮಲದ ಭೀತಿ ಉಂಟಾಗಿದೆ. ಬಿಜೆಪಿಯ 'ಆಪರೇಷನ್ ಕಮಲ' ಪ್ರಯತ್ನವನ್ನು ತಡೆಯಲು ಈ ತಂತ್ರ ರೂಪಿಸಲಾಗಿದೆ. 14 ಜನ ಕಾಂಗ್ರೆಸ್ ಶಾಸಕರು ಬೆಂಗಳೂರಿಗೆ ಬಂದಿದ್ದು, ಖಾಸಗಿ ರೆಸಾರ್ಟ್‌ನಲ್ಲಿ ಆಶ್ರಯ ಪಡೆದಿದ್ದಾರೆ. ಒಡಿಶಾದಲ್ಲಿ ನಡೆಯಲಿರುವ ರಾಜ್ಯಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಅಡ್ಡ ಮತದಾನದ ಭೀತಿ ಹೆಚ್ಚಾಗಿರುವ ನಡುವೆ ಕಾಂಗ್ರೆಸ್ ತನ್ನ ಶಾಸಕರನ್ನು ಸುರಕ್ಷಿತವಾಗಿ ಇರಿಸಲು ರೆಸಾರ್ಟ್ ರಾಜಕೀಯಕ್ಕೆ ಮುಂದಾಗಿದೆ.

**ಡಿಸಿಎಂ ಅವರ ನೇತೃತ್ವ:** ಇಲ್ಲಿಗೆ ಆಗಮಿಸಿರುವ ಒಡಿಶಾದ ಕಾಂಗ್ರೆಸ್ ಶಾಸಕರ ಒಳಿತು–ಕೆಡಕು ವಿಚಾರಿಸಲು ಡಿಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಬೆಂಗಳೂರಿಗೆ ಕರೆಸಿಕೊಳ್ಳಲಾಗಿದೆ. ಭುವನೇಶ್ವರದಿಂದ ಇಂಡಿಗೊ ವಿಮಾನದ ಮೂಲಕ ಒಡಿಶಾದ ಕಾಂಗ್ರೆಸ್ ಶಾಸಕರು ಮತ್ತು ನಾಯಕರು ಬೆಂಗಳೂರಿಗೆ ಆಗಮಿಸಿದ್ದಾರೆ.

**ಶಿವಕುಮಾರ್ ಆಪ್ತರ ಸ್ವಾಗತ:** ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದ ಶಾಸಕರನ್ನು ಡಿಕೆಶಿ ಆಪ್ತರು ಸ್ವಾಗತಿಸಿದ್ದಾರೆ. ಪೊಲೀಸ್, ಎಸ್ಕಾರ್ಟ್ ವ್ಯವಸ್ಥೆ ಜತೆಗೆ ಶಾಸಕರನ್ನು ನೇರವಾಗಿ ರಾಮನಗರ ಜಿಲ್ಲೆಯ ಬಿಡದಿಯಲ್ಲಿರುವ ಖಾಸಗಿ ರೆಸಾರ್ಟ್‌ಗಹೆ ಕರೆದೊಯ್ಯಲಾಗಿದೆ. ಅಲ್ಲಿ ಅವರಿಗೆ ವಿಶೇಷ ವಸತಿ ವ್ಯವಸ್ಥೆ ಮಾಡಲಾಗಿದೆ.



### ಅಡ್ಡ ಮತದಾನ ತಡೆಗೆ ಕ್ರಮ

ಡಿಸಿಎಂ ಡಿಕೆ ಶಿವಕುಮಾರ್ ಅವರು ಅಸ್ಸಾಂ ಕಾಂಗ್ರೆಸ್ನ ವೀಕ್ಷಕರಾಗಿರುವ ಕಾರಣ ಶಾಸಕರು ಬಿಡದಿಗೆ ಆಗಮಿಸಿದ್ದಾರೆ. ಶಾಸಕರು ತಂಗಿರುವ ರೆಸಾರ್ಟ್ ಸುತ್ತಲೂ ಬಿಗಿ ಪೊಲೀಸ್ ಭದ್ರತೆ ಕಲ್ಪಿಸಲಾಗಿದೆ. ಒಡಿಶಾ ರಾಜ್ಯ ಚುನಾವಣೆ ಬಿರುಸುಗಂಡಿದ್ದು, ಅಲ್ಲಿ ನಡೆಯಲಿರುವ ರಾಜ್ಯಸಭಾ ಚುನಾವಣೆಯಲ್ಲಿ ಅಡ್ಡ ಮತದಾನ ನಡೆಯುವ ಸಾಧ್ಯತೆ ಇದೆ. ಇದ–ರಿಂದಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

### ತಂಡದಲ್ಲಿರುವ ಶಾಸಕರು..?

ಒಡಿಸ್ಸಾದಿಂದ ಬಂದಿಳಿದಿರುವ ತಂಡದಲ್ಲಿ ಶಾಸಕರಾದ ಮಂಗು ಖಿಲಾ, ಅಪ್ಪಲ ಸ್ವಾಮಿ, ರಾಜನ್ ಎಕ್ಕಾ, ಅಶೋಕ್ ಕುಮಾರ್ ಸೇರಿದಂತೆ ಹಲವು ನಾಯಕರು ಇದ್ದಾರೆ. ಜೊತೆಗೆ ಮಾಜಿ ಸಂಸದ ಭಕ್ತ ಚರಣ್ ದಾಸ್, ಕಾಂಗ್ರೆಸ್ ವಕ್ತಾರ ದುರ್ಗಾ ಪ್ರಸಾದ್ ಪಾಂಡಾ ಸೇರಿ ಒಟ್ಟು 14 ಮಂದಿ ಬೆಂಗಳೂರಿಗೆ ಬಂದಿದ್ದಾರೆ. ರೆಸಾರ್ಟ್‌ಗೆ ಆಗಮಿಸಿದ ಶಾಸಕರನ್ನು ರಾಜ್ಯ ಕಾಂಗ್ರೆಸ್‌ನ ಸ್ಥಳೀಯ ಮುಖಂಡರು ಸ್ವಾಗತಿಸಿದ್ದಾರೆ.

ಬಂದಿರುವ ಅತಿಥಿಗಳನ್ನು ನೋಡಿಕೊಳ್ಳುವುದು ನಮ್ಮ ಕರ್ತವ್ಯ. ಆದರೆ ಪಕ್ಷ ನನಗೆ ವಿಶೇಷವಾದ ಯಾವುದೇ ರೀತಿಯ ಜವಾಬ್ದಾರಿ ನೀಡಿಲ್ಲ. ನಮ್ಮ ಪಿಸಿಸಿ ಅಧ್ಯಕ್ಷರು ಶಾಸಕರು ಬರುತ್ತಿದ್ದಾರೆ ಎಂದು ಹೇಳಿದ್ದು, ನೀವು ನಮ್ಮ ಅತಿಥಿಗಳು ಬನ್ನಿ ಎಂದಿದ್ದೆ. ಇದೀಗ ಬಂದಿದ್ದಾರೆ ಅಷ್ಟೇ. –ಡಿಕೆ ಶಿವಕುಮಾರ್, ಉಪಮುಖ್ಯಮಂತ್ರಿ

### ಶಾಸಕರನ್ನು ಕರೆದಿಲ್ಲ: ಡಿಕೆಶಿ

ನಾನು ಒಡಿಶಾ ಶಾಸಕರನ್ನು ಕರೆಸಿಲ್ಲ, ಅವರೇ ಬೆಂಗಳೂರಿಗೆ ಬಂದಿದ್ದಾರೆ. ಅಧಿವೇಶನ ಕಲಾಪ ಮುಗಿದ ಬಳಿಕ ನಾನು ಹೋಗಿ ಅವರನ್ನು ಭೇಟಿ ಮಾಡುತ್ತೇನೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಎಂದು ಸ್ಪಷ್ಟಪಡಿಸಿದ್ದಾರೆ. ಆ ರಾಜ್ಯದ ನಮ್ಮ ಪಿಸಿಸಿ ಅಧ್ಯಕ್ಷರು ಕರೆ ಮಾಡಿ ನಮ್ಮ ಶಾಸಕರು ಬರುತ್ತಿದ್ದಾರೆ ಎಂದು ಕೇಳಿದ್ದರು. ಪಕ್ಷದ ವಿಚಾರ ಇರಬೇಕು, ನಾನೇ ಹೋಗಿ ಭೇಟಿ ಮಾಡುವೆ ಎಂದು ಹೇಳಿದಂತೆ ಮಾಡಿರುವೆ ಎಂದಿದ್ದಾರೆ.

### ಎಲ್ಲೆಡೆಯೂ ಇದು ಸಹಜ

ಎಲ್ಲಾ ರಾಜ್ಯಗಳಲ್ಲೂ ಈ ರೀತಿ ನಡೆಯುತ್ತದೆ. ಇದು ಹೊಸತೇನಲ್ಲ. ನನ್ನ ಭೇಟಿಗೆ ಸಮಯ ಕೇಳಿದ್ದರು. ಅಧಿವೇಶನ ನಡೆಯುತ್ತಿದೆ. ಇಲ್ಲಿಗೆ ಬರಬೇಡಿ ಕಲಾಪ ಮುಗಿಸಿಕೊಂಡು ನಾನೇ ಬರುತ್ತೇನೆ ಎಂದಿದ್ದೆ. ಬೆಂಗಳೂರು ಸುರಕ್ಷಿತ ಹೀಗಾಗಿ ಅವರು ಇಲ್ಲಿಗೆ ಬಂದು ವೀಕ್ಷಣೆ ಮಾಡಬೇಕು ಎಂದು ಹೇಳಿದರು, ನಾನು ಅವರನ್ನು ಭೇಟಿಯಾಗಿಲ್ಲ. ಅವರು ನಮ್ಮ ಸಹೋದ್ಯೋಗಿಗಳು, ಅವರು ಬರುತ್ತಾರೆ ಎಂದು ಡಿಕೆಶಿ ವಿವರಿಸಿದ್ದಾರೆ.

## ಸ್ಟಾಕ್ ಕೊರತೆ, ಹೋಟೆಲ್‌ಗೆ ಗ್ಯಾಸ್ ಇಲ್ಲ..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಪರಿಸ್ಥಿತಿ ಅನಿವಾರ್ಯವಾಗಿದ್ದು ಸ್ಟಾಕ್ ಲಭ್ಯವಿಲ್ಲದ ಕಾರಣ ಕನಿಷ್ಠ ಒಂದು ವಾರ ಹೋಟೆಲ್‌ಗಳಿಗೆ ವಾಣಿಜ್ಯ ಸಿಲಿಂಡರ್‌ಗಳನ್ನು ಪೂರೈಸುವುದು ಸಾಧ್ಯವಿಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್ ಮುನಿಯಪ್ಪ ತಿಳಿಸಿದ್ದಾರೆ.



ಕರ್ನಾಟಕ ವಿಧಾನಪರಿಷತ್ತಿನ ಶೂನ್ಯ ಸಮಯದಲ್ಲಿದಲ್ಲಿ ಸಿಲಿಂಡರ್‌ಗಳ ಪೂರೈಕೆಯಲ್ಲಿನ ಅಡಚಣೆಯ ಕುರಿತು ಸದಸ್ಯ ಎಂ. ನಾಗರಾಜು ಮತ್ತು ಇವಾನ್ ಡಿಸೋಜಾ ಅವರ ಪ್ರಶ್ನೆಗಳಿಗೆ ಉತ್ತರಿಸಿ, ಗ್ಯಾಸ್ ಕೊರತೆಯಿಂದಾಗಿ ಹೋಟೆಲ್‌ಗಳ ಮೇಲೆ ಪರಿಣಾಮ ಬೀರಿದೆ. ಕೆಲವು ಹೋಟೆಲ್‌ಗಳು ಸ್ಥಗಿತಗೊಂಡಿವೆ. ಇನ್ನೂ ಹಲವು ಹೋಟೆಲ್‌ಗಳು ಮೆನು ಕಡಿತಗೊಳಿಸಿವೆ. ಪಿಜಿ ವಸತಿಗಳಲ್ಲಿ ಆಹಾರ ತಯಾರಿಕೆ, ದೇವಾಲಯಗಳಲ್ಲಿ ಪ್ರಸಾದ ವಿತರಣೆ ಮತ್ತು ಆಟೋಗಳ ಕಾರ್ಯಾಚರಣೆಗೆ ಅಡ್ಡಿಯಾಗಿದೆ ಎಂದು ನಾಗರಾಜು ಮತ್ತು ಇವಾನ್ ಡಿಸೋಜಾ ಪ್ರಸ್ತಾಪಿಸಿದ್ದರು.

## ಬಿಜೆಪಿ ರಾಜ್ಯ ಕೋರ್ ಕಮಿಟಿ ವಿಶೇಷ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರ ನೇತೃತ್ವದಲ್ಲಿ ರಾಜ್ಯ ಕೋರ್ ಕಮಿಟಿ ಸಭೆ ನಡೆಯಿತು.

ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆ ಹಾಗೂ ಕಾಂಗ್ರೆಸ್ ಸರ್ಕಾರದ ನೀತಿ, ಅದರ ವರಸೆಗಳ ಬಗ್ಗೆ ಸೂಕ್ತವಾಗಿ ಚರ್ಚಿಸಲಾಯಿತು ಎಂದು ಮೂಲಗಳು ಖಚಿತಪಡಿಸಿವೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ,



ಕರ್ನಾಟಕ ರಾಜ್ಯ ಉಸ್ತುವಾರಿ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಡಾ. ರಾಧಾಮೋಹನ್ ದಾಸ್ ಅಗ್ರವಾಲ್, ಮಾಜಿ ಮುಖ್ಯಮಂತ್ರಿ ಮತ್ತು ಸಂಸದ ಬಸವರಾಜ ಬೊಮ್ಮಾಯಿ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಇನ್ನಿತರರಿದ್ದರು.

## ಕೆಮಿಕಲ್ ಕಾರ್ಖಾನೆ ದುರ್ವಾಸನೆ, ಜನರ ಬೇನೆ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಹುಮ್ನಾಬಾದ್–ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಮಿಕಲ್ ಕಾರ್ಖಾನೆಗಳಿಂದ ಹೊರಬರುತ್ತಿರುವ ತೀವ್ರ ದುರವಾಸನೆಯಿಂದ ಸ್ಥಳೀಯ ಜನತೆ ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಕಾರ್ಖಾನೆಗಳಿಂದ ಹೊರಬರುವ ರಾಸಾಯನಿಕ ವಾಸನೆಗೆ ನಾಗರಿಕರು ವಿವಿಧ ಬೇನೆಗಳಿಂದ ನರಳುತ್ತಿದ್ದಾರೆ. ರಾತ್ರಿ ಸಮಯದಲ್ಲಿ ಹೆಚ್ಚು ತೀವ್ರವಾಗಿದ್ದು, ಜನರು ಉಸಿರಾಟದ ತೊಂದರೆ, ಕಣ್ಣು ಉರಿ, ತಲೆನೋವು ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದು ನಿವಾಸಿಗಳು ದೂರಿದ್ದಾರೆ.

ಗ್ರಾಮದ ಜನರು ಹಲವು ಬಾರಿ ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಿದರೂ ಯಾವುದೇ ಶಾಶ್ವತ ಕ್ರಮ ಕೈಗೊಳ್ಳಲಾಗಿಲ್ಲ ಎಂಬ ಆಕ್ರೋಶ ವ್ಯಕ್ತವಾಗುತ್ತಿದೆ.



### ಮಾಲಿನ್ಯ ನಿಯಂತ್ರಣ ಮಂಡಳಿ ಎಲ್ಲಿದೆ..?

ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಎಲ್ಲಿದೆ..? ಅದರ ಕಾರ್ಯವೇನು? ಸ್ಥಳೀಯ ಆಡಳಿತ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸಮಸ್ಯೆಗೆ ಪರಿಹಾರ ಕಂಡುಹಿಡಿಯಬೇಕು ಎಂದು ಆಗ್ರಹಿಸಿದ್ದಾರೆ. ಈ ಸಮಸ್ಯೆ ಮುಂದುವರಿದರೆ ಜನರು ಪ್ರತಿಭಟನೆಗೆ ಮುಂದಾಗಬೇಕಾಗುತ್ತದೆ ಎಂದು ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ. ಸಾರ್ವಜನಿಕರ ಆರೋಗ್ಯ ಹಾಗೂ ಪರಿಸರದ ರಕ್ಷಣೆಯ ದೃಷ್ಟಿಯಿಂದ ಸರ್ಕಾರ ಮತ್ತು ಸಂಬಂಧಿಸಿದ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳುವುದು ಅಗತ್ಯವಾಗಿದೆ.

ಕೆಮಿಕಲ್ ಕಾರ್ಖಾನೆಗಳಿಂದ ಹೊರಬರುವ ಹೊಗೆ ಮತ್ತು ದುರ್ವಾಸನೆ ಪರಿಸರಕ್ಕೂ ಹಾನಿಯಾಗುವ ಸಾಧ್ಯತೆ ಇದೆ ಎಂದು ಪರಿಸರ ಪ್ರೇಮಿಗಳು ಎಚ್ಚರಿಸಿದ್ದಾರೆ. ಕಾರ್ಖಾನೆಗಳಲ್ಲಿ ಸರಿಯಾದ ಮಾಲಿನ್ಯ ನಿಯಂತ್ರಣ ವ್ಯವಸ್ಥೆ ಅಳವಡಿಸಿರುವುದೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು.

–ಹೆಸರು ಹೇಳಲು ಇಚ್ಛಿಸದ ಸ್ಥಳೀಯರು

## ಮಹಿಳೆಯರ ಕೊಡುಗೆ ಅನನ್ಯ



• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರಾರಸಾನಿಗಮದ ಕೇಂದ್ರ ಕಚೇರಿಯಲ್ಲಿ ಸಚಿವ ರಾಮಲಿಂಗಾರೆಡ್ಡಿ ಅವರು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ನೂತನ 45 ಕರ್ನಾಟಕ ಸಾರಿಗೆ ಹಾಗೂ 70 ಪಲ್ಲಕ್ಕಿ ಬಸ್‌ಗಳಿಗೆ ಚಾಲನೆ ನೀಡಿದ್ದಾರೆ. ಬಳಿಕ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವ, ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಪ್ರತಿ ವರ್ಷ ಮಾ. 8ರಂದು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರು ನೀಡಿರುವ ಮಹತ್ವದ ಕೊಡುಗೆಗಳನ್ನು ಸ್ಮರಿಸುವುದು, ಅವರ ಹಕ್ಕುಗಳು, ಸಮಾನತೆ, ಗೌರವವನ್ನು ಉತ್ತೇಜಿಸುವುದು ಈ ದಿನದ ಉದ್ದೇಶ ಎಂದು ಹೇಳಿದ್ದಾರೆ. ಕುಟುಂಬ, ಶಿಕ್ಷಣ, ವಿಜ್ಞಾನ, ಸಾಮಾಜಿಕ, ರಾಜಕೀಯ, ಆರ್ಥಿಕತೆ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ಮಹಿಳೆಯರು ಮಹತ್ತರ ಸಾಧನೆಗಳನ್ನು ಮಾಡುತ್ತಿದ್ದಾರೆ. ಮಹಿಳೆಯರ ಸಬಲೀಕರಣವು ಸಮಾಜದ ಅಭಿವೃದ್ಧಿಗೆ ಅತ್ಯಂತ ಎಂದು ತಿಳಿಸಿದ್ದಾರೆ.

### ಸಚಿವರಿಂದ ಬಸ್‌ಗಳಿಗೆ ಚಾಲನೆ

70 ಹವಾನಿಯಂತ್ರಣ ರಹಿತ ಸ್ಲೀಪರ್ ಪಲ್ಲಕ್ಕಿ ಬಸ್ಸು ಹಾಗೂ 45 ಕರ್ನಾಟಕ ಸಾರಿಗೆ ಬಸ್ಸುಗಳಿಗೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು ಚಾಲನೆ ನೀಡಿದ್ದಾರೆ.

**ಪೆಟ್ರೋಲ್, ಡೀಸೆಲ್, ಅಡುಗೆ ಅನಿಲಕ್ಕೆ ಕೊರತೆ ಇಲ್ಲ. ಜನರನ್ನು ದಾರಿ ತಪ್ಪಿಸುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ: ಪ್ರಲ್ಹಾದ್ ಜೋಶಿ ಆರೋಪ**

# ಕೃಷಿ ಕ್ಷೇತ್ರದಲ್ಲಿ ಮಹಿಳೆಯರ ಪಾತ್ರ ಅನನ್ಯ: ಚಂದ್ರಕಾಂತ




• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಮದನೂರು ಗ್ರಾಮದಲ್ಲಿ ಕೃಷಿ ವಿಜ್ಞಾನ ಕೇಂದ್ರ ಬೀದರ್ ಹಾಗೂ ಸ್ವಯಂ ಶಿಕ್ಷಣ ಪ್ರಯೋಗ (ಎಸ್. ಎಸ್. ಪಿ) ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಕೃಷಿ ವಿಜ್ಞಾನ ಚಂದ್ರಕಾಂತ ಅವರು ಮಾತನಾಡಿ,ದೇಶದ ಆಹಾರ ಭದ್ರತೆಯಲ್ಲಿ ಮಹಿಳೆಯರ ಕೊಡುಗೆ ದೊಡ್ಡದಿದೆ. ಮಹಿಳಾ ರೈತರು ಕೃಷಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವುದರ ಜೊತೆಗೆ ಮಣ್ಣಿನ ಆರೋಗ್ಯದ ಕಡೆಗೂ ಗಮನ ಹರಿಸಬೇಕು. ಪ್ರತಿವರ್ಷ ಮಣ್ಣು ಪರೀಕ್ಷೆ ಮಾಡಿಸುವುದರಿಂದ ಸಮತೋಲಿತ ಗೊಬ್ಬರ ಬಳಕೆ ಮಾಡಲು ಮತ್ತು ಖರ್ಚು ಕಡಿಮೆ ಮಾಡಲು ಸಾಧ್ಯ, ಎಂದು ಮಣ್ಣು ಪರೀಕ್ಷೆಯ ಮಹತ್ವವನ್ನು ಮನವರಿಕೆ ಮಾಡಿಕೊಟ್ಟರು.

ಇನ್ನೊರ್ವ ತಜ್ಞರಾದ ಶಿವಕುಮಾರ ಅವರು ಮಾತನಾಡಿ, ತರಕಾರಿ ಬೆಳೆಗಳ ನಿರ್ವಹಣೆಯ ಕುರಿತು ಮಾಹಿತಿ ನೀಡಿ, ಬೆಳೆಗಳಿಗೆ ತಗಲುವ ವಿವಿಧ ರೋಗಗಳು ಮತ್ತು ಕೀಟ ಬಾಧೆಗಳನ್ನು ಆರಂಭಿಕ ಹಂತದಲ್ಲೇ ಗುರುತಿಸಿ, ವೈಜ್ಞಾನಿಕ ಕ್ರಮಗಳ ಮೂಲಕ ಹೇಗೆ ನಿಯಂತ್ರಿಸಬಹುದದರು.

ಸ್ವಯಂ ಶಿಕ್ಷಣ ಪ್ರಯೋಗ ಸಂಸ್ಥೆಯ ಪ್ರತಿನಿಧಿ ಪ್ರೀತಿ ಶಿರಸಾಟ ಅವರು 2026ರ ಮಹಿಳಾ ದಿನದ ಜಾಗತಿಕ ಅಭಿಯಾನದ ಥೀಮ್ ಆದ "Give to Gain" (ಪಡೆಯಲು ನೀಡಿರಿ) ಕುರಿತು ವಿವರಿಸಿದರು. "ಮಹಿಳೆಯರಿಗೆ ಶಿಕ್ಷಣ, ಸಮಾನ ಅವಕಾಶ ಮತ್ತು ಆರ್ಥಿಕ ಸ್ವಾತಂತ್ರ್ಯವನ್ನು ನೀಡಿದಾಗ ಮಾತ್ರ ಸಮಾಜವು ಪ್ರಗತಿ ಹೊಂದಲು ಸಾಧ್ಯ. ಜ್ಞಾನ ಮತ್ತು ಸಂಪನ್ಮೂಲಗಳನ್ನು ಹಂಚಿಕೊಳ್ಳುವ ಮೂಲಕ ಮಹಿಳೆಯರನ್ನು ಶಕ್ತಿವಂತರನ್ನಾಗಿ ಮಾಡುವುದು ಈ ವರ್ಷದ ಗುರಿಯಾಗಿದೆ," ಎಂದು ಅವರು ತಿಳಿಸಿದರು.ಈ ಸಂದರ್ಭದಲ್ಲಿ ಮದನೂರ ಮತ್ತು ಸುತ್ತ ಮುತ್ತಲಿನ ಮಹಿಳೆಯರು ಕಾರ್ಯಕ್ರಮದ ಲಾಭವನ್ನು ಪಡೆದುಕೊಂಡರು.

# ವೈಭವದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಬೀದರ ವಿಶ್ವವಿದ್ಯಾಲಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಶುಕ್ರವಾರ ವೈಭವದಿಂದ ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಿ.ಎಸ್.ಬಿರಾದಾರ ಅವರು ವಹಿಸಿದ್ದರು.ಮುಖ್ಯ ಅತಿಥಿಗಳಾಗಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಕಲಬುರಗಿಯ ಉಪ ಕಾರ್ಯದರ್ಶಿಗಳಾದ ಸುರೇಖಾ ಕೆ.ಎ.ಎಸ್. ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಸಮಾಜದಲ್ಲಿ ಮಹಿಳೆಯರ ಪಾತ್ರ ಮತ್ತು ಸಾಧನೆಯ ಮಹತ್ವವನ್ನು ವಿವರಿಸಿದರು. ಮಹಿಳೆಯರು ಶಿಕ್ಷಣ, ಉದ್ಯೋಗ ಹಾಗೂ ವಿವಿಧ ಸಾಮಾಜಿಕ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದು, ಅವರ ಸಬಲೀಕರಣದಿಂದ ಸಮಾಜದ ಸಮಗ್ರ ಅಭಿವೃದ್ಧಿ ಸಾಧ್ಯವೆಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ,ಬೆಂಗಳೂರು ಅಧ್ಯಕ್ಷರಾದ ಶ್ರೀಮತಿ ಶಕುಂತಲಾ ಕಾಶಿನಾಥ ಬೆಳದಾಳೆ ಅವರು ಮಾತನಾಡಿ, ಮಹಿಳೆಯರು ಧೈರ್ಯ ಮತ್ತು ಆತ್ಮವಿಶ್ವಾಸದಿಂದ ಸಮಾಜದಲ್ಲಿ ಮುನ್ನಡೆಯುವಾಗ ದೇಶವೂ ದೃಢವಾಗಿ ಬೆಳೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಬೀದರ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ನಾಗಭೂಷಣ ಕಮಠಾಣೆ, ಶಾಂತಲಿಂಗ ಸಾವಳಗಿ, ವಿಠಲ್‌ದಾಸ್ ಪ್ಯಾಗೆ ಹಾಗೂ ಅಬ್ದುಲ್ ಸತ್ತಾರ್ ಅವರು ಗೌರವ ಉಪಸ್ಥಿತಿ ನೀಡಿದರು.

ಮಹಿಳಾ ದಿನಾಚರಣೆ ಅಂಗವಾಗಿ ವಿವಿಧ ಸ್ಪರ್ಧೆಗಳಾದ ಗುಂಡು ಎಸೆತ, ಲೆಮನ್ ಸ್ಪೂನ್, ತ್ರೋಬಾಲ್,

ಗಾಯನ, ರಂಗೋಲಿ ಸೇರಿದಂತೆ ಹಲವು ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಈ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದ ಅತಿಥಿಗಳಿಂದ ಬಹುಮಾನಗಳನ್ನು ವಿತರಿಸಲಾಯಿತು.ಕಾರ್ಯಕ್ರಮಕ್ಕೆ ಆಗಮಿಸಿದ ಅತಿಥಿಗಳನ್ನು ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ.ಪರಮೇಶ್ವರ ನಾಯ್ಕ ಅವರು ಸ್ವಾಗತಿಸಿದರು.ಕಾರ್ಯಕ್ರಮವನ್ನು ಡಾ.ಅಂಬರೀಷ್ ವೀರನಾಯಕ ಅವರು ನಿರೂಪಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ವಿಶ್ವವಿದ್ಯಾಲಯದ ವಿಶೇಷ ಅಧಿಕಾರಿಗಳಾದ ಡಾ.ರವೀಂದ್ರ ಗಬಾಡೆ ಅವರು ವಂದನಾರ್ಪಣೆ ಸಲ್ಲಿಸಿದರು.ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು,ಅಧ್ಯಾಪಕರು ಹಾಗೂ ಸಿಬ್ಬಂದಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
ಪ್ರಧಾನ ಸಂಪಾದಕರು
ಮೋ: 9845028349

## ಕಾಡು ಪ್ರಾಣಿಗಳ ಕಾಟ ರೈತರ ರಕ್ಷಣೆಗೆ ಸರ್ಕಾರ ಮುಂದಾಗಲಿ

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ರೈತರು ಇಂದು ಎದುರಿಸುತ್ತಿರುವ ದೊಡ್ಡ ಸಮಸ್ಯೆಯೊಂದಾಗಿದೆ ಕಾಡು ಹಂದಿಗಳು ಹಾಗೂ ಕೋತಿಗಳ ಕಾಟ. ಬೀಜ ಬಿತ್ತುವ ಹಂತದಿಂದ ಹಿಡಿದು ಬೆಳೆ ಕೊಯ್ಲಿನವರೆಗೆ ಈ ಪ್ರಾಣಿಗಳು ಹೊಲಗಳಿಗೆ ನುಗ್ಗಿ ಬೆಳೆಗಳನ್ನು ಹಾನಿಗೊಳಿಸುತ್ತಿವೆ. ಇದರಿಂದ ರೈತರು ಅಪಾರ ನಷ್ಟ ಅನುಭವಿಸುತ್ತಿದ್ದು, ಅವರ ಕಷ್ಟದ ಪರಿಶ್ರಮ ವ್ಯರ್ಥವಾಗುತ್ತಿದೆ.

ಇತ್ತೀಚಿನ ದಿನಗಳಲ್ಲಿ ಕಾಡು ಹಂದಿಗಳು ಮತ್ತು ಕೋತಿಗಳ ಸಂಖ್ಯೆ ಹೆಚ್ಚಾಗುತ್ತಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ. ರೈತರು ತಮ್ಮ ಹೊಲಗಳನ್ನು ಕಾಯಲು ರಾತ್ರಿ ದಿನ ಕಾವಲು ಕಾಯಬೇಕಾದ ಪರಿಸ್ಥಿತಿ ಉಂಟಾಗಿದೆ. ತಡೆಯಲು ವಿವಿಧ ವಿಧಾನಗಳನ್ನು ಪ್ರಯೋಗಿಸಿದರೂ ಕೂಡ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗುತ್ತಿಲ್ಲ.

ಈ ಸಮಸ್ಯೆಯನ್ನು ಸರ್ಕಾರ ಮತ್ತು ಸಂಬಂಧಿಸಿದ ಇಲಾಖೆಗಳು ಗಂಭೀರವಾಗಿ ಪರಿಗಣಿಸಬೇಕಾಗಿದೆ. ಅರಣ್ಯ ಇಲಾಖೆ ಹಾಗೂ ಕೃಷಿ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸಿ ರೈತರ ಬೆಳೆಗಳನ್ನು ರಕ್ಷಿಸುವ ಕ್ರಮಗಳನ್ನು ಕೈಗೊಳ್ಳಬೇಕು. ಅಗತ್ಯವಿದ್ದರೆ ರೈತರಿಗೆ ಪರಿಹಾರ ಧನ ನೀಡುವ ವ್ಯವಸ್ಥೆಯೂ ಮಾಡಬೇಕು.

ಇಂದು ರೈತರು ದೇಶದ ಅಸ್ತಿತ್ವದ ಆಧಾರವಾಗಿದ್ದಾರೆ. ಅವರ ಬೆಳೆಗಳು ಸುರಕ್ಷಿತವಾಗಿದ್ದಾಗ ಮಾತ್ರ ಆಹಾರ ಭದ್ರತೆ ಸಾಧ್ಯ. ಆದ್ದರಿಂದ ಸರ್ಕಾರ ಉಚಿತ ಯೋಜನೆಗಳ ಮೇಲೆ ಮಾತ್ರ ಗಮನ ಹರಿಸುವುದಕ್ಕಿಂತ, ರೈತರ ಇಂತಹ ಮೂಲಭೂತ ಸಮಸ್ಯೆಗಳ ಪರಿಹಾರಕ್ಕೂ ಆದ್ಯತೆ ನೀಡಬೇಕು.

ರೈತರ ಕಷ್ಟಕ್ಕೆ ಸ್ಪಂದಿಸಿ ಕಾಡು ಪ್ರಾಣಿಗಳ ಕಾಟಕ್ಕೆ ಶಾಶ್ವತ ಪರಿಹಾರ ಕಂಡುಹಿಡಿಯುವುದು ಸರ್ಕಾರದ ತುರ್ತು ಕರ್ತವ್ಯವಾಗಿದೆ.

# ಮಾ.18 ರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ

ಮಲ್ಲಮ್ಮ ನುಡಿ ವಾರ್ತೆಬೀದರ

**ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಆದೇಶ**

ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ಮಾರ್ಚ್.18 ರಿಂದ ಏಪ್ರಿಲ್.2 ರವರೆಗೆ ಬೀದರ್ ಜಿಲ್ಲೆಯ ಒಟ್ಟು 94 ಪರಿಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಯನ್ನು ಅತ್ಯಂತ ಪರಿಣಾಮಕಾರಿಯಾಗಿ ಹಾಗೂ ದೋಷರಹಿತವಾಗಿ ನಡೆಸಲು ಹಾಗೂ ಪರೀಕ್ಷಾ ಕೇಂದ್ರಗಳಲ್ಲಿ ಅಹಿತಕರ ಘಟನೆಗಳು ನಡೆಯದಂತೆ ಶಾಂತ ವಾತಾವರಣದಲ್ಲಿ ನಡೆಸುವ ಹಿನ್ನಲೆಯಲ್ಲಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ–2023 ರ ಕಲಂ 163 (1) ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸದರಿ ಪರೀಕ್ಷೆಯ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶದಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಆದೇಶಿಸಿದ್ದಾರೆ.ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿಯಲ್ಲಿ ಝಿರಾಕ್ಸ್, ಕಂಪ್ಯೂಟರ್ ಅಂಗಡಿಗಳು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಪತ್ರ ಹೊಂದಿದ ವಿದ್ಯಾರ್ಥಿಗಳು, ನಿಯೋಜಿತ ಶಿಕ್ಷಕರು, ಜಾಗೃತ ದಳದವರನ್ನು ಹೊರುತಪಡಿಸಿ ಇನ್ನುಳಿದವರಿಗೆ ಅನುಮತಿ ನಿಷೇಧಿಸಲಾಗಿದ್ದು, ಪರೀಕ್ಷಾ ಕೇಂದ್ರದ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದು, ನಕಲು ಮಾಡುವ ಸಾಮಗ್ರಿಗಳನ್ನು ಹಾಗೂ ಹೊರಗಿನಿಂದ ನಕಲು ಬರೆದ ಚೀಟಿಗಳನ್ನು ಪರೀಕ್ಷಾ ಕೇಂದ್ರಗಳಲ್ಲಿ ಪೂರೈಸುವುದು ನಿರ್ಬಂಧಿಸಲಾಗಿದೆ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ

# ಈಶ್ವರ ಖಂಡ್ರೆ ಅವರ ಬೀದರ್ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಮಾರ್ಚ.13 :– ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾರ್ಚ್.14 ಮತ್ತು 15 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಮಾರ್ಚ್.14 ರಂದು ಬೆಳಿಗ್ಗೆ 6 ಗಂಟೆಗೆ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಸ್ಟಾರ್ ಏರ್ ಎಸ್5–159 ವಿಮಾನದ ಮೂಲಕ ಹೊರಟು ಬೆಳಿಗ್ಗೆ 7.15ಕ್ಕೆ ಬೀದರ್ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದಾರೆ. ಬೆಳಿಗ್ಗೆ 8 ರಿಂದ ಬೆಳಿಗ್ಗೆ 10.55 ರವರೆಗೆ ಬೀದರ್ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಬೆಳಿಗ್ಗೆ 11ಕ್ಕೆ ಬೀದರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಬೇಸಿಗೆ ಎದುರಿಸಲು ಜಿಲ್ಲಾಡಳಿತದ ಪೂರ್ವ ತಯ್ಯಾರಿ ಕುರಿತು ಸಭೆ ನಡೆಸಲಿದ್ದಾರೆ. ಸಂಜೆ 5 ಗಂಟೆಗೆ ಬೀದರ್ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಸಂಜೆ 6 ಗಂಟೆಗೆ ಭಾಲ್ಕಿಯ ಕಾಲಿ ಮಜೀದನಲ್ಲಿ ಆಯೋಜಿಸಿರುವ ಇಫ್ತಾರ್ ಕೂಟದಲ್ಲಿ ಭಾಗವಹಿಸಲಿದ್ದಾರೆ. ನಂತರ ಭಾಲ್ಕಿಯಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ಮಾರ್ಚ್.15 ರಂದು ಬೆಳಿಗ್ಗೆ 9 ಗಂಟೆಗೆ ಭಾಲ್ಕಿ ರಸ್ತೆ ಮೂಲಕ ಬೀದರ್‌ಗೆ ಪ್ರಯಾಣಿಸಿ ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಬೀದರ್ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಸಂಜೆ 6 ಗಂಟೆಗೆ ಬೀದರ್ ರಸ್ತೆ ಮೂಲಕ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಮಾಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಕಮಠಾಣಾ ಉಪ–ವಿಭಾಗದ 110 ಕೆ.ವಿ. ಕೋಳಾರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ಕೆಲಸದ ನಿಮಿತ್ತ ಟ್ರಾನ್ಸಾರ್ಮರ್‌ಗಳ ಮೇಲೆ ದುರಸ್ತಿ ನಿರ್ವಹಣೆ ಕೈಗೊಳ್ಳುತ್ತಿರುವುದರಿಂದ 33ಕೆವಿ ಏರಫೋರ್ಸ ಫೀಡರ, 33ಕೆವಿ ಸಾಯಿ ಲೈಫ್ ಫೀಡರ, 33ಕೆವಿ ಬ್ಯಾಲಹಳ್ಳಿ ಫೀಡರ, 33ಕೆವಿ ಸಾಯಿ ಲೈಫ್ ಫೀಡರ, 33ಕೆವಿಕೆಐಎಡಿಬಿ ಫೀಡರ, 11ಕೆವಿ ಶಿವನಗರ (ನಗರ) ಎನ್‌ಜೆವಾಯ್, 11ಕೆವಿವಾಣಿ ಇಂಡಸ್ಟ್ರಿ, 11ಕೆವಿ ಭವಾನಿ ಇಂಡಸ್ಟ್ರಿ, 11ಕೆವಿ ಕೋಳಾರ ಎನ್‌ಜೆವಾಯ್ ಫೀಡರಗಳ ವ್ಯಾಪ್ತಿಗೆ ಬರುವ ಸುತ್ತಲಿನ ಗ್ರಾಮಗಳಾದ ಶಿವನಗರ, ಕೋಳಾರ ಮತ್ತು ಸುತ್ತಲಿನ ಗ್ರಾಮಗಳಿಗೆ ದಿನಾಂಕ:15–03–2026 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.

# ಅವೈಜ್ಞಾನಿಕ ಒಳಮೀಸಲಾತಿ ವಿರೋಧಿಸಿ 18 ರಂದು ಬೃಹತ್ ಪ್ರತಿಭಟನೆ



ಭಾಲ್ಕಿ: ಒಳ ಮೀಸಲಾತಿ ಹೆಸರಿನಲ್ಲಿ ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳಿಗೆ ನಡೆಯುತ್ತಿರುವ ಅನ್ಯಾಯ ವಿರೋಧಿಸಿ ಮಾ.18 ರಂದು ಎಲ್ಲಾ ಪರಿಶಿಷ್ಟ ಜಾತಿಗಳ ಒಕ್ಕೂಟದ ವತಿಯಿಂದ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಕನಾಟಕ ಮೀಸಲಾತಿ ಸಂರಕ್ಷಣಾ ಒಕ್ಕೂಟದ ಜಿಲ್ಲಾಧ್ಯಕ್ಷ ಎಮ್.ಪಿ.ರಾಠೋಡ್ ಮತ್ತು ಕಾರ್ಯದರ್ಶಿ ಸುರೇಶ ಹುಬಳಿಕರ್ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ಮೀಸಲಾತಿ ಸಂರಕ್ಷಣಾ ಒಕ್ಕೂಟದ ವತಿಯಿಂದ ಶುಕ್ರವಾರ ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ಭೋವಿ, ಲಮಾಣಿ, ಕೊರವ, ಕೊಂಚ, ಜಾಂಬವ, ವಡ್ಡರ, ಹೊಲೆಯ ಸೇರಿದಂತೆ 101 ಜಾತಿಗಳು ಪರಿಶಿಷ್ಟ ಜಾತಿಗಳ ಪಟ್ಟಿಯಲಿವೆ. ಆದರೆ ಕರ್ನಾಟಕ ರಾಜ್ಯದಲ್ಲಿ ಒಳಮೀಸಲಾತಿ ಹೆಸರಿನಲ್ಲಿ ಇತ್ತೀಚೆಗೆ ನಡೆದ ನೇಮಕಾತಿಗಳಲ್ಲಿ ಪರಿಶಿಷ್ಟ ಜಾತಿಗಳ ಪ್ರವರ್ಗ ಬಿ ಮತ್ತು ಪ್ರವರ್ಗ ಸಿ ಗುಂಪಿಗೆ ಶೂನ್ಯ ಹುದ್ದೆಗಳನ್ನು ಹಂಚಿಕೆ ಮಾಡಲಾಗಿದೆ. ಈ ಮೂಲಕ ಛಲವಾದಿ, ಬಂಜಾರ, ಭೋವಿ, ಕೊರಮ, ಕೊರಚ, ವಡ್ಡರ, ಕೊಂಚ, ಬುರುಬುರ ಪೋಚಮ್ಮ ಸೇರಿದಂತೆ 70ಕ್ಕೂ ಹೆಚ್ಚು ಜಾತಿಗಳಿಗೆ ಘೋರ ಅನ್ಯಾಯವಾಗಿದೆ. ಈ ಮೂಲಕ ಎಚ್ಚೆತ್ತುಕೊಂಡ ಸರ್ಕಾರ ಪರಿಶಿಷ್ಟ ಜಾತಿಗಳ ವರ್ಗೀಕರಣ ಕೈಬಿಟ್ಟು ಹಿಂದಿನ ನಿಯಮದಂತೆ ನೇಮಕಾತಿ ಅಧಿಸೂಚನೆ ಹೊರಡಿಸಲಾಗುವುದು ಎಂದು ರಾಜ್ಯ ಸರ್ಕಾರ ಘೋಷಣೆ ಮಾಡಿರುವುದು ಸ್ವಾಗತಾರ್ಹ. ತತ್ವರಿತವಾಗಿ ಹಿಂದಿನ ನಿಯಮದಂತೆ ನೇಮಕಾತಿ ಮತ್ತು ಶಿಕ್ಷಣ ಪ್ರವೇಶ ಪ್ರಕ್ರಿಯೆ ಪ್ರಾರಂಭಿಸಬೇಕು ಎಂದು ಒತ್ತಾಯಿಸಿದರು.

ಒಕ್ಕೂಟದ ಮುಖಂಡ ಸಂಜೀವ ಸಿಂಧೆ ಮಾತನಾಡಿ, ಮಾ.18 ರಂದು ನಡೆಯಲಿರುವ ಪ್ರತಿಭಟನಾ ಮೆರವಣಿಗೆಯು ಪಟ್ಟಣದ ಪಾಪವ್ವಾ ಚೌಕ ಮೂಲಕ ಪ್ರಾರಂಭವಾಗಿ, ಮಹಾತ್ಮಾಗಾಂಧಿ ವೃತ್ತ, ಅಂಬೇಡ್ಕರ್ ವೃತ್ತದ ಮೂಲಕ ಸಾಗಿ ತಹಸೀಲ ಕಚೇರಿಯಲ್ಲಿ ಸಮಾವೇಶಗೊಳ್ಳುವುದು. ನಂತರ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರ ಮೂಲಕ ಸಲ್ಲಿಸಲಾಗುವುದು ಎಂದು ಹೇಳಿದರು. ಕರ್ನಾಟಕ ಪ್ರದೇಶ ಬಂಜಾರಾ ಸೇವಾ ಸಂಘದ ಅಧ್ಯಕ್ಷ ವಿಲಾಸ ರಾಠೋಡ ಮಾತನಾಡಿ, ಪ್ರತಿಭಟನಾ ಮೆರವಣಿಗೆಯಲ್ಲಿ ಹಳ್ಳಿಗಳಿಂದಲೂ ಬಂಜಾರಾ ಸೇರಿದಂತೆ ಎಲ್ಲಾ ಸಮುದಾಯದ ಜನರು ಆಗಮಿಸುತ್ತಲಿದ್ದಾರೆ. ಹೀಗಾಗಿ ಪ್ರತಿಭಟನೆಯಲ್ಲಿ ಸುಮಾರು 5 ಸಾವಿರ ಜನರು ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಪ್ರದೇಶ ಬಂಜಾರಾ ಸೇವಾ ಸಂಘದ ಜಿಲ್ಲಾ ಉಪಾಧ್ಯಕ್ಷ ಸುಭಾಷ ಚವ್ಹಾಣ, ಸಂಘದ ತಾಲೂಕು ಅಧ್ಯಕ್ಷ ಸುಭಾಷ ಆಡೆ, ಭೊವಿ ವಡ್ಡರ ಸಮಾಜದ ರಾಜಕುಮಾರ ಸಿಂಧೆ, ವೆಂಕಟ ಸಿಂಧೆ, ದತ್ತು ಪವಾರ, ಪ್ರಕಾಶ ಸಂಪಂಗೆ, ಸುರೇಶ ಚವ್ಹಾಣ, ಚಂದು ಸಂಪಂಗೆ, ಸಂಜು ಸಿಂದೆ, ಪ್ರಮುಖರಾದ ಸಿದ್ದಪ್ಪ ಪೋಚಮ್ಮ, ಸಂತೋಷ ಮಾನೆ, ಪ್ರಕಾಶ ಯದವಾ, ಜಗನ್ನಾಥ ಸಂಪಂಗೆ, ಲಾಲು ರಾಮಲೆ, ರಂಗಲಾಲ ಜಾಧವ, ವಿಶ್ವನಾಥ ಸಂಪಂಗೆ, ನಾಗನಾಥ ಸಂಪಂಗೆ, ಸುನೀಲ ಬುಡ್ಡಣ್ಣ, ವಿಲಾಸ ರಾಠೋಡ, ಸುಭಾಷ ರಾಠೋಡ, ಮಾನಾಜಿ ಚವ್ಹಾಣ, ವಿಜಯಕುಮಾರ ಜಾಧವ, ಸಂತೋಷ ಮಾನೆ, ಮುಕೇಶ ಚವ್ಹಾಣ, ಬಸವರಾಜ ಸಂಪಂಗೆ, ವಿಶ್ವನಾಥ ಸಂಪಂಗೆ, ಸಂತೋಷ ಮಾನೆ, ಬಾಲಾಜಿ ಜಾಧವ, ದಿಲೀಪ ಜೈವಂತರಾವ ಸೇರಿದಂತೆ ಹಲವರು ಇದ್ದರು.

# ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮ ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ




ಭಾಲ್ಕಿಯ ಖಡಕೇಶ್ವರ ಪ್ರೌಢ ಶಾಲೆಯಲ್ಲಿ ನಡೆದ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಹುಲಸೂರು ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಮಲ್ಲಿಕಾರ್ಜುನ ಕಾಂಬಳೆ ಮಾತನಾಡಿದರು. ಅಶೋಕ ಲೋಖಂಡೆ, ಪ್ರಭುರಾಜ ಧೂಪೆ, ಆನಂದ ಕಲ್ಯಾಣೆ, ಶಿವಲಿಂಗ ಕುಂಬಾರ ಇದ್ದರು.

ಭಾಲ್ಕಿ, ಎಸ್ಸೆಸ್ಸೆಲ್ಸಿ ಪರೀಕ್ಷೆ ಆರಂಭಕ್ಕೆ ದಿನಗಣನೆ ಶುರುವಾಗಿದ್ದು ವಿದ್ಯಾರ್ಥಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಆತ್ಮವಿಶ್ವಾಸ ಮತ್ತು ಧೈರ್ಯದಿಂದ ಪರೀಕ್ಷೆ ಎದುರಿಸಿ ಯಶಸ್ಸು ಕಂಡುಕೊಳ್ಳಬೇಕು ಎಂದು ಹುಲಸೂರು ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಮಲ್ಲಿಕಾರ್ಜುನ ಕಾಂಬಳೆ ಹೇಳಿದರು.

ಪಟ್ಟಣದ ಲೆಕ್ಚರ್ ಕಾಲೋನಿಯ ಖಡಕೇಶ್ವರ ಪ್ರೌಢ ಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮವು ಅವರ ಮುಂದಿನ ಶೈಕ್ಷಣಿಕ ಪಯಣಕ್ಕೆ ಶುಭ ಹಾರೈಸುವ ಒಂದು ಭಾವುಕ ಮತ್ತು ಪ್ರೇರಣಾದಾಯಕ ಕಾರ್ಯಕ್ರಮವಾಗಿದೆ. ಇದು ವಿದ್ಯಾರ್ಥಿಗಳ ಸಾಧನೆಯನ್ನು ಗುರುತಿಸಲು, ಶಿಕ್ಷಕರ ಮಾರ್ಗದರ್ಶನ ನೆನೆಯಲು ಮತ್ತು ಪರೀಕ್ಷೆಗಳಿಗೆ ಆತ್ಮವಿಶ್ವಾಸದಿಂದ ಸಿದ್ಧರಾಗಲು ಪ್ರೋತ್ಸಾಹಿಸುವ ವೇದಿಕೆಯಾಗಿದೆ.

ವಿದ್ಯಾರ್ಥಿ ಜೀವನ ಬಂಗಾರವಿದ್ದಂತೆ ಅದಕ್ಕೆ ಪೂರಕವಾಗಿ ವಿದ್ಯಾರ್ಥಿಗಳು ನಿರಂತರವಾಗಿ ಅಭ್ಯಾಸ ಮಾಡಿ ಜ್ಞಾನ ಸಂಪಾದನೆ ಮಾಡಿದ್ದಲ್ಲಿ ನಿಶ್ಚಿತ ಗುರಿಯನ್ನು ಮುಟ್ಟಿ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಂಸ್ಥೆಯ ಕೋಶಾಧ್ಯಕ್ಷ ಪ್ರಭುರಾಜ ಧೂಪೆ ಮಾತನಾಡಿ, ವಿದ್ಯಾರ್ಥಿಗಳ ಮುಂದಿನ ಶೈಕ್ಷಣಕ ಜೀವನ ಉತ್ತಮವಾಗಿರಲಿ ಎಂದು ಹಾರೈಸಿದರು.

ಮುಖ್ಯಗುರು ಆನಂದ ಕಲ್ಯಾಣೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕ ಅಶೋಕ ಲೋಖಂಡೆ, ಸಂಸ್ಥೆಯ ಪ್ರಾಥಮಿಕ ವಿಭಾಗದ ಮುಖ್ಯಗುರು ಶಿವಲಿಂಗ ಕುಂಬಾರ, ರೇಖಿನಾಯಕ, ಉದಯ ಜೋಶಿ, ಶುಭಂ ರಾಯವಾಡೆ ಸೇರಿದಂತೆ ಹಲವರು ಇದ್ದರು. ಅಂಜಲಿ ಜೋಶಿ ಸ್ವಾಗತ ಗೀತೆ ಹಾಡಿದರು. ಜಯಪ್ರಕಾಶ ಸಹಾನೆ ಸ್ವಾಗತಿಸಿದರು. ಪ್ರಕಾಶ ರುದನೂರೆ ನಿರೂಪಿಸಿದರು. ದಿಲೀಪ ಘಂಟೆ ವಂದಿಸಿದರು.

## CITATION

**IN THE COURT OF THE I ADDL. J.M.F.C. AT KALABURAGI Crl. Misc. No. 5082/2025**

Basavaraj S/o Shivarudrappa Age: 60-years, Occ: Agriculture R/o H. No. 4/2, Tondkal village, Tq: & Dist: Kalaburagi

**..Petitioner**

**V/S**

**The Registrar Birth and Death**
**The Tahasildar Office, kalaburagi**
**. Respondent**
**PETITION U/SEC.13(3) OF R.B.D. ACT 1969**

To,

The all concerned, Whereas Basavaraj S/o Shivarudrappa petitioner was born on 05.03.1965 at the residence of H. No. 4/2, Tondkal village, Tq: & Dist: Kalaburagi, in the birth and death register in the Tahasildar Office, Kalaburagi.

Whereas if anybody has got any interest, in the matter he/she shall appear before this court on 28.04.2026 at about 11.00 a.m. either in person or through an advocate duly instructed enable to answer in the matter failing which the matter will be determined in merit basis.

Given under my hand and seal of this court this the 13th -2026.

Advocate for the petitioner.

**// By order of the Court //**
**Chief Ministerial Officer**
**I ADD. JMFC Court at KALABURAGI.**

## CITATION

**IN THE COURT OF THE PRL. CIVIL JUDGE AND JMFC., AT HUMNABAD. CRL. MISC. No.03/2026.**

**Petitioners:**

1. **Reeta W/o Jaikumar @ Jaibhima,** Age: 30-year, Occu: House hold.
2. **Sneha D/o Jaikumar @ Jaibhima.** Age: 05-year,
3. **Samarth S/o Jaikumar @ Jaibhima.** Age: 07-year,
4. **Mallikarjun S/o Jaikumar @ Jaibhima.** Age : 11-year,

Petitioner No.2 to 4 are minor childrens U/G their real Mother Petitioner No.1 All R/o Dongargaon. Dist. Kalaburagi. Now at Village Molkera, Tq. Humnabad.

**Respondent:**

The Registrar of Birth and Death through The Tahasildar Humnabad.

***Sub:- Petition U/Sec. 13(3) of Birth and Death Registration Act-1969***

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Husband of Petitioner No.1 and Father of petitioner No.2 to 4 by namely LATE. JAIKUMAR @ JAIBHIMA S/O MASTANAPPA, who was died on 02.01.2018 at Village Molkera. Tq. Humnabad. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 26.03.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 20-02-2026

**/ /By order of the court//**
**Chief Ministerial Officer, Pri. Civil Judge & JMFC Court, humnabad**

# ಕಲಾವಿದರ ಆಯ್ಕೆಗೆ ಅರ್ಹರಿಂದ ಅರ್ಜಿ ಆಹ್ವಾನ



• ಮಲ್ಲಮ್ಮ ನುಡಿವಾರ್ತೆ ಕೊಪ್ಪಳ

ಕಲ್ಯಾಣ ಎಂಬ 9 ಗಂಟೆಗಳ ಅಹೋರಾತ್ರಿ ನಾಟಕವನ್ನು ಸಿದ್ದಪಡಿಸಿ ನಾಡಿನಾದ್ಯಂತ ಪ್ರದರ್ಶನ ಮಾಡಲು ಕಲಾವಿದರ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ "ವಚನ ಕಲ್ಯಾಣ" ಎಂಬ ಅಹೋರಾತ್ರಿ ನಾಟಕವನ್ನು ಸಿದ್ದಪಡಿಸಿ ನಾಡಿನಾದ್ಯಂತ ಪ್ರದರ್ಶನ ಮಾಡಲು ಉದ್ದೇಶಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ನುರಿತ ಹಾಗೂ ಆಸಕ್ತ ಯುವಕ-ಯುವತಿಯರು ಮತ್ತು ಅನುಭವಿ ರಂಗ ಕಲಾವಿದರು ಅಥವಾ ಗಾಯಕರು ಅರ್ಜಿ ಸಲ್ಲಿಸಬಹುದು. ವಯೋಮಿತಿ 18 ರಿಂದ 40 ವರ್ಷಗಳ ರಂಗ ಶಿಕ್ಷಣದಲ್ಲಿ ತರಬೇತಿ ಪಡೆದ ಹಾಗೂ ನಾಟಕಗಳಲ್ಲಿ ಅಭಿನಯಿಸಿದ ಕಲಾವಿದರಿಗೆ ಆದ್ಯತೆಯನ್ನು ನೀಡಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳು 3 ತಿಂಗಳ ಕಾಲದ ಅವಧಿಯಲ್ಲಿ ಪೂರ್ಣಕಾಲಿಕವಾಗಿ ತರಬೇತಿ ಮತ್ತು ಪ್ರದರ್ಶನಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ. ಮಾಸಿಕ ಗೌರವ ಧನ ಮತ್ತು ಊಟ ವಸತಿ ವ್ಯವಸ್ಥೆಯನ್ನು ಮಾಡಲಾಗುವುದು. ಅರ್ಜಿ ನಮೂನೆಯನ್ನು ಇಲಾಖೆಯ ವೆಬ್ಸೈಟ್ ಏಚಿಟಿಟಚಿಜಚಿಡು.ಏಚಿಡಿಟಿಚಿಣಚಿಞಚಿ.ರಠಿತ.ಟಿ ನಲ್ಲಿ ಪಡೆಯಬಹುದು.

ಭರ್ತಿಮಾಡಿದ ಅರ್ಜಿಗಳನ್ನು ಮಾರ್ಚ್ 20 ರೊಳಗೆ ಸದಸ್ಯ ಕಾರ್ಯದರ್ಶಿ, ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ ಕಲಾಗ್ರಾಮ ಮಲ್ಲತಹಳ್ಳಿ ಬೆಂಗಳೂರು-560056, ಇಲ್ಲಿಗೆ ಅಂಚೆ ಮೂಲಕ ಅಥವಾ ಮುದ್ದಾಮ ತಲುಪುವಂತೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9448538620 ಗೆ ಸಂಪರ್ಕಿಸಬಹುದು ಎಂದು ಕೊಪ್ಪಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂಚ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರ ಬದುಕು ಸುಧಾರಣೆ: ಬಾಲಚಂದ್ರನ್

• ಮಲ್ಲಮ್ಮ ನುಡಿವಾರ್ತೆ ಕೊಪ್ಪಳ

ರಾಜ್ಯ ಸರ್ಕಾರವು ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳನ್ನು ಮಹಿಳೆಯರು ಬಹಳಷ್ಟು ಉಪಯೋಗ ಪಡೆದಿದ್ದು ಅವರ ಜೀವನಮಟ್ಟದಲ್ಲಿ ಸುಧಾರಣೆಯಾಗಿದೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ತಾಲೂಕ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಬಾಲಚಂದ್ರನ್ ಹೇಳಿದರು. ತಾಲೂಕ ಪಂಚಾಯತಿಯಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ನಿಮಿತ್ಯ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಮಹಿಳೆಯರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ರಾಜ್ಯ ಸರ್ಕಾರವು ಮಹಿಳೆಯರ, ಬಡವರ, ಯುವಕರ ಏಳಿಗೆಗಾಗಿ ಮತ್ತು ಅವರ ಜೀವನ ಮಟ್ಟ ಸುಧಾರಿಸಲು ಸರ್ಕಾರದ ಮಟ್ಟದಲ್ಲಿ ಅನೇಕ ವಿಚಾರಗಳನ್ನು ಒಗ್ಗೂಡಿಸಿಕೊಂಡು ಆ ಮೂಲಕ ಸರ್ಕಾರದಿಂದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಪಂಚ ಗ್ಯಾರಂಟಿ ಯೋಜನೆಗಳ ಪ್ರಯೋಜನೆ ಮತ್ತು ಅರ್ಹತೆಗಳು ಕುರಿತು ನಗರ ಹಾಗು ಗ್ರಾಮೀಣ ಮಟ್ಟದಲ್ಲಿ ಸಾಕಷ್ಟು ಜಾಗೃತಿ ಮೂಡಿಸಲಾಗಿದೆ. ಪಂಚ ಗ್ಯಾರಂಟಿ ಯೋಜನೆಗಳ ಲಾಭವನ್ನು ಬಹಳಷ್ಟು ಕುಟುಂಬಗಳು ಸದ್ಬಳಕೆ ಮಾಡಿಕೊಂಡು



ಆರ್ಥಿಕವಾಗಿ ಸಬಲರಾಗಿದ್ದಾರೆ. ಗೃಹಲಕ್ಷ್ಮೀ ಹಣದಿಂದ ಮಹಿಳೆಯರು ಆರ್ಥಿಕ ಚಟುವಟಿಕೆ, ನೀರಾವರಿಗಾಗಿ ಜಮೀನುಗಳಲ್ಲಿ ಕೊಳವೆ ಬಾವಿ ಕೊರೆಯಿಸಿದ್ದಾರೆ. ಜೆರಾಕ್ಸ ಅಂಗಡಿ, ಪಾನಶಾಪ್, ಹೋಟೆಲ್ ಅಂಗಡಿ, ಟೆಲರಿಂಗ್, ಹೈನುಗಾರಿಕೆ ಇತ್ಯಾದಿ ಆರ್ಥಿಕ ಚಟುವಟಿಕೆ ಕೈಗೊಳ್ಳಲು ಅನುಕೂಲವಾಗಿದೆ ಎಂದರು. ಪಂಚ ಗ್ಯಾರಂಟಿ ಯೋಜನೆಗಳ ಮೂಲ ಉದ್ದೇಶ ಗ್ರಾಮಿಣ ಹಾಗು ನಗರ ಪ್ರದೇಶದಲ್ಲಿನ ಎಲ್ಲಾ ವರ್ಗದ ಜನರಿಗೆ ಯೋಜನೆಗಳ ಲಾಭ ತಲುಪಿಸುವದಾಗಿದೆ. ಪ್ರಾಸ್ತಾವಿಕವಾಗಿ ತಾಲೂಕ ಅನುಷ್ಠಾನ ಸಮಿತಿ ಸದಸ್ಯ ಕಾರ್ಯದರ್ಶಿ ಹಾಗು ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ* ಮಾತನಾಡಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಸರ್ಕಾರದ ನಿರ್ಧಾರ ಶ್ಲಾಘನೀಯವಾಗಿದೆ ಎಂದರು. ಬಡವರ, ಮಧ್ಯಮವರ್ಗದವರ, ದೀನ ದುರ್ಬಲರಿಗೆ ಬಹಳಷ್ಟು ಅನುಕೂಲವಾಗಿದೆ ಎಂದರು. ಪ್ರತಿಯೊಂದು ಕುಟುಂಬವು ಈ ಪಂಚ ಗ್ಯಾರಂಟಿ ಯೋಜನೆಗಳ ಪ್ರಯೋಜನೆ ತಲುಪಲು ಅನುಷ್ಠಾನ ಅಧಿಕಾರಿಗಳ ಪಾತ್ರ ಬಹುಮುಖ್ಯವಾಗಿದೆ ಎಂದರು. ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ ಮಾತನಾಡಿ ಪ್ರತಿಯೊಂದು ಕುಟುಂಬವು ಸುಗಮವಾಗಿ ನಡೆಯುತ್ತಿದೆ ಎಂದರೆ ಅಲ್ಲಿ ಮಹಿಳೆಯ ಪಾತ್ರ ಪ್ರಮುಖವಾದದು. ಪ್ರತಿ ಮನೆಯಲ್ಲಿ ಮಹಿಳೆಯರನ್ನು ಗೌರವಿಸುವ ಮನೋಭಾವ ಎಲ್ಲರೂ ಬೆಳೆಸಿಕೊಳ್ಳಬೇಕು ಅಂ-ದಾಗ ಮಾತ್ರ ಮಹಿಳೆಗೆ ಉನ್ನತ ಸ್ಥಾನಮಾನಗಳು ದೊರೆಯುವದರಲ್ಲಿ ಸಂದೇಹವಿಲ್ಲವೆಂದರು.

ಮಹಿಳಾ ದಿನಾಚರಣೆಯ ಕುರಿತು ಪಂಚ ಗ್ಯಾರಂಟಿ ಯೋಜನೆಗಳ ಸಮಿತಿ ಸದಸ್ಯರಾದ ಜ್ಯೋತಿ ಗೊಂಡಬಾಳ ಹಾಗು ಪಂಚಾಯತ ಅಭಿವೃದ್ಧಿ ಅಧಿಕಾರಿ ಗೀತಾ ಕುಮಾರಿ, ಗ್ರಾಮ ಕಾಯಕ ಮಿತ್ರ ಯಮನಮ್ಮ ಪೂಜಾರ ಅನಿಸಿಕೆ ವ್ಯಕ್ತಪಡಿಸಿದರು.

*ಕೇಕ್ ಕತ್ತರಿಸಿ ಖುಷಿ ಪಟ್ಟ ಮಹಿಳೆಯರು:-*ಕಾರ್ಯಕ್ರಮದಲ್ಲಿ 05 ಕೆಜಿ ಕೇಕ್ ಕತ್ತರಿಸುವ ಮೂಲಕ ಕಾರ್ಯಕ್ರಮದಲ್ಲಿ ಹಾಜರಿದ್ದ ಎಲ್ಲಾ ಮಹಿಳೆಯರು ಖುಷಿ ಪಟ್ಟರು. ಮಹಿಳಾ ದಿನಾಚರಣೆ ಮೂಲಕ ಪಂಚ ಗ್ಯಾರಂಟಿ ಯೋಜನೆಗಳ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದಕ್ಕೆ ಎಲ್ಲರ ಮನದಲ್ಲಿ ಖುಷಿ ಮನೆ ಮಾಡಿತು. ಗೃಹಲಕ್ಷ್ಮೀ ಹಣದಿಂದ ಆರ್ಥಿಕ ಚಟುವಟಿಕೆಯಾದ ಬ್ಯಾಗ್ ತಯಾರಿಕೆ ಮೂಲಕ ಆರ್ಥಿಕ ಸಬಲರಾದ ಕೊಪ್ಪಳ ನಗರದ ಜರಿನಾ ಬೇಗಂ ಹಾಗು ತಮ್ಮ ಜಮೀನಿನಲ್ಲಿ ಕೊಳವೆ ಬಾವಿ ಕೊರೆಯಿಸಿ ಆ ಮೂಲಕ ನೀರಾವರಿ ಮೂಲಕ ವ್ಯವಸ್ಥಾಯ ಮಾಡುತ್ತಿರುವ ಹಟ್ಟಿ ಗ್ರಾಮದ ನಿಂಗಮ್ಮ ತಳವಾರ ಇವರಿಗೆ ಆತ್ಮೀಯವಾಗಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಅನುಷ್ಠಾನ ಅಧಿಕಾರಿಗಳು ತಮ್ಮ ಇಲಾಖೆಯಿಂದ ದೊರೆಯುವ ಪಂಚ ಗ್ಯಾರಂಟಿ ಯೋಜನೆಗಳ ವಿವರವಾದ ಮಾಹಿತಿಯನ್ನು ಕಾರ್ಯಕ್ರಮದಲ್ಲಿ ನೀಡಿದರು. ಕಾರ್ಯಕ್ರಮದಲ್ಲಿ ಅನುಷ್ಠಾನ ಸಮಿತಿ ಸದಸ್ಯರಾದ ದೇವರಾಜ ನಡುವಿನಮನಿ, ಮಾನ್ವಿ ಪಾಶಾ, ಅನ್ನದಾನಯ್ಯಸ್ವಾಮಿ, ಸವಿತಾ ಅಶೋಕ ಗೊರಂಟ್ಲಿ, ಪರಶುರಾಮ ಕೊರವರ, ಲಕ್ಷ್ಮಣ ಡೊಳ್ಳಿನ, ಜ್ಯೋತಿ ಗೊಂಡಬಾಳ, ರಾಮಣ್ಣ ಚೌಡ್ಕಿ, ಪಂಚ ಗ್ಯಾರಂಟಿ ಯೋಜನೆಗಳ ಇಲಾಖಾಧಿಕಾರಿಗಳು, ತಾಲೂಕ ಪಂಚಾಯತಿ ಹಾಗು ಗ್ರಾಮ ಪಂಚಾಯತಿಗಳ ಮಹಿಳಾ ಅಧಿಕಾರಿಗಳು, ಸಿಬ್ಬಂದಿಗಳು, ಸಂಜೀವಿನಿ ಯೋಜನೆಯ ತಾ.ಪಂ ಸಿಬ್ಬಂದಿ ಹಾಗು ಗ್ರಾ.ಪಂ ಮಟ್ಟದ ಹಾಗು ವಾರ್ಡ ಮಟ್ಟದ ಒಕ್ಕೂಟದ ಪದಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

# ಭಗವಾನ್ ಮಹಾವೀರ ಜಯಂತಿ ಮಾ.30ಕ್ಕೆ ಆಚರಿಸಲು ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಭಗವಾನ್ ಮಹಾವೀರ್ ಜಯಂತಿಯನ್ನು ಇದೇ ಮಾರ್ಚ 30 ರಂದು ವಿಜೃಂಭಣೆಯಿಂದ ಆಚರಿಸಲು ಜಿಲ್ಲಾಧಿಕಾರಿ ಕಚೇರಿಯ ಸಹಾಯಕರಾದ ಶಿವಪ್ರಭು ಹಿರೇಮಠ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ನಿರ್ಧರಿಸಲಾಯಿತು.

ಇತ್ತೀಚಿಗೆ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಇದೇ ಮಾರ್ಚ 30 ರಂದು ಮಂಗಳವಾರ ಮಧ್ಯಾಹ್ನ 2 ಗಂಟೆಗೆ ಕಲಬುರಗಿ ನಗರದ ಡಾ. ಎಸ್.ಎಂ ಪಂಡಿತ ರಂಗಮಂದಿರದಲ್ಲಿ ಭಗವನ್ ಮಹಾವೀರ್ ಅವರ ಜಯಂತಿ ಕಾರ್ಯಕ್ರಮ ಜರುಗಲಿದ್ದು, ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಸೂಚಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ಕಡ್ಡಾಯವಾಗಿ ಎಲ್ಲಾ ಜಿಲ್ಲಾ ಹಾಗೂ ತಾಲೂಕು ಮಟ್ಟದ ಸರ್ಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು.

ಸಭೆಯಲ್ಲಿ ನುರಿತ ಉಪನ್ಯಾಸಕರನ್ನು ಸಹ ಆಹ್ವಾನಿಸಲು ತೀರ್ಮಾನಿಸಲಾಯಿತು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜೊತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಚಂದ್ರಮೋಹನ್ ಎಚ್ ಶಹಾರನ್ನು ಜಯಂತಿ ಸಮಿತಿ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಅವರು ಪ್ರೋಟೋಕಾಲ್ ಪ್ರಕಾರ ಕಾರ್ಯಕ್ರಮ ಪತ್ರಿಕಾ ಆಮಂತ್ರಣ ಮುದ್ರಿಸಲಾಗುವುದು. ನಾಡಗೀತೆ, ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಮಹಾಂತೇಶ, ರಾಹುಲ್, ಪ್ರಕಾಶ್, ಇತರರು ಉಪಸ್ಥಿತರಿದ್ದರು.

# ಪತ್ರಕರ್ತರಿಂದ ಶಿಕ್ಷಕರಿಗೆ ಕಿರುಕುಳ ಕ್ರಮಕ್ಕೆ ಜಿಲ್ಲಾಧಿಕಾರಿಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಭಾಲ್ಕಿ ತಾಲೂಕಿನ ಗಡಿ ಭಾಗದ ಶಾಲೆಗಳ ಮುಖ್ಯಗುರುಗಳಿಗೆ ಹಣದ ಬೇಡಿಕೆ ಇಟ್ಟು ಕಿರುಕುಳ ನೀಡಲಾಗುತ್ತಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಸಂಬಂಧಿಸಿದ ವರದಿಗಾರರ ವಿರುದ್ಧ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಕರ್ನಾಟಕ ರಾಜ್ಯ ಭಾಷಾ ಅಲ್ಪಸಂಖ್ಯಾತ ಶಾಲಾ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮಾನ್ಯ ತಹಸೀಲ್ದಾರರು ಭಾಲ್ಕಿ ಅವರ ಮೂಲಕ ಜಿಲ್ಲಾಧಿಕಾರಿಗಳು ಹಾಗೂ ಬಸವಕಲ್ಯಾಣ ಸಹಾಯಕ ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಲಾಯಿತು. ಮನವಿಯಲ್ಲಿ ಹುಲಸುರ ತಾಲೂಕಿನ ಪ್ರಜಾವಾಣಿ ದಿನಪತ್ರಿಕೆಯ ವರದಿಗಾರ ಗುರು ಪ್ರಸಾದ್ ಮೆಂಟೆ ಅವರು ಗಡಿ ಭಾಗದ ಶಾಲೆಗಳಲ್ಲಿ ಸಣ್ಣಪುಟ್ಟ ವಿಷಯಗಳನ್ನು ನೆಪವಿಟ್ಟು ಮುಖ್ಯಗುರುಗಳಿಗೆ ಹಣದ ಬೇಡಿಕೆ ಇಟ್ಟು ಮಾನಸಿಕ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ಇತ್ತೀಚೆಗೆ ಗುಂಜರ್ಗ, ಬಸವನವಾಡಿ ಹಾಗೂ ಮಾನಿಕೇಶ್ವರ ಗ್ರಾಮಗಳ ಶಾಲೆಗಳಲ್ಲಿ ಮರಾಠಿ ಭಾಷಾ ಗೌರವ ದಿನ ಆಚರಣೆ ನಡೆಸಿದ ಹಿನ್ನೆಲೆಯಲ್ಲಿ ಮುಖ್ಯಗುರುಗಳಿಗೆ ಬೆದರಿಕೆ ಹಾಕಿ ಹಣದ ಬೇಡಿಕೆ ಇಟ್ಟಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಹಣ ನೀಡದಿದ್ದಲ್ಲಿ ತಪ್ಪು ವರದಿ ಪ್ರಕಟಿಸುವ ಮೂಲಕ ಒತ್ತಡ ಹೇರುತ್ತಿದ್ದಾರೆ ಎಂದು ದೂರಲಾಗಿದೆ.

ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ವರದಿಗಾರರ ವಿರುದ್ಧ ಸೂಕ್ತ ತನಿಖೆ ನಡೆಸಿ ಶಿಕ್ಷಕರಿಗೆ ಆಗುತ್ತಿರುವ ಕಿರುಕುಳವನ್ನು ತಡೆಯುವಂತೆ ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ದತ್ತಾತ್ರಿ ಕಾಟಕರ, ಸುಧಾಕರ ಗಾಯಕವಾಡ, ನಿರಂಜಪ್ಪ ಪಾತ್ರೆ, ಮಾತನಾಡಿದರು. ಅರವಿಂದ ಪಾಟೀಲ, ನೀಲಕಂಠ ಕುರುಣೆ, ನಾಗನಾಥ ಭೋಸಲೇ, ಸರಿತಾ, ಮಂಗಲಾ, ರಾಜಕುಮಾರ ಮಾನೆ, ಬಾಲಿಕಾ ಉಮಾಜಿ, ಅಶೋಕ ಬಿರಾದಾರ, ಸತ್ಯವಾನ ಕಾಂಬಳೆ, ಉಲ್ಲಾಸ ಕಾಂಬಳೆ, ಜ್ಞಾನೇಶ್ವರ ಬಿರಾದಾರ, ಮಹ್ಮದ ಗೌಸ್, ಮಹಾದೇವ ಸೂರ್ಯವಂಶಿ, ವಿನಾಯಕ ನಿಟ್ಟುರೇ, ಸೇರಿದಂತೆ ವಿವಿಧ ಶಿಕ್ಷಕರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ತಾಲೂಕಿನ ಅನೇಕ ಶಿಕ್ಷಕರು ಉಪಸ್ಥಿತರಿದ್ದರು.

# ಬಾಲ್ಯ ವಿವಾಹ ಪದ್ಧತಿ ನಿಷೇಧಿಸಬೇಕು: ಹುಲ್ಲೇಶ್

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಶಾಲಾ ಶಿಕ್ಷಣ ಇಲಾಖೆ ಹಾಗೂ ಕಲಿಕೆ ಟಾಟಾ ಟ್ರಸ್ಟ್ ಸಂಸ್ಥೆಯವರು ಹಲವಾರು ಕಾರ್ಯಕ್ರಮಳನ್ನು ಆಯೋಜಿಸುವ ಮೂಲಕ ಮಕ್ಕಳಲ್ಲಿ ಓದುವ ಹವ್ಯಾಸ ಮೂಡಿಸುತ್ತಿದ್ದಾರೆ. ಜೊತೆಗೆ ಬಾಲ್ಯ ವಿವಾಹ ಪದ್ಧತಿ ನಿಷೇಧವಾಗಬೇಕೆಂದು ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ. ಶಾಲೆ ಬಿಟ್ಟ ಮಕ್ಕಳನ್ನು ಶಾಲೆ ಸೇರಿಸುವ ಯೋಜನೆ ಹಮ್ಮಿಕೊಂಡಿದ್ದು ನಿಜಕ್ಕೂ ಸ್ತುತ್ಯವೆಂದು ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷ ಹುಲ್ಲೇಶ್ ಸಿಂದೋಗಿ ಹೇಳಿದರು.

ಜಿಲ್ಲೆಯ ಶಹಪುರ ಗ್ರಾಮದ ಕನಕ ಭವನದಲ್ಲಿ 'ರಂಗ ಕಲಾ ಚೇತನ'ತಂಡದಿಂದ ಹಮ್ಮಿಕೊಂಡಿದ್ದ ಸಮುದಾಯ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ,

ರಂಗಕಲಾ ಚೇತನ ತಂಡದವರು ಈ ಉತ್ತಮ ಕಾರ್ಯಕ್ರಮಗಳನ್ನು ಆಯೋಜನೆ ಮಾಡಿದ್ದು ಶ್ಲಾಘನೀಯ ಎಂದರು.

ಹುಲಿಗೆಮ್ಮ ಕಟ್ಟಿಮನಿ ಅವರು ಮಾತನಾಡಿ, ತಾಲೂಕಿನ ಆಯ್ದ ಶಾಲೆಗಳಲ್ಲಿ ಗ್ರಂಥಾಲಯ ಕೊಠಡಿ ನಿರ್ಮಿಸಿ, ಮಕ್ಕಳಿಗೆ ಕಲಿಕಾ ಸಾಮಗ್ರಿಗಳ ಜೊತೆಗೆ ಪ್ರೇರಕರನ್ನು ನೀಡಿ ಕಲಿಕಾಸಕ್ತಿ ಮೂಡಿಸಲು ಕಲಿಕಾ ಸಂಸ್ಥೆ ಶ್ರಮಿಸುತ್ತಿದೆ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಅರಿವು ಮೂಡಿಸುತ್ತಾ ಉತ್ತಮ ಸಮಾಜ ನಿರ್ಮಿಸಲು ಮುಂದಾಗಿದ್ದಾರೆ ಎಂದರು.

ಕಲಿಕೆ ಟಾಟಾ ಟ್ರಸ್ಟ್ ನ ಸಂಯೋಜಕ ಆಂಜನೇಯ ಮಾತನಾಡಿ, ಕಲಿಕಾ ಸಂಸ್ಥೆಯು ಸಮುದಾಯ ಕಾರ್ಯಕ್ರಮಗಳ ಮೂಲಕ ವಿದ್ಯಾರ್ಥಿಗಳು ಮತ್ತು ನಾಗರಿಕರಲ್ಲಿ ಜಾಗೃತಿ ಮೂಡಿಸುತ್ತಿದೆ ಎಂದು ತಮ್ಮ ಯೋಜನೆಗಳನ್ನು ಹಂಚಿಕೊಂಡರು.

ಜಿಲ್ಲಾ ಪಂಚಾಯತ್, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಿಕೆ ಟಾಟಾ ಟ್ರಸ್ಟ್ ಸಹಭಾಗಿತ್ವದಲ್ಲಿ "ರಂಗ ಕಲಾ ಚೇತನ ತಂಡದಿಂದ" ಸಮುದಾಯ ಜಾಗೃತಿ ಕಾರ್ಯಕ್ರಮ ಜರುಗಿತು.

ಗ್ರಾಮದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲಾ ಸುಧಾರಣಾ ಸಮಿತಿ ಉಪಾಧ್ಯಕ್ಷೆ ರೇವತಿ ಗೋನಾಳ್, ಸರ್ವ-ಸದಸ್ಯರು, ಶಾಲೆಯ ಸಿಬ್ಬಂದಿಯವರು, ಗ್ರಾಮ ಪಂಚಾಯತ್ ಸರ್ವಸದಸ್ಯರು, ಆಶಾ ಕಾರ್ಯಕರ್ತೆಯರು, ಮಹಿಳಾ ಸ್ವ-ಸಹಾಯ ಸಂಘದವರು, ವಿವಿಧ ಸಂಘಟನೆಯ ಪದಾಧಿಕಾರಿಗಳು, ಪ್ರೇರಕರು, ಶಾಲೆಯ ವಿದ್ಯಾರ್ಥಿ ವಿದ್ಯಾರ್ಥಿನಿಯರು, ಪೋಷಕರು, ಗುರುಹಿರಿಯರು ಭಾಗವಹಿಸಿದ್ದರು.

# ಶ್ರೀ ಕನಕದುರ್ಗಮ್ಮ ದೇವಸ್ಥಾನ ಹುಂಡಿ ತೆರೆಯಿಸಿ ಹಣ ಎಣಿಕೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಶ್ರೀ ಕನಕದುರ್ಗಮ್ಮ ದೇವಸ್ಥಾನದ ಹುಂಡಿಯನ್ನು ಅಧಿಕಾರಿಗಳ ಸಮ್ಮುಖದಲ್ಲಿ ತೆರೆಯಿಸಿ ಅದರಲ್ಲಿದ್ದ ಹಣವನ್ನು ನಿಯಮಾನುಸಾರ ಎಣಿಕೆ ಮಾಡಲಾಯಿತು.

ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿ ಇಲಾಖೆಯ ಸಹಾಯಕ ಆಯುಕ್ತರ ಆದೇಶದಂತೆ ಇಂದು ಬೆಳಿಗ್ಗೆ 10.30 ಗಂಟೆಗೆ ದೇವಸ್ಥಾನದ ಹುಂಡಿ ತೆರೆಯುವ ಕಾರ್ಯ ನಡೆಯಿತು. ಸಹಾಯಕ ಆಯುಕ್ತರು ಹಾಗೂ ಆಡಳಿತಾಧಿಕಾರಿಗಳ ಮೇಲುಸ್ತುವಾರಿಯಲ್ಲಿ ತಹಶೀಲ್ದಾರರು ಗ್ರೇಡ್-2, ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಕಂದಾಯ ಇಲಾಖೆ ಸಿಬ್ಬಂದಿ, ಬ್ಯಾಂಕ್ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ ಮತ್ತು ದೇವಸ್ಥಾನದ ಸಿಬ್ಬಂದಿ ಉಪಸ್ಥಿತಿಯಲ್ಲಿ ಹುಂಡಿ ಎಣಿಕೆ ಕಾರ್ಯ ನಡೆಸಲಾಯಿತು.

ಸಂಪೂರ್ಣ ಪ್ರಕ್ರಿಯೆಯನ್ನು ವಿಡಿಯೋ ಚಿತ್ರೀಕರಣದೊಂದಿಗೆ ಪಾರದರ್ಶಕವಾಗಿ ನಡೆಸಲಾಗಿದ್ದು, ಧಾರ್ಮಿಕ ದತ್ತಿ ಇಲಾಖೆಯ ಆಯುಕ್ತರು ನೀಡಿರುವ ಮಾರ್ಗಸೂಚಿಗಳಂತೆ ಕ್ರಮ ಕೈಗೊಳ್ಳಲಾಯಿತು.

ಹುಂಡಿಯಲ್ಲಿ ಸಂಗ್ರಹವಾಗಿದ್ದ ಮೊತ್ತವನ್ನು ಎಣಿಕೆ ಮಾಡಿ ಬಳಿಕ ದೇವಸ್ಥಾನದ ಉಳಿತಾಯ ಖಾತೆಗೆ ಜಮಾ ಮಾಡಲು ಬ್ಯಾಂಕ್ ಅಧಿಕಾರಿಗಳಿಗೆ ಹಸ್ತಾಂತರಿಸಲಾಯಿತು ಎಂದು ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಗಾಂಧಿನಗರ ಪೊಲೀಸ್ ಠಾಣೆಯ ಸಿಬ್ಬಂದಿ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದ್ದರು.

# ಮಡಿವಾಳ ಸಮಾಜ ಪರಿಶಿಷ್ಟ ಜಾತಿಗೆ ಸೇರಿಸಬೇಕೆಂದು ಅಹೋರಾತ್ರಿ ಧರಣಿ



ಹುಣಸೂರು :ಮಡಿವಾಳ ಸಂಘದ ವತಿಯಿಂದ ದಿನಾಂಕ 16.03.2026ರಂದು ಬೆಳಗ್ಗೆ 8 ಗಂಟೆಯಿಂದ ಬೆಂಗಳೂರು ನಗರದ ಪ್ರೀಡಂ ಪಾರ್ಕ್ ನಲ್ಲಿ ಮಡಿವಾಳ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸಬೇಕೆಂದು ಒತ್ತಾಯಿಸಿ ಅಹೋರಾತ್ರಿ ಧರಣಿ ನಡೆಸಲಿದ್ದೇವೆ ಎಂದು. ತಾಲೂಕು ಮಡಿವಾಳ ಸಂಘದ ಅಧ್ಯಕ್ಷ ಚಿಲ್ಕುಂದ ರವಿ ತಿಳಿಸಿದ್ದಾರೆ

ನಗರದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಕರೆಯಲಾಗದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ನಮ್ಮ ಸಮಾಜಕ್ಕೆ ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ, ರಾಜಕೀಯವಾಗಿ ಸೌಲಭ್ಯಗಳು ಸಿಗಬೇಕು. ಮಡಿವಾಳ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸಬೇಕು ಈಗಾಗಲೇ ದೇಶದಲ್ಲಿ 18 ರಾಜ್ಯಗಳಲ್ಲಿ, 3 ಕೇಂದ್ರಾಡಳಿತ ಪ್ರದೇಶಗಳಲ್ಲಿ ನಮ್ಮ ಸಮಾಜವನ್ನು ಪರಿಶಿಷ್ಟ ಜಾತಿಗೆ ಸೇರಿಸಿದ್ದಾರೆ. ಅವರು ರಾಜಕೀಯವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಮುಂದುವರೆದಿದ್ದಾರೆ.

1921ರಲ್ಲಿ ಮೈಸೂರು ಮಹಾರಾಜರು ನಡೆಸಿದ ದುಂಡು ಮೇಜಿನ ಸಭೆಯಲ್ಲಿ ಮಡಿವಾಳ ಸಮಾಜವನ್ನು ಎಸ್ಸಿಗೆ ಸೇರಿಸಬೇಕೆಂದು ಆದೇಶ ಮಾಡಿದ್ದರು. ಬಿಎಸ್ ಯಡಿಯೂರಪ್ಪ ರವರು 2011ರಲ್ಲಿ ಸಿಎಂ ಆಗಿದ್ದಾಗ ಕುಲಶಾಸ್ತ್ರ ಅಧ್ಯಯನ ಮತ್ತು ಸಂಶೋಧನೆ ಪ್ರಕಾರ ಸಂಶೋಧನೆ ಮಾಡಿ ಮಡಿವಾಳ ಸಮಾಜವನ್ನು ಎಸ್ಸಿಗೆ ಸೇರಿಸಬೇಕೋ ಅಥವಾ ಬೇಡವೋ ಎಂಬ ವರದಿಯನ್ನು ನೀಡಿರುತ್ತಾರೆ. ರಾಜ್ಯದಲ್ಲಿ ಪಕ್ಷಾತೀತವಾಗಿ ಆಡಳಿತ ಮಾಡಿರುವ ಇಲ್ಲಿಯವರೆಗೆ ಯಾವುದೇ ಸರ್ಕಾರಗಳು ಅದನ್ನು ನಮ್ಮನ್ನು ಪರಿಗಣಿಸಲೇಯಿಲ್ಲ.

ಈ ವರದಿಯನ್ನು ಜಾರಿಗೆ ತರಲು ಬಸವ ಮಾಚಿದೇವ ಸ್ವಾಮೀಜಿ ಮಾಚಿದೇವ ಮಹಾ ಸಂಸ್ಥಾನ ಮಠ ಚಿತ್ರದುರ್ಗ ಹಾಗೂ ಮಡಿವಾಳ ಸಂಘಟನೆಗಳ ವತಿಯಿಂದ ಫ್ರೀಡಂ ಪಾರ್ಕಿನಲ್ಲಿ ಆಹೋರಾತ್ರಿ ಧರಣಿ ನಡೆಸಲಿದ್ದೇವೆ. ಕರ್ನಾಟಕ ರಾಜ್ಯ ಮಡಿವಾಳ ಕ್ಷೇಮಾಭಿವೃದ್ಧಿ ಸಂಘವು ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಮಾಡುವಂತೆ 19 ಮಂದಿ ಸಚಿವರು, 137 ಶಾಸಕರು ಪತ್ರಗಳನ್ನು ಪಡೆದಿದೆ. ಈವರೆಗೆ ಪ್ರೊ.ಡಾ ಅನ್ನಪೂರ್ಣ ವರದಿಯನ್ನು ಜಾರಿಗೊಳಿಸಲು ಒಟ್ಟು 156 ಪತ್ರಗಳನ್ನು ಪಡೆದುಕೊಂಡಿದ್ದೇವೆ. ಇದನ್ನು ಮುಖ್ಯಮಂತ್ರಿ, ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಸಚಿವರಿಗೆ ಮನವಿ ಸಲ್ಲಿಸಿರುತ್ತೇವೆ ಎಂದು ತಿಳಿಸಿಣಟಿಜಜಜಿಟಿಜಜದರು

ಸುದ್ದಿಗೋಷ್ಠಿಯಲ್ಲಿ ಮಡಿವಾಳ ಸಂಘದ ಪ್ರಧಾನ ಕಾರ್ಯದರ್ಶಿ ರಘು, ಖಜಾಂಚಿ, ಗಣೇಶ ಚಂದ್ರಹಾಸ, ಬಿಳಿಕೆರೆ ಹೋಬಳಿಯ ಅಧ್ಯಕ್ಷ ಕರುಶೇಖರ್ ಸಂಚಾಲಕರು ಶಿವಾನಂದ ಹಾಜರಿದ್ದರು

# ಎಫ್‌ಎಲ್‌ಎನ್ ಆಧರಿತ ಕಲಿಕಾ ಹಬ್ಬ



• ಮಲ್ಲಮ್ಮ ನುಡಿ ವಾರ್ತೆ ಕಂಪ್ಲಿ

ಸ್ಥಳೀಯ 8ನೇ ವಾರ್ಡಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 8ನೇ ವಾರ್ಡ್ ಸಮೂಹ ಸಂಪನ್ಮೂಲ ಕೇಂದ್ರದಿಂದ ಗುರುವಾರ ಆಯೋಜಿಸಿದ್ದ ಎಫ್‌ಎಲ್‌ಎನ್ ಆಧರಿತ ಕಲಿಕಾ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳಲ್ಲಿ ಪ್ರಶ್ನಿಸುವ ಮನೋಭಾವ, ಆತ್ಮವಿಶ್ವಾಸ ಮೂಡಿಸುತ್ತದೆ ಸಮೂಹ ಸಂಪನ್ಮೂಲ ವ್ಯಕ್ತಿ(ಸಿಆರ್‌ಪಿ) ಎ.ಗಂಗಾಧರ ಮಾತನಾಡಿ, ಮಕ್ಕಳ ಸರ್ವತೋಮುಖ ಬೆಳವಣಿಗೆ ಹಾಗೂ ಕಲಿಕೆಯ ಮೇಲಿನ ಆಸಕ್ತಿ ಹೆಚ್ಚಿಸಲು ಎಫ್‌ಎಲ್‌ಎನ್ ಕಲಿಕಾ ಹಬ್ಬಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಹಿಂದುಳಿದ ಮಕ್ಕಳ ಕಲಿಕಾ ಮಟ್ಟವನ್ನು ಹೆಚ್ಚಿಸುವ ಜೊತೆಗೆ ಅವರಲ್ಲಿರುವ ಪ್ರತಿಭೆಗಳನ್ನು ಹೊರತರುವ ನಿಟ್ಟಿನಲ್ಲಿ ಸಹಕಾರಿಯಾಗಲಿದೆ ಎಂದರು.

ಇಲ್ಲಿನ ಕಲಿಕಾ ಹಬ್ಬದ ಏಳು ಕಲಿಕಾ ಚಟುವಟಿಕೆಗಳಲ್ಲಿ 8 ಶಾಲೆಗಳ ನೂರಾರು ಮಕ್ಕಳು ಭಾಗವಹಿಸಿದ್ದರು. 14 ಜನ ನಿರ್ಣಾಯಕರಾಗಿ ಕೆಲಸ ನಿರ್ವಹಿಸಿದರು. ವಿಜೇತ ಮಕ್ಕಳಿಗೆ ಪ್ರಶಸ್ತಿ ಪತ್ರ ಮತ್ತು ಬಹುಮಾನ ವಿತರಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಬಿ.ಸಿದ್ದಪ್ಪ, ಅಯೋಧಿ ವೆಂಕಟೇಶ, ಮುಖಂಡರಾದ ನಡವಿ ಮಲ್ಲಿಕಾರ್ಜುನ, ಈರಣ್ಣ, ಇಸಿಓ ರೇವಣ್ಣ, ಎನ್‌ಪಿಎಸ್ ರಾಜ್ಯಾಧ್ಯಕ್ಷ ನಾಗನಗೌಡ ಎಂ.ಎ, ಸಿಆರ್‌ಪಿ ರೇಣುಕಾರಾಧ್ಯ, ಜೋಗಿ ರುದ್ರಪ್ಪ, ಸುನಿತಾ ಪೂಜಾರಿ, ಹೊಸಗೇರಪ್ಪ, ಸೇರಿದಂತೆ ಶಿಕ್ಷಕ ವೃಂದದವರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

# ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ ನೀಡಲು ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕನ್ನಡ ಸಾಹಿತ್ಯ ಪರಿಷತ್ತಿನ ಆಡಳಿತಾಧಿಕಾರಿಗಳಾದ ಕೆ. ದಯಾನಂದ ಅವರನ್ನು ಕಸಾಪ ಚುನಾಯಿತ ಜಿಲ್ಲಾಧ್ಯಕ್ಷ /ಗಡಿನಾಡ ಅಧ್ಯಕ್ಷರ ಒಕ್ಕೂಟದ ಪರವಾಗಿ ಅಧ್ಯಕ್ಷರುಗಳ ನಿಯೋಗವು ಬೆಂಗಳೂರಿನ ಕ.ಸಾ.ಪ ಕಚೇರಿಯಲ್ಲಿ ಭೇಟಿ ಮಾಡಿದರು.

ಜಿಲ್ಲಾ/ ತಾಲೂಕು ಸಾಹಿತ್ಯ ಸಮ್ಮೇಳನಗಳಗೆ ಅನುದಾನ, ದತ್ತಿ ಕಾರ್ಯಕ್ರಮಗಳ ಹಾಗೂ ವಾರ್ಷಿಕ ನಿರ್ವಹಣಾ ವೆಚ್ಚ ಜೊತೆಗೆ ಪರಿಷತ್ತಿನಿಂದ ಜಿಲ್ಲಾ ಘಟಕಗಳಿಗೆ ಬರಬೇಕಾದ ಬಾಕಿ ಅನುದಾನವನ್ನು ಬಿಡುಗಡೆ ಮಾಡುವಂತೆ, ಪ್ರಮುಖವಾಗಿ ಬಳ್ಳಾರಿಯಲ್ಲಿ ಜರುಗಲಿರುವ 88ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನಕ್ಕೆ ಶೀಘ್ರವೇ ಚಾಲನೆ ನೀಡುವಂತೆ ಒಕ್ಕೂಟದ ಪರವಾಗಿ ಜಿಲ್ಲಾ ಅಧ್ಯಕ್ಷರುಗಳು ಆಡಳಿತಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು. ಎಂದು ಕ.ಸಾ.ಪ ಜಿಲ್ಲಾ ಗೌರವ ಕಾರ್ಯದರ್ಶಿ ಡಾ.ಕೆ.ಶಿವಲಿಂಗಪ್ಪ ಹಂದಿಹಾಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೀರಿನ ಅರವಟ್ಟಿಗೆಗೆ ಟ್ರಾಫಿಕ್ ಸಿಗ್ನಲ್‌ನಲ್ಲಿ ಹಸಿರು ಪರದೆ ಅಳವಡಿಸಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಬೇಸಿಗೆಯ ತೀವ್ರಬಿಸಿಲಿನ ಹಿನ್ನೆಲೆ ಸಾರ್ವಜನಿಕರ ರಕ್ಷಣೆಗೆ ನೆರಳು ಪರದೆಗಳು ಮತ್ತು ಕುಡಿಯುವ ನೀರಿನ ಅರವಟ್ಟಿಗೆಗಳ ವ್ಯವಸ್ಥೆ ಒದಗಿಸುವಂತೆ ಕರ್ನಾಟಕ ನವನಿರ್ಮಾಣ ಸೇನೆ ಜಿಲ್ಲಾಧ್ಯಕ್ಷ ಅಜಯ್ ಮಾಸನ್ ಮನವಿ ಸಲ್ಲಿಸಿದರು. ಈ ಕುರಿತು ಶುಕ್ರವಾರ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿ ಹೇಳಿಕೆ ನೀಡಿರುವ ಅವರು, ಗಿರಿ ನಗರದಲ್ಲಿ ದಿನದಿಂದ ದಿನಕ್ಕೆ ಸೂರ್ಯನ ಪ್ರಖರತೆ ಹೆಚ್ಚುತ್ತಿದ್ದು, ಸಾರ್ವಜನಿಕರು ಬಿಸಿಲಿನ ಧಗೆಗೆ ತತ್ತರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ ಮುಂದಿನ ದಿನಗಳಲ್ಲಿ ಬಿಸಿಲಿನ ತಾಪಮಾನ ಇನ್ನಷ್ಟು ಏರಿಕೆಯಾಗುವ ಸಾಧ್ಯತೆ ಇದ್ದು, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ತಕ್ಷಣವೇ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ ಎಂದರು.

ನಗರದ ಪ್ರಮುಖ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ದ್ವಿಚಕ್ರ ವಾಹನ ಸವಾರರು ಹಾಗೂ ಪಾದಚಾರಿಗಳು ನಿಮಿಷಗಟ್ಟಲೆ ಕೆಂಡದಂತಿರುವ ಬಿಸಿಲಿನಲ್ಲಿ ಕಾಯಬೇಕಾದ ಅನಿವಾರ್ಯತೆ ಎದುರಿಸುತ್ತಿದ್ದಾರೆ. ಇದ-ರಿಂದ ಅನೇಕರು ತಲೆ ಸುತ್ತು, ನಿರ್ಜಲೀಕರಣ (Dehydration) ಹಾಗೂ ಹೀಟ್ ಸ್ಟ್ರೋಕ್ ಮುಂತಾದ ಸಮಸ್ಯೆಗಳಿಗೆ ಒಳಗಾಗುವ ಸಾಧ್ಯತೆ ಇದ್ದು, ನಗರದ ಪ್ರಮುಖ ವೃತ್ತಗಳು ಹಾಗೂ ಟ್ರಾಫಿಕ್ ಸಿಗ್ನಲ್‌ಗಳ ಬಳಿ ಎತ್ತರವಾದ ಹಸಿರು ನೆರಳಿನ ಪರದೆಗಳನ್ನು (Shade Nets) ಅಳವಡಿಸುವಂತೆ ಕೋರಿದರು. ನಗರದ ಜನದಟ್ಟಣೆ ಇರುವ ಸ್ಥಳಗಳಾದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಮಾರುಕಟ್ಟೆ ಪ್ರದೇಶಗಳು ಹಾಗೂ ಸರ್ಕಾರಿ ಕಚೇರಿಗಳ ಮುಂಭಾಗಗಳಲ್ಲಿ ತುರ್ತಾಗಿ ಶುದ್ಧ ಕುಡಿಯುವ ನೀರಿನ ಅರವಟ್ಟಿಗೆಗಳನ್ನು ಸ್ಥಾಪಿಸಬೇಕು. ಈಗಾಗಲೇ ಇರುವ ನೀರಿನ ಘಟಕಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ. ಅವುಗಳ ನಿರ್ವಹಣೆಗೆ ವಿಶೇಷ ತಂಡವನ್ನು ನೇಮಿಸಿ ಪರಿಶೀಲಿಸುವ ಕಾರ್ಯ ಮಾಡಬೇಕು.

ಬಿಸಿಲಿನ ತಾಪದಿಂದ ಸಂಕಷ್ಟಕ್ಕೀಡಾಗುತ್ತಿರುವ ಸಾರ್ವಜನಿಕರಿಗೆ ಇಂತಹ ವ್ಯವಸ್ಥೆಗಳು ದೊಡ್ಡ ಮಟ್ಟದ ಆಸರೆಯಾಗಲಿದ್ದು, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ನಗರ ಆಡಳಿತವು ಸಾಮಾಜಿಕ ಕಳಕಳಿಯಿಂದ ಈ ಕೂಡಲೇ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮನವಿ ಮಾಡಿದರು.

# ಯುಪಿಎಸ್‌ಸಿ ಸಾಧಕ ಸಂದೀಪ್ ಬಾಡದ್‌ಗೆ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಐಎಎಸ್ ಉತ್ತೀರ್ಣರಾದವರು ತಾವು ಯಾರಿಗೂ ಅಡಿಯಾಳಾಗದೇ ಸಂವಿಧಾನದ ಚೌಕಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು. ದೇಶವು ತಮ್ಮಿಂದ ಬಹಳಷ್ಟು ನಿರೀಕ್ಷೆ ಅಪೇಕ್ಷಿಸುತ್ತಿದೆ. ಸಾರ್ವಜನಿಕ ಸೇವೆಯಲ್ಲಿ ಅತ್ಯಾಕರ್ಷಕ ಮತ್ತು ತೃಪ್ತಿಕರ ವೃತ್ತಿ ನಿಮಗಾಗಿ ಕಾಯುತ್ತಿದೆ ಎಂದು ಅಂತರಾಷ್ಟ್ರೀಯ ಹಾಸ್ಯಕಲಾವಿದರಾದ ಬಸವರಾಜ ಮಹಾಮನಿ ಹೇಳಿದರು.

ಯುಪಿಎಸ್‌ಸಿ ಪರೀಕ್ಷೆಯಲ್ಲಿ ದೇಶಕ್ಕೆ 82ನೇ ರ್‍ಯಾಂಕ್ ಪಡೆದು ಉನ್ನತ ಸಾಧನೆ ಮಾಡಿದ ಸಾಧಕ ಸಂದೀಪ್ ಬಾಡದ್ ಅವರನ್ನು ನಗರದಲ್ಲಿ ಅಭಿನಂದಿಸಿ ಮಾತನಾಡಿದರು.

ನಿಮ್ಮ ಪ್ರತಿಯೊಂದು ಒಳ್ಳೆಯ ಕೆಲಸವು ನಮಗೆ ಸ್ಫೂರ್ತಿ ನೀಡಬೇಕು. ಇನ್ನಷ್ಟು ಒಳ್ಳೆಯ ಅಧಿಕಾರಿಗಳು ಬರಲು ತಾವು ಮಾರ್ಗದರ್ಶನ ನೀಡಬೇಕು ಎಂದು ಸಲಹೆ ನೀಡಿದರು.

ಯೋಗ್ಯರು ಮತ್ತು ಸಮರ್ಥರ ಕೈಯಲ್ಲಿ ಆಡಳಿತ ಇದ್ದಾಗ, ನಿರ್ಣಯಗಳನ್ನು ಅನುಷ್ಠಾನಗೊಳಿಸುವಾಗ ಸಂವಿಧಾನದ ನಿರ್ದೇಶಕ ತತ್ವಗಳನ್ನು ಪರಿಪಾಲಿಸಬೇಕು. ಯಾರ ಮುಲಾಜಿಗೂ ಒಳಗಾಗಬಾರದು. ಅಧಿಕಾರಿಗಳು ಸಹನೆ, ಕರುಣೆ, ಅನುಕಂಪ, ಪ್ರೀತಿ, ಸ್ವಾತಂತ್ರ್ಯದ ಉದ್ದೇಶಗಳನ್ನು ಈಡೇರಿಸುವ ಜೊತೆಗೆ ಸಮರ್ಥ ಭಾರತವನ್ನು ನಿರ್ಮಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಂದಪ್ಪ ಅರಳಿ, ಶರಣಗೌಡ ಮಾಲಿ ಪಾಟೀಲ್, ಜಗದೀಶ್ ಕಾಳಗಿ, ಮಲ್ಲನಗೌಡ ಬಿಳಾರ್, ಸುನಿಲ್ ಕರ್ಣಿ, ಮಲ್ಲಯ್ಯ ಬಾಗ್ಲಿ, ಡಾ. ವಿರುಪಣ್ಣ ಗೌಡ, ವಿನೋದ್ ದಿಗ್ಗಯ್, ನಾಗರಾಜ ಶೀಲವಂತ, ಕೃಷ್ಣ ದಿಗ್ಗಯ್ ಇದ್ದರು.

# ಪದಾಧಿಕಾರಿಗಳ ಕಾರ್ಯಕಾರಿಣಿ ಸಭೆ ಸರ್ವರೂ ಪಾಲ್ಗೊಳ್ಳಲು ವಿಶ್ವಾರಾಧ್ಯ ಮನವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ನಮ್ಮ ಕರ್ನಾಟಕ ಸೇನೆಯ ಕಲ್ಯಾಣ ಕರ್ನಾಟಕ ಮಟ್ಟದ ಜಿಲ್ಲಾಧ್ಯಕ್ಷರು ಮತ್ತು ತಾಲೂಕಾಧ್ಯಕ್ಷರ ಕಾರ್ಯಕಾರಣಿ ಸಭೆ ನಗರದ ಎಸ್.ಡಿ.ಎನ್ ಹೊಟೆಲ್ ಸಭಾಂಗಣದಲ್ಲಿ ಮಾರ್ಚ 14 ರಂದು ಬೆಳಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧ್ಯಕ್ಷ ವಿಶ್ವಾರಾಧ್ಯ ದಿಮ್ಮೆ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯಾಧ್ಯಕ್ಷ ಎಂ. ಬಸವರಾಜ ಪಡುಕೋಟಿ ಅಧ್ಯಕ್ಷತೆ ವಹಿಸುವರು,

ಉದ್ಘಾಟನೆಯನ್ನು ಮಾಜಿ ಸದಸ್ಯರು, ಕರ್ನಾಟಕ, ಹಿಂದುಳಿದ ವರ್ಗಗಳ ಆಯೋಗ ಮಾಜಿ ಸದಸ್ಯ ಶರಣಪ್ಪ ಡಿ. ಮಾನೇಗಾರ, ಸಮಾಜ ಸೇವಕರು ಮತ್ತು ಪ್ರಥಮ ದರ್ಜೆ ಗುತ್ತಿಗೆದಾರರಾದ ಹಣಮೇಗೌಡ ಬಿರನಕಲ್ ನೆರವೇರಿಸುವರು.

ಕನ್ನಡಾಂಬೆ ಭಾವಚಿತ್ರ ಪೂಜೆಯನ್ನು ಕಾಂಗ್ರೆಸ್ ಯುವ ಮುಖಂಡ ಅನೀಲಕುಮಾರ್ ಹೆಡಗಿಮದ್ರಾ ಮತ್ತು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ್ ಸಾಹುಕಾರ ನೆರವೇರಿಸುವರು. ಈ ಸಂದರ್ಭದಲ್ಲಿ ಆರಕ್ಷಕ ವೃತ್ತ ನಿರೀಕ್ಷಕರಾದ ಸುನೀಲ್ ಮೂಲಿಮನಿ, ಸಗರನಾಡು

ಸೇವಾ ಪ್ರತಿಷ್ಠಾನ ಸುರಪುರ ಅಧ್ಯಕ್ಷರಾದ ಪ್ರಕಾಶ್ ಅಂಗಡಿ ಕನ್ನೆಳ್ಳಿ, ರೈತ ಮುಖಂಡ ಮಲ್ಲಿಕಾರ್ಜುನ ಸತ್ಯಂಪೇಠ, ಚಲನಚಿತ್ರ ನಟರು ರಾಜ್ಯ ಗೌರವಾಧ್ಯಕ್ಷರಾದ ಬೆಂಗಳೂರಿನ ಗಣೇಶರಾವ್ ಕೇಸರ್‌ಕರ್, ಯುವ ಘಟಕ ರಾಜ್ಯಾಧ್ಯಕ್ಷ ರಘು ಪಡುಕೋಟೆ ಆಗಮಿಸುವರು.

ಪ್ರಾಸ್ತಾವಿಕ ನುಡಿಯನ್ನು ರಾಜ್ಯ ಪ್ರಧಾನ ಸಂಚಾಲಕ ಭೀಮಣ್ಣ ಶಖಾಪುರ ನುಡಿಯಲಿದ್ದಾರೆ. ನೇತೃತ್ವವನ್ನು ಜಿಲ್ಲಾಧ್ಯಕ್ಷ ವಿಶ್ವಾರಾಧ್ಯ ದಿಮ್ಮೆ ವಹಿಸಲಿದ್ದಾರೆ. ಸರ್ವರೂ ಪಾಲ್ಗೊಳ್ಳುವಂತೆ ಅಮರದೀಪ್ ನಾಯಕ್ ಭೀಮು ಪೂಜಾರಿ ಚನ್ನಬಸವ ಕನಕ ಅಬ್ದುಲ್ ಹನುಮಂತ ಅಂಬರೀಶ್ ಶಿವಶರಣ

ಕುಂಬಾರ್ ಮೌನೇಶ್ ತಿಂತಣಿ ಮಲ್ಲಿಕಾರ್ಜುನ್ ಕಲ್ಮನಿ ಸಿದ್ದು ಪಟ್ಟೆದಾರ್ ಭೀಮನಗೌಡ ವೆಂಕಟೇಶ್ ಫ್ಯಾಪ್ಲಿ ಮನವಿ ಮಾಡಿದ್ದಾರೆ.

### ಬಳಿಚಕ್ರ ಪ್ರೌಢ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಬಿಳ್ಕೊಡುಗೆ ಸಮಾರಂಭ

# ಶಾಲೆಯ ಋಣ ತೀರಿಸೋಣ: ಬೊಮ್ಮಣ್ಣೂರ್

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಹುಟ್ಟಿ ಬೆಳೆದ ಮಣ್ಣಿನ ಋಣ ಮತ್ತು ನಮ್ಮ ಜೀವನಕ್ಕೆ ನಾಂದಿ ಹಾಕಿದ ಶಾಲೆಯ ಋಣವನ್ನು ನಮ್ಮ ಜೀವನವನ್ನು ರೂಪಗೊಳಿಸುವುದರ ಮೂಲಕ ತೀರಿಸೋಣ ಎಂದು ಸಮಾಜ ಸೇವಕ ತಾಯಪ್ಪ ಬೊಮ್ಮಣ್ ರವರು ಹೇಳಿದ್ದರು.

ತಾಲೂಕಿನ ಬಳಿಚಕ್ರ ಗ್ರಾಮದಲ್ಲಿ ನಡೆದ ಸರಕಾರಿ ಪ್ರೌಢ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಮತ್ತು ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ನಾಡಿನಲ್ಲಿ ಉತ್ತಮ ಪ್ರಜೆ ಎಂದು ಗುರುತಿಸಿಕೊಳ್ಳಬೇಕಾದರೆ ಮೂಲ ಶಾಲೆಯ ಬುನಾದಿ ಕಾರಣವಾಗುತ್ತದೆ, ಹಿನ್ನಲೆಯಲ್ಲಿ ನಮ್ಮ ಪ್ರೌಢಶಾಲೆಯು ಉತ್ತಮ ಅಂಕಗಳನ್ನು ಪಡೆದು ಜಿಲ್ಲೆಗೆ ಮತ್ತು ರಾಜ್ಯಕ್ಕೆ ಹೆಸರುವಾಸಿಯಾಗಿದೆ, ಪ್ರತಿಯೊಬ್ಬ ವಿದ್ಯಾರ್ಥಿ ತಮ್ಮ ಓದು ಬರಹ ಕಡೆ ಗಮನ ಕೊಟ್ಟು ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ಶಾಲೆ ಮತ್ತು ಗ್ರಾಮದ ಹೆಸರನ್ನು ರಾಜ್ಯಕ್ಕೆ ಕೀರ್ತಿ ತರಬೇಕು ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಾಜಿ ತಾಲೂಕ ಪಂಚಾಯತಿ ಸದಸ್ಯ ಶ್ರೀ ಹಣಮಂತಪ್ಪ ಬೋಯಿನ್ ಶಾಲೆ ಕಟ್ಟಡಕ್ಕೆ ಹಲವು ರೀತಿಯ ಅಡೆತಡೆಗಳು ನಿರ್ಮಾಣವಾದರೂ ಗ್ರಾಮದ ಸಹಾನುಮತದಿಂದ ಸರ್ವರು ಸೇರಿ ಒಪ್ಪಿಗೆ ಮೂಲಕ ಉತ್ತಮವಾದ ಶಾಲೆ ಕಟ್ಟಡವನ್ನು ನಿರ್ಮಾಣ ಮಾಡಲು ಸಹಕಾರಿಯಾಗಿದ್ದಾರೆ ಮಕ್ಕಳ ಭವಿಷ್ಯವನ್ನು ರೂಪಿಸುವಂತಹ ಕೆಲಸ ಶಿಕ್ಷಕರು ಮಾಡಬೇಕಾಗಿದೆ ಎಂದು ಕಿವಿ ಮಾತು ಹೇಳಿದರು. ಅಧ್ಯಕ್ಷತೆ ವಹಿಸಿದ ಶಾಲೆಯ ಮುಖ್ಯ ಗುರು ಶ್ರೀ ಬನ್ನಪ್ಪ ಮೈಲಾಪುರ ಮಾತನಾಡಿ ವಿದ್ಯಾರ್ಥಿಗಳು ತಮ್ಮ ಅಮೂಲ್ಯವಾದ ಜೀವನವನ್ನು ಈ ಪರೀಕ್ಷೆಯಲ್ಲಿ ತೇರ್ಗಡೆಗೊಂಡು ತಮ್ಮ ಜೀವನ ಸಾರ್ಥಕ ಬದುಕು ನಿರ್ಮಾಣವಾಗಲು ಸಾಧ್ಯ ಮತ್ತು ತಮ್ಮ ಉತ್ತಮವಾದ ಭವಿಷ್ಯವನ್ನು ರೂಪಿಸಿಕೊಳ್ಳಬೇಕು, ಪಠ್ಯಬೋಧನೆಗೆ ಸಂಬಂಧಿಸಿದಂತೆ ಪ್ರತಿ ವಿಷಯದ ಕುರಿತು ತಮ್ಮೊಂದಿಗೆ ಚರ್ಚಿಸಿ

> “ ಶಾಲೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಾದ ಕು. ಮಧು 91%, ಕು. ನರಸಿಂಹ 85%, ಕು.ಮಂಜಮ್ಮ 84%, ಕು. ಪವಿತ್ರ 83%, ಕು.ಶಿವರಾಜ 82% ರವರನ್ನು ಸಮಾಜ ಸೇವಕ ತಾಯಪ್ಪ ಬೊಮ್ಮಣ್ಣವರ್ ಮತ್ತು ಶಾಲಾ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಉತ್ತಮವಾದ ಪ್ರಶ್ನೆ ಪತ್ರಿಕೆಗಳನ್ನು ನೀಡಿ ಅಂಕಗಳನ್ನ ಪಡೆಯಲು ಮಾರ್ಗದರ್ಶನ ಕೂಡ ಮಾಡಲಾಗಿದೆ, ಇದನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ಸದುಪಯೋಗ ಪಡೆದುಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಅನ್ನಪೂರ್ಣ ಬಂಡಾರ್ಕರ್ ಮಾತನಾಡಿದರು, ವಿನೋದ್‌ಕುಮಾರ್ ಮಾತನಾಡಿದರು, ಶ್ರೀಮತಿ ರಂಗಮ್ಮ ಪ್ರಾಸ್ತವಿಕ ನುಡಿದರು, ಎಸ್ಡಿಎಂಸಿ ಅಧ್ಯಕ್ಷ ಸಿದ್ರಾಮಪ್ಪ ಬೋಯಿನ್, ಸದಸ್ಯ ತಾಯಪ್ಪ, ಗ್ರಾಮದ ಹಿರಿಯ ಮುಖಂಡ ಭೀಮನಗೌಡ, ಮುಕ್ಕಣ್ಣ ಬಡಿಗೇರ್, ಪತ್ರಕರ್ತ ದೇವಿಂದ್ರ ಕಿಲ್ಲನಕೇರಾ, ಸೈಯಾದ್ ವಾಸು, ಶಿವಶಂಕರ್, ಚಂದ್ರಶೇಖರ್, ಅನುಸಿಯಾ, ಎಸ್ ಎಸ್ ಗಡ್ಡಿ, ಪ್ರಿಯಾಂಕ ಹಾಗೂ ಮುಂತಾದವರು ಇದ್ದರು. ಕಾರ್ಯಕ್ರಮವನ್ನು ಲಕ್ಷ್ಮಿ ಸ್ವಾಗತಿಸಿ ಮಾಳಪ್ಪ ನಿರೂಪಿಸಿ ವಂದಿಸಿದರು. ನಂತರ ವಿದ್ಯಾರ್ಥಿಗಳ ಸಾಂಸ್ಕೃತಿಕ ಕಾರ್ಯಕ್ರಮಗಳು ನೋಡುಗರ ಗಮನ ಸೆಳೆಯಿತು.

# ವಸತಿ ನಿಲಯದಲ್ಲಿ ವಿದ್ಯಾರ್ಥಿನಿ ಆತ್ಮಹತ್ಯೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದ ಡಿ. ದೇವರಾಜ್ ಅರಸು ಮೆಟ್ರಿಕ್ ನಂತರದ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯೊಬ್ಬಳು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಶುಕ್ರವಾರ ಜರುಗಿದೆ. ಮಾಹಿತಿ ಪ್ರಕಾರ, ವಸತಿ ನಿಲಯದ ಓದು ಕೊಠಡಿಯಲ್ಲಿ ತುಂಬಾ ಸಮಯದಿಂದ ಬಾಗಿಲು ಮುಚ್ಚಿ ಹೊರಬಾರದೆ ಇರುವದನ್ನು ಗಮನಿಸಿ, ವಸತಿ ನಿಲಯದ ಸಿಬ್ಬಂದಿಗಳಿಗೆ ಹಾಗೂ ಪೊಲೀಸ್ ಇಲಾಖೆಗೆ ವಸತಿ ನಿಲಯದ ವಿದ್ಯಾರ್ಥಿಗಳು ಮಾಹಿತಿ ನೀಡಿದ್ದಾರೆ.

ಸುದ್ದಿ ತಿಳಿದ ತಕ್ಷಣ ಸ್ಥಳಕ್ಕೆ ಧಾವಿಸಿದ ಪೊಲೀಸರು ಬಾಗಿಲು ಮುರಿದು ಒಳಗೆ ಪ್ರವೇಶಿಸಿ ಪರಿಶೀಲನೆ ನಡೆಸಿದಾಗ ವಿದ್ಯಾರ್ಥಿನಿ ಮೃತ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ.

ಮೃತ ವಿದ್ಯಾರ್ಥಿನಿಯನ್ನು ಸ್ವಾತಿ ಎಂದು ಗುರುತಿಸಲಾಗಿದ್ದು, ಆಕೆ ದ್ವಿತೀಯ ಪಿಯುಸಿ ವಿದ್ಯಾರ್ಥಿನಿಯಾಗಿದ್ದು, ಗುರುಮಠಕಲ್ ತಾಲೂಕಿನ ನಂದೇಪಲ್ಲಿ ಗ್ರಾಮದವರು ಎಂದು ತಿಳಿದು ಬಂದಿದೆ. ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಭೇಟಿ ನೀಡಿ ಆತ್ಮಹತ್ಯೆಗೆ ಕಾರಣ ಇನ್ನೂ ತಿಳಿದು ಬಂದಿಲ್ಲ, ಈ ಕುರಿತು ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದು, ಘಟನೆಯ ಕುರಿತು ನಿಖರ ಕಾರಣ ತಿಳಿಯಲಿದೆ ಎಂದು ತಿಳಿಸಿದ್ದಾರೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಓರಾಡಿಯಾ, ಪಿಐ ವೀರಣ್ಣ ದೊಡ್ಡಮನಿ, ತಾಲೂಕಿನ ತಹಸೀಲ್ದಾರ್ ಚನ್ನ ಮಲ್ಲಪ್ಪ ಘಂಟಿ, ತಾಲೂಕ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಅಂಬರೀಶ್ ಪಾಟೀಲ್ ಭೇಟಿ ನೀಡಿದರು.

# ಮಕ್ಕಳ ಪ್ರತಿಭೆ ಗುರುತಿಸಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆ ಸ್ಪರ್ಧಾತ್ಮಕ ಪರೀಕ್ಷೆಗಳ ಅನಾವಣಗೊಳಿಸಿ ಅವರಿಗೆ ಉಚಿತ ಸಿಟ್ ಕೊಡುವ ಕೆಲಸ ಮಾಡುತ್ತಿರುವ ಶಾಹಿನ್ ಶಿಕ್ಷಣ ಸಂಸ್ಥೆ ಕಾರ್ಯ ಶ್ಲಾಘನಿಯವೆಂದು ಎಸ್ ಪಿ ಪೃಥ್ವಿಕ್ ಶಂಕರ್ ಹೇಳಿದರು.

ಸಂಸ್ಥೆಯ ಪಿಯು ವಿಜ್ಞಾನ ಕಾಲೇಜು, ಆಂಗ್ಲ ಮಾಧ್ಯಮ ಹೈಸ್ಕೂಲ್ ಜಂಟಿಯಾಗಿ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆ, ಉಚಿತ ಸಿಟ್ ಹಂಚಿಕೆ ಮತ್ತು ಇಫ್ತಾರ್ ಕೂಟ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಅವರು ಮಾತನಾಡಿದರು.

ಶಿಕ್ಷಣ ಸಂಸ್ಥೆಯವರು ಇಂತಹ ಕೆಲಸಗಳು ಮಾಡಿದಾಗ ಅನೇಕ ಬಡ ಪ್ರತಿಭಾವಂತ ಮಕ್ಕಳಿಗೆ ಓದಲು ಅವಕಾಶ ಸಿಗುತ್ತದೆ. ಇನ್ನೂ ಅನೇಕ ಪ್ರತಿಭಾವಂತರಿಗೆ ಅವಕಾಶ ಮಾಡಿಕೊಡಲಿ ಎಂದರು. ಕಾರ್ಯಕ್ರಮಕ್ಕೆ ಚಾಲನೆ ನೀಡಿದ ವಿಶ್ವಕರ್ಮ ಏಕದಂಡಗಿ ಮಠದ ಕುಮಾರ ಸ್ವಾಮಿಗಳು ಮಾತನಾಡಿ, ಶಾಹಿನ್ ಶಿಕ್ಷಣ ಸಂಸ್ಥೆ ಅನೇಕ ವರ್ಷಗಳಿಂದ ಇಂತಹ ಪರೋಪಕಾರಿ ಕೆಲಸ ಮಾಡುತ್ತಿದೆ. ಸಾವಿರಾರು ಬಡ ಮಕ್ಕಳಿಗೆ ನೆರವು ನೀಡಿ ಅವರ ಭವಿಷ್ಯ ಉಜ್ವಲಗೊಳಿಸಿದ್ದಾರೆಂದರು.

ಕಾರ್ಯಕ್ರಮದಲ್ಲಿ ಸಂಸ್ಥೆ ಸಂಸ್ಥಾಪಕ ಸಿಇಒ ಖುರ್ಷಿದ್ ಆಲಂ ಚೌದ್ರಿ, ಸಮ್ದನಿ ಮುಸಾ, ಫಾದರ್ ಎಸ್. ನಂದಕುಮಾರ, ಹೋರಾಟಗಾರ ಉಮೇಶ ಮುದ್ನಾಳ್, ವಕೀಲ ಮಲ್ಲಿಕಾರ್ಜುನ ಅಂಗಡಿ, ಖುರ್ಷಿದ್ ಆಲಂ ಚೌದ್ರಿ, ಖುರ್ಷಿದ್ ಅಜರ್ ಚೌದ್ರಿ, ಪ್ರೇಮ್ ರಾಜ್, ಕಾಲೇಜಿನ ಪ್ರಾಚಾರ್ಯರು ಸೇರಿದಂತೆಯೇ ಇತರರಿದ್ದರು.

# ಪುರಸಭೆಗೆ ಶ್ರೀಮತಿ ನೇತ್ರಾವತಿ ಸರಗರ್ ಹುಚ್ಚಪ್ಪ ಉಪಾಧ್ಯಕ್ಷರಾಗಿ ಆಯ್ಕೆ



• ಮಲ್ಲಮ್ಮ ನುಡಿ, ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ಪುರಸಭೆಗೆ 20ನೇ ವಾರ್ಡಿನ ಸದಸ್ಯರಾದ ಶ್ರೀಮತಿ ನೇತ್ರಾವತಿ ಸೆರಗಾರ್ ಹುಚ್ಚಪ್ಪ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇವರಿಗೆ ಆರ್ ಎಸ್ ಎಸ್ ಬ್ಯಾಂಕಿನ ಅಧ್ಯಕ್ಷರಾದ ಬಸವರಾಜ್ ದಾದಮ್ಮ ನವರು ಶಾಬುದ್ದೀನ್ ಕಾರ್ಯಾಧ್ಯಕ್ಷರು ಮಾನವ ಹಕ್ಕುಗಳ ಆಯೋಗ ವಿಜಯನಗರ ಜಿಲ್ಲೆ ಪುರಸಭೆ ಅಧ್ಯಕ್ಷರಾದ ಮರಿ ರಾಮಪ್ಪನವರು ಪುರಸಭೆ ಸದಸ್ಯರಾದ ನೆಲ್ ಇಸ್ಮಾಯಿಲ್,

ಗಣೇಶ್, ಅಂಬಿಕಾ ದೇವೇಂದ್ರಪ್ಪ, ಪವಾಡಿ ಹನುಮಂತಪ್ಪ,

ಗ್ಯಾರೆಂಟಿ ಸಮಿತಿ ಜಿಲ್ಲಾ ಉಪಾಧ್ಯಕ್ಷ ಜಂದಿ ಸಾಬ್, ಮುಖಂಡರಾದ ಪೇಂಟರ್ ಬಾಬು, ಡಿಶ್ ಮಂಜುನಾಥ್ ಮುಂತಾದವರು ಅಭಿನಂದನೆ ಸಲ್ಲಿಸಿದ್ದಾರೆ

# ಮಾಲಿನ್ಯ ಕಾರ್ಯ ಮುಂದುವರೆಸುವ ಕಾರ್ಖಾನೆಗಳನ್ನು ಶಾಶ್ವತವಾಗಿ ನಿಲ್ಲಿಸಲು ಅವಕಾಶ: ನರೇಂದ್ರಸ್ವಾಮಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಕಾನೂನು ಅಡಿಯಲ್ಲಿ ಸ್ಥಾಪಿತವಾದ ಉದ್ಯಮವನ್ನು ಶಾಶ್ವತವಾಗಿ ನಿಲ್ಲಿಸಲು ಕಾನೂನಿನಲ್ಲಿ ಅಡ್ಡಿ ಬರುತ್ತದೆ. ಆದರೆ, ಮಾಲಿನ್ಯ ಕಾರ್ಯವನ್ನು ಮುಂದುವರೆಸುವ ಕಾರ್ಖಾನೆಗಳನ್ನು ಶಾಶ್ವತವಾಗಿ ನಿಲ್ಲಿಸಲು ಅವಕಾಶವಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರಾದ ಪಿ.ಎಂ.ನರೇಂದ್ರಸ್ವಾಮಿ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ತಾಲ್ಲೂಕಿನ ಹಿರೇಬಗನಾಳ್ ಗ್ರಾಮಕ್ಕೆ ಭೇಟಿ ನೀಡಿ, ಅಲ್ಲಿನ ವಾಯು ಮಾಲಿನ್ಯ ಸಮಸ್ಯೆಗಳ ಬಗ್ಗೆ ಪರಿಶೀಲಿಸಿ ಗ್ರಾಮದ ಕರಿಯಮ್ಮದೇವಿ ದೇವಸ್ಥಾನದ ಆವರಣದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಮಾತನಾಡಿದರು.

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಕೇಂದ್ರದ ನಿಯಮದಡಿ ಕೆಲಸ ಮಾಡುವ ಸಂಸ್ಥೆಯಾಗಿದ್ದು, ನೆಲ, ಜಲ, ವಾಯು ಮಾಲಿನ್ಯವನ್ನು ನಿತ್ರಣ ಮಾಡುವುದಕ್ಕಾಗಿ ನಮ್ಮ ಮಂಡಳಿ ಸ್ಥಾಪನೆಯಾಗಿದೆ. ಬಾದಿತ ಜನರ ಸಮಸ್ಯೆಯನ್ನು ಬಗೆಹರಿಸಲು ಹಿರೇಬಗನಾಳ್‌ಗೆ ಭೇಟಿ ನೀಡಿರುವೆ. ಈ ಗ್ರಾಮಕ್ಕೆ ಬರುವುದಕ್ಕೆ ಮುಂಚೆ ಇಲ್ಲಿನ ಸಮಸ್ಯೆಗಳ ಕುರಿತು ಮಾಧ್ಯಮಗಳ ವರದಿ, ಗ್ರಾಮಸ್ಥರ ದೂರುಗಳನ್ನು ಗಮನಿಸಿದೇನೆ. ಈ ವಿಚಾರವಾಗಿ ಕೇಂದ್ರ ವಾಯು ಮಾಲಿನ್ಯ ನಿಯಂತ್ರಣ ಮಂಡಳಿಯ ನೀಡಿರುವ ವರದಿಯನ್ನು ಸಹ ನೋಡಿದ್ದೇನೆ. ಈಗಾಗಲೇ ಹಲವಾರು ಸೂಚನೆಗಳನ್ನು ಕಾರ್ಖಾನೆಗಳಿಗೆ ನೀಡಲಾಗಿದ್ದು, ಪರಿಣಾಮಕಾರಿಯಾದ ತ್ವರಿತ ಕ್ರಮಗಳನ್ನು ಕೈಗೊಳ್ಳಬೇಕಿರುವುದು ಅವರ ಜವಾಬ್ದಾರಿಯಾಗಿದೆ. ಈಗ ಅನಿವಾರ್ಯವಾದ ಪರಿಸ್ಥಿತಿಗೆ ಕಾರ್ಖಾನೆಗಳೆ ಸಮಸ್ಯೆಯನ್ನು ತಂದು ಕೊಂಡಿವೆ. ಇಂದಿನ ಈ ಭೇಟಿ ಕಾರ್ಯಕ್ರಮಕ್ಕೂ ಪೂರ್ವದಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಉನ್ನತ ಅಧಿಕಾರಿಗಳ ತಂಡವು ಅನಿರೀಕ್ಷಿತವಾಗಿ ಭೇಟಿ ನೀಡಿ, ಪರಿಶೀಲನೆ ಕೈಗೊಂಡು ವರದಿ ಸಿದ್ಧಪಡಿಸಲು ಇಲ್ಲಿಗೆ ಕಳುಹಿಸಲಾಗಿತ್ತು. ಈ ತಂಡವು ನನಗೆ ವರದಿ ತಲುಪಿಸಲು ಸಿದ್ಧತೆಯನ್ನು ಕೈಗೊಂಡಿದೆ. ಇದರ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಕಾನೂನು ಅಡಿಯಲ್ಲಿ ಸ್ಥಾಪಿತವಾದ ಉದ್ಯಮವನ್ನು ಶಾಶ್ವತವಾಗಿ ನಿಲ್ಲಿಸಲು ಕಾನೂನಿನಲ್ಲಿ ಅಡ್ಡಿ ಬರುತ್ತದೆ. ಆದರೆ, ಮಾಲಿನ್ಯ ಕಾರ್ಯ ಮುಂದುವರೆಸಿದರೆ, ಅವುಗಳನ್ನು ಶಾಶ್ವತವಾಗಿ ನಿಲ್ಲಿಸಲು ಅವಕಾಶವಿದೆ. ಹಾಗಾಗಿ ಮಾಲಿನ್ಯ ಕಾರ್ಯವನ್ನು ಸರಿಪಡಿಸಲು ಅವರಿಗೆ ಅವಕಾಶ ಕೊಡಬೇಕಾಗಿದ್ದು, ಈ ಹಿನ್ನೆಲೆಯಲ್ಲಿ ಈಗಾಗಲೇ ಸಂಬಂಧಿಸಿದ ಕಾರ್ಖಾನೆಗಳಿಗೆ ನೋಟೀಸ್ ನೀಡಲಾಗಿದೆ. ಇದು ಕೊನೆಯ ಅವಕಾಶವಿದ್ದು, ಸಮಸ್ಯೆಗಳನ್ನು ಸರಿಪಡಿಸಲು ಯಾವ ತಾಂತ್ರಿಕ ವಿಚಾರಗಳಿವೆ, ಅವುಗಳ ಬಗ್ಗೆ ಸಂಬಂಧಿಸಿದ ಕಾರ್ಖಾನೆಗಳು ತಾಂತ್ರಿಕ ವರದಿಯೊಂದಿಗೆ ಮುಚ್ಚಳಿಕೆ ಪತ್ರವನ್ನು ನೀಡಬೇಕು. ತಪ್ಪಿದ್ದಲ್ಲಿ ನಿಯಮಗಳಡಿ ಕಾನೂನು ಕ್ರಮ ಕೈಗೊಳ್ಳಲು ಶತಸಿದ್ಧ. ಜನರ ಜೀವನದ ಜೊತೆ ಚೆಲ್ಲಾಟವಾಡಲು ರಾಜ್ಯ ವಾಯು ಮಾಲಿನ್ಯ ನಿಯಂತ್ರಣ ಮಂಡಳಿಯು ಯಾರಿಗೂ ಅವಕಾಶವನ್ನು ನೀಡುವುದಿಲ್ಲ ಎಂಬ ಬದ್ಧತೆಯ ಮಾತನ್ನು ನಾನು ನಿಮ್ಮ ಮುಂದೆ ಹೇಳುತ್ತೇನೆ. ಬಾದಿತ ಜನರ ನೋವು, ಸಂಕಷ್ಟ, ಆರೋಗ್ಯ ಮತ್ತು ಎಲ್ಲಾ ವಿಚಾರಗಳು ನಮ್ಮ ಅರಿವಿನಲ್ಲಿದ್ದು, ಮಂಡಳಿಯು ಜನಸಾಮಾನ್ಯರ ಪರವಾಗಿದೆ ಎಂದು ಹೇಳಿದರು.

ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ಹಿರೇಬಗನಾಳ ಮತ್ತು ಕಾಸರಕಂಡಿ ಕುಣಿಕೇರಿ ಲಾಚನಕೇರಿ, ಕರ್ಕಿಹಳ್ಳಿ, ಚಿಕ್ಕಬಗನಾಳು ಕುಣಿಕೇರಿ ತಾಂಡ ಹಾಗೂ ಹಾಲವರ್ತಿ ಸೇರಿದಂತೆ ಮತ್ತಿತರೆ ಗ್ರಾಮಗಳಲ್ಲಿ ವಿವಿಧ ಕಂಪನಿಗಳಿಂದ ಆಗುವಂತಹ ಧೂಳಿನಿಂದ ಆಯಾ ಗ್ರಾಮದ ಜನರಿಗೆ ಮತ್ತು ಜಾನುವಾರುಗಳಿಗೆ ಜೀವನ ನಡೆಸಲು ಕಷ್ಟವಾಗುತ್ತಿದೆ. ಈ ಬಗ್ಗೆ ಗ್ರಾಮಸ್ಥರು ಅರ್ಜಿಯನ್ನು ಕೊಟ್ಟಿದ್ದಾರೆ ಮತ್ತು ಹೋರಾಟಗಳನ್ನು ಮಾಡಿಕೊಂಡು ಬರುತ್ತಿದ್ದಾರೆ. ಇಲ್ಲಿನ ವಾಸ್ತವಿಕತೆಯನ್ನು ಅಧ್ಯಕ್ಷರ ಗಮನಕ್ಕೆ ತಂದು, ಅದಕ್ಕೆ ಕ್ರಮ ಕೈಗೊಳ್ಳಲು ಅವಕಾಶ ಮಾಡಿ ಕೊಡೋಣ ಎಂದರು.

ಬಾದಿತ ಗ್ರಾಮಗಳನ್ನು ಸ್ಥಳಾಂತರ ಮಾಡಲು ಅಥವಾ ಕಂಪನಿಗಳನ್ನು ಸ್ಥಳಾಂತರ ಮಾಡಲು ಈ ಹಿಂದೆ ಮನವಿ ಮಾಡಲಾಗಿತ್ತು. ನಮ್ಮ ಭಾಗದಲ್ಲಿ 1996ರಿಂದ ಕಂಪನಿಗಳು ಬರತ್ತಾ ಇದ್ದು, 2008 ರಿಂದಲೇ ಇವುಗಳ ವಿರೋಧ ಆಗುತ್ತಿದೆ. ಇವತ್ತು ನಮ್ಮ ಭಾಗದಲ್ಲಿ ಸುಮಾರು 35 ಕ್ಕೂ ಹೆಚ್ಚು ಕಾರ್ಖಾನೆಗಳು ಇದ್ದು, ಅದರಲ್ಲಿ ಕೆಲವು ದೂಳು ಮುಕ್ತ ಕಾರ್ಖಾನೆಗಳಿವೆ. ಇನ್ನುಳಿದ ಕಾರ್ಖಾನೆಗಳು ದೂಳನ್ನು ಹೋಗಲಾಡಿಸಲು ಯಾವುದೇ ಕ್ರಮ ವಹಿಸುತ್ತಿಲ್ಲ. ಹಾಗಾಗಿ ಜನ ಜಾನುವಾರುಗಳ ಆರೋಗ್ಯದ ಮೇಲೆ ಮತ್ತು ಕೃಷಿ ಮೇಲೆ ದುಷ್ಪರಿಣಾಮ ಉಂಟಾಗುತ್ತಿದೆ. ಗ್ರಾಮಸ್ಥರ ಸಮಸ್ಯೆಗಳಿಗೆ ಪರಿಹಾರವನ್ನು ನೀಡುವ ಉದ್ದೇಶದಿಂದ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರು ಇಂದು ಭೇಟಿ ನೀಡಿದ್ದಾ-ರೆ. ಎಲ್ಲಾ ಗ್ರಾಮಗಳನ್ನು ದೂಳು ಮುಕ್ತ ಗ್ರಾಮ ಮಾಡುವುದೇ ನಮ್ಮ ಧ್ಯೇಯವಾಗಿದೆ ಎಂದು ಹೇಳಿದರು.

ಮಾಜಿ ಸಂಸದ ಕರಡಿ ಸಂಗಣ್ಣ ಅವರು ಮಾತನಾಡಿ, ಕಾರ್ಖಾನೆಗಳು ಹೊರಸೂಸುವ ಹೊಗೆಯಿಂದ ಹಿರೇಬಗನಾಳ ಮತ್ತು ಇತರೆ ಗ್ರಾಮಗಳ ಸಾರ್ವಜನಿಕರು ಸುಮಾರು ದಿನಗಳಿಂದ ಸಮಸ್ಯೆಯನ್ನು ಎದುರಿಸಿಕೊಂಡು ಬಂದಿದ್ದಾರೆ. ಇದು ಒಂದು ನಿರಂತ ಸಮಸ್ಯೆ ಆಗಿದೆ. ಕಾರ್ಖಾನೆಗಳು ತಮ್ಮ ಲಾಭಕೋಸ್ಕರ ಜನರ ಬದುಕಿಗೆ ಮತ್ತು ಮಕ್ಕಳ ಭವಿಷ್ಯಕ್ಕೆ ಸಮಸ್ಯೆಯಾಗಬಾರದು. ಕಾರ್ಖಾನೆಯ ಧೂಳಿನಿಂದ ಪ್ರಾಣಿಗಳ ಮೇಲೆಯೂ ಪರಿಣಾಮ ಬೀರುತ್ತಿದೆ. ಗಾಳಿಯಲ್ಲಿ ತೊಂದರೆ ಆಗುತ್ತಿದೆ.

# ಭೋಸರಾಜು ಜಿಲ್ಲಾ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಭೋಸರಾಜು ಅವರು ಮಾರ್ಚ್ 14, 15ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಮಾರ್ಚ್ 14ರ ಬೆಳಿಗ್ಗೆ 8ಗಂಟೆಗೆ ರಾಯಚೂರಿನಿಂದ ರಸ್ತೆ ಮಾರ್ಗವಾಗಿ ನಿರ್ಗಮಿಸಿ, ಬೆಳಿಗ್ಗೆ 9ಗಂಟೆಗೆ ತೆಲಂಗಾಣ ರಾಜ್ಯದ ಗದ್ವಾಲ್ ಕ್ಷೇತ್ರದ ಶಾಸಕರಾದ ಬಂಡ್ಲಾ ಕೃಷ್ಣಮೋಹನ್ ರೆಡ್ಡಿ ಅವರ ಕುಟುಂಬದ ವಿವಾಹ ಸಮಾರಂಭದಲ್ಲಿ ಭಾಗಿಯಾಗುವರು.

ಬೆಳಿಗ್ಗೆ 10ಗಂಟೆಗೆ ಗದ್ವಾಲ್‌ನಿಂದ ರಸ್ತೆ ಮಾರ್ಗವಾಗಿ ನಿರ್ಗಮಿಸಿ, 11ಕ್ಕೆ ರಾಯಚೂರಿಗೆ ಆಗಮಿಸಲಿದ್ದಾರೆ. 11.30ಕ್ಕೆ ರಾಯಚೂರಿನಿಂದ ನಿರ್ಗಮಿಸಿ, 12ಕ್ಕೆ ಜಿಲ್ಲೆಯ ಮಾನವಿಗೆ ಪ್ರಯಾಣ ಬೆಳೆಸಿ, ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು.ಸಂಜೆ 4ಗಂಟೆಗೆ ಮಾನವಿಯಿಂದ ನಿರ್ಗಮಿಸಿ, ಸಂಜೆ 5ಗಂಟೆಗೆ ರಾಯಚೂರಿನಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು. ಮಾರ್ಚ್ 15ರ ಮಧ್ಯಾಹ್ನ 3ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ, ಸಂಜೆ 4ಕ್ಕೆ ಮಾನವಿಗೆ ಆಗಮಿಸಿ ಸಂಜೆ 6ಗಂಟೆಗೆ ಮಾನವಿ ಪಟ್ಟಣದ ಈದ್ಗಾ ಶಾದಿಮಹಲ್‌ನಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಏರ್ಪಸಿರುವ ಇಫ್ತಿಯಾರ್ ಕೂಟದಲ್ಲಿ ಭಾಗವಹಿಸುವರು.ರಾತ್ರಿ 8ಗಂಟೆಗೆ ರಾಯಚೂರಿಗೆ ಆಗಮಿಸಿ, ಬಳಿಕ ರೈಲ್ವೆ ಮಾರ್ಗವಾಗಿ ರಾಯಚೂರಿನಿಂದ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ವೀರಭದ್ರ ಹಂಚಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿಯುವ ನೀರಿನ ಸಮಸ್ಯೆಗೆ ಕಂಟ್ರೋಲ್ ರೂಮ್ ಪ್ರಾರಂಭ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜಿಲ್ಲೆಯಲ್ಲಿ ಮುಂಬರುವ ಬೇಸಿಗೆ ದಿನಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಸಮಸ್ಯೆಯ ಕುರಿತು ಸಾರ್ವಜನಿಕರು ಮಾಹಿತಿ ನೀಡಲು ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಪಂಚಾಯತ್, ಜಿಲ್ಲೆಯ ಎಲ್ಲಾ ತಾಲೂಕು ತಹಶೀಲ್ದಾರ್ ಕಚೇರಿಗಳಲ್ಲಿ ಹಾಗೂ ತಾಲೂಕು ಪಂಚಾಯತ್ ಕಚೇರಿಗಳಲ್ಲಿ ಕಂಟ್ರೋಲ್ ರೂಮ್ ಪ್ರಾರಂಭಿಸಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಬಳಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಕೋರಲಾಗಿದೆ.ಜಿಲ್ಲಾ ವಿಪತ್ತು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ: 08532-226383 ಅಥವಾ 1077 (ಜಿಲ್ಲಾಧಿಕಾರಿಗಳ ಕಾರ್ಯಾಲಯ ರಾಯಚೂರು), ಜಿಲ್ಲಾ ಪಂಚಾಯತ್ ರಾಯಚೂರು: 8971940129, ತಾಲೂಕು ಪಂಚಾಯತ್ ರಾಯಚೂರು: 9483203052, ತಾಲೂಕು ಪಂಚಾಯತ್ ಮಾನವಿ 9972236690, 7022326090, 8105368046, ತಾಲೂಕು ಪಂಚಾಯತ್ ಸಿಂಧನೂರು: 96113 66894, ತಾಲೂಕು ಪಂಚಾಯತ್ ಲಿಂಗಸೂಗೂರು: 9900577921, 9945226423, 9008727961, ತಾಲೂಕು ಪಂಚಾಯತ್ ದೇವದುರ್ಗ: 08531-260029, 9972353743, ತಾಲೂಕು ಪಂಚಾಯತ್ ಸಿರವಾರ್: 7022278013, 8748838861, 9632544321, ತಾಲೂಕು ಪಂಚಾಯತ್ ಮಸ್ಕಿ: 08537-295522, 08537-270122, ತಹಶೀಲ್ದಾರ ಕಾರ್ಯಾಲಯ ರಾಯಚೂರು:

## ಸೊಳ್ಳೆಗಳ ನಿಯಂತ್ರಿಸಲು ಕ್ರಮ ವಹಿಸಿ




• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ಗ್ರಾಮದಲ್ಲಿ ಸೊಳ್ಳೆಗಳ ಹೆಚ್ಚಳದಿಂದ ಹಾಗೂ ಅಸ್ವಚ್ಛತೆಯಿಂದ ಸಾಂಕ್ರಾಮಿಕ ರೋಗಗಳ ಹರಡುತ್ತಿವೆ, ಸೊಳ್ಳೆಗಳ ನಿಯಂತ್ರಿಸಲು ಸೂಕ್ತಕ್ರಮ ವಹಿಸುವಂತೆ ಮತ್ತು ಸಾರ್ವಜನಿಕರಲ್ಲಿ ಆರೋಗ್ಯ ಅರಿವು ಮೂಡಿಸಲು ಮುಂದಾಗುವಂತೆ ಒತ್ತಾಯಿಸಿ ಎಐಕೆಕೆಎಂಎಸ್ ರೈತ ಸಂಘಟನೆ ವತಿಯಿಂದ ಪಟ್ಟಣ ಸಮೀಪದ ಮುಷ್ಟಗಟ್ಟೆ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿಗೆ ಮನವಿ ಸಲ್ಲಿಸಿದರು.

ಸಂಘದ ಜಿಲ್ಲಾ ಕಾರ್ಯದರ್ಶಿ ಗುರಳ್ಳಿರಾಜ ಮಾತನಾಡಿ, ಮುಷ್ಟಗಟ್ಟೆ ಗ್ರಾಮದಲ್ಲಿ ಇತ್ತೀಚೆಗೆ ಸೊಳ್ಳೆಗಳ ಹಾವಳಿ ಹೆಚ್ಚಾಗುತ್ತಿದ್ದು, ಇದರಿಂದ ಗ್ರಾಮಸ್ಥರಿಗೆ ಹಲವಾರು ಕಾಯಿಲೆ ಹರಡುವ ಭೀತಿ ಉಂಟಾಗುತ್ತಿದೆ, ಗ್ರಾಮ ನೈರ್ಮಲ್ಯ ಪಂಚಾಯಿತಿಯ ಆದ್ಯ ಕರ್ತವ್ಯವಾಗಬೇಕಾದ ಇಂದಿನ ಪರಿಸ್ಥಿತಿಯಲ್ಲಿ, ಅದು ಬರೀ ಹೆಸರಿಗಷ್ಟೇ ಸೀಮಿತವಾಗಿ, ಅಧಿಕಾರಿಗಳು ಗ್ರಾಮದ ಕಡೆ ಸುಳಿಯುತ್ತಿಲ್ಲ, ಜನರ ಸಮಸ್ಯೆಗಳ ಕಡೆ ಗಮನ ಕೊಡುತ್ತಿಲ್ಲ ಎಂಬ ಅಸಮಾಧಾನ ಮನೆಮಾಡುತ್ತಿದೆ. ಇಲ್ಲಿ ನಿಯಮಿತವಾಗಿ ಚರಂಡಿ ಸ್ವಚ್ಛವಾಗುತ್ತಿಲ್ಲ, ಕಸ ವಿಲೇವಾರಿ ಸರಿಯಾಗಿ ನಡೆಯುತ್ತಿಲ್ಲ ಎಂಬುದು ಸೇರಿದಂತೆ ಇತರೆ ಹಲವಾರು ಸಮಸ್ಯೆಗಳನ್ನು ಈ ಗ್ರಾಮದ ಜನರು ಎದುರಿಸುತ್ತಿದ್ದಾರೆ, ಕೂಡಲೇ ತಾವುಗಳು ಜನರ ಆರೋಗ್ಯದ ಹಿತದೃಷ್ಟಿಯಿಂದ ಮುಷ್ಟಗಟ್ಟೆ ಗ್ರಾಮದಲ್ಲಿ ಸಮೀಕ್ಷೆ ಮಾಡಿ ಸೊಳ್ಳೆಗಳಿಗೆ ಫಾಗಿಂಗ್ ಸೇರಿದಂತೆ ಇತರೆ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕೆಂದು. ಸಾರ್ವಜನಿಕರಲ್ಲಿ ಆರೋಗ್ಯ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳ ಆಯೋಜನೆ ಮಾಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಮುಖಂಡ ಬುದ್ದಣ್ಣ, ಬಸವನಗೌಡ, ಪಂಪನಗೌಡ, ಟಿ.ಬಸವನಗೌಡ, ವೀರನಗೌಡ, ಹನುಮಂತ, ಮಾರೆಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮತದಾರರ: ಮ್ಯಾಪಿಂಗ್‌ಗೆ ಬಿಎಲ್‌ಒಗಳಿಗೆ ಮಾಹಿತಿ ಕೊಡಿ ಸಹಕರಿಸಿ: ತಹಶಿಲ್ದಾರ

• ಮಲ್ಲಮ್ಮ ನುಡಿ ವಾರ್ತೆ ಮಸ್ಕಿ



ಭಾರತ ಚುನಾವಣೆ ಆಯೋಗದಿಂದ ಕರ್ನಾಟಕ ರಾಜ್ಯದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಘೋಷಣೆ ಶೀಘ್ರದಲ್ಲೇ ನಿರೀಕ್ಷಿಸಲಾಗಿರುವುದರಿಂದ, ಪೂರ್ವಭಾವಿ ಚಟುವಟಿಕೆಯಾದ ಮ್ಯಾಪಿಂಗ್ ಕಾರ್ಯ ಪ್ರಗತಿಯಲ್ಲಿದ್ದು, 2002ರ ಮತದಾರರ ಪಟ್ಟಿಗೆ ಸಂಬಂಧಿಸಿದ ಈ ಕೆಳಕಂಡ ವಿವರಗಳನ್ನು ಬೂತ್ ಮಟ್ಟದ ಅಧಿಕಾರಿಗಳಿಗೆ ನೀಡಿ ಮ್ಯಾಪಿಂಗ್ ಮಾಡಿಕೊಳ್ಳಬೇಕು ಎಂದು ತಹಶಿಲ್ದಾರಾದ ಮಂಜುನಾಥ ಭೋಗವತಿ ರವರು ತಿಳಿಸಿದ್ದಾರೆ.

ಮ್ಯಾಪಿಂಗ್ 2002ರ ಮತದಾರರ ಪಟ್ಟಿಯನ್ನು 2025ರ ಮತದಾರರ ಪಟ್ಟಿಗೆ ಜೋಡಣೆ ಮಾಡುವುದು. 2002ರ ಮತದಾರರ ಪಟ್ಟಿಯಲ್ಲಿ ಮತದಾರರ ಹೆಸರು ನೋಂದಣಿಯಾಗದಿದ್ದಲ್ಲಿ ಅವರ ತಂದೆ / ತಾಯಿ / ಅಜ್ಜ / ಅಜ್ಜಿಯವರ ಭಾಗ ಸಂಖ್ಯೆ ಹಾಗೂ ಕ್ರಮ ಸಂಖ್ಯೆಯೊಂದಿಗೆ ಜೋಡಣೆ ಮಾಡಿಕೊಳ್ಳಬೇಕು. 2002ರ ಮತದಾರರಾಗಿದ್ದಲ್ಲಿ ನೀವು 2002ರಲ್ಲಿ ವಾಸವಿದ್ದಂತಹ ವಿಧಾನಸಭಾ ಕ್ಷೇತ್ರ ಹೆಸರು, ಭಾಗ ಸಂಖ್ಯೆ ಹಾಗೂ ಕ್ರಮ ಸಂಖ್ಯೆಯನ್ನು ತಮ್ಮ ವ್ಯಾಪ್ತಿಯ ಬೂತ್ ಮಟ್ಟದ ಅಧಿಕಾರಿಗೆ ನೀಡಿ ಸಹಕರಿಸಬೇಕು ಎಂದು ತಿಳಿಸಿದರು.

ಒಂದು ವೇಳೆ ನೀವು 2002ರಲ್ಲಿ ಮತದಾರರಾಗಿ ಇಲ್ಲದಿದ್ದಲ್ಲಿ, ನಿಮ್ಮ ತಂದೆ / ತಾಯಿ / ಅಜ್ಜ / ಅಜ್ಜಿಯವರು ವಾಸವಿದ್ದಂತಹ ವಿಧಾನ ಸಭಾ ಕ್ಷೇತ್ರದ ಹೆಸರು / ಸಂಖ್ಯೆ, ಭಾಗ ಸಂಖ್ಯೆ, ಹಾಗೂ ಕ್ರಮ ಸಂಖ್ಯೆಯನ್ನು ತಮ್ಮ ವ್ಯಾಪ್ತಿಯ ಬೂತ್ ಮಟ್ಟದ ಅಧಿಕಾರಿಗೆ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದರು.

## ಪಿಯುಸಿ ವಿದ್ಯಾರ್ಥಿನಿ ಅಸ್ವಸ್ಥ



• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜರುಗುತ್ತಿರುವ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಪರೀಕ್ಷೆ ಬರೆಯುವ ವಿದ್ಯಾರ್ಥಿನಿ ಲೋ ಬಿಪಿಯಾಗಿ ಬಿಳುವ ಸಂದರ್ಭದಲ್ಲಿ ಎಚ್ಚೆತ್ತುಗೊಂಡ ಕಾಲೇಜಿನ ಪ್ರಾಮಶುಪಾಲರು ಸಮುದಾಯ ಆರೋಗ್ಯ ಕೇಂದ್ರಕ್ಕೆ ಚಿಕಿತ್ಸೆಗಾಗಿ ಅಂಬ್ಯೂಲೇನ್ಸ್ ಮೂಲಕ ಕಳುಹಿಸಿದ್ದಾರೆ.

ತಕ್ಷಣವೇ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಾ. ಲಕ್ಷಣ ನಾಯಕ್ ವಿದ್ಯಾರ್ಥಿನಿಗೆ ಚಿಕಿತ್ಸೆ ನೀಡಿದ್ದಾರೆ. ವಿದ್ಯಾರ್ಥಿನಿ ಬೇಗನೆ ಚೇತರಿಸಿಕೊಂಡು ಪರೀಕ್ಷೆ ಬರೆದಿದ್ದಾಳೆ.

ವಿದ್ಯಾರ್ಥಿನಿಯ ಅನಾರೋಗ್ಯ ಗುರುತಿಸಿದ ಪ್ರಾಂಶುಪಾಲ ಡಾ.ವೇಣುಗೋಪಲ ಮತ್ತು ಉಪನ್ಯಾಸಕರ ಕಾರ್ಯ ಶ್ಲಾಘನೀಯ ಎಂದರು.

ಅಂಬುಲೆನ್ಸ್ ಚಾಲಕ ಸುಲೇಮಾನ್, ಶುಶ್ರೂಷಣಾಧಿಕಾರಿ ಶೈಲಜಾ, ವಿಶಾಲಾಕ್ಷಿ, ಆಶಾ ಕುಮಾರಿ ರವರ ಸ್ಪಂಧನೆಯ ಚಿಕಿತ್ಸೆಯಿಂದ ವಿದ್ಯಾರ್ಥಿನಿಯ ಆರೋಗ್ಯದಲ್ಲಿ ಚೇತರಿಕೆ ಕಾಣಿಸಿಕೊಂಡಿತು. ವಿದ್ಯಾರ್ಥಿನಿಯ ಪೋಷಕರು ಈ ಕಾರ್ಯವನ್ನು ಕೊಂಡಾಡಿದರು.

## ಮಹಿಳೆಯರ ಮಕ್ಕಳ ರಕ್ಷಣಾ ಕಾವಲು ಸಮಿತಿಯ ಸಭೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆ ಕಂಪ್ಲಿ ತಾಲೂಕಿನ ಪುರಸಭೆ ಕಚೇರಿ ಆವರಣದಲ್ಲಿ ಬಳ್ಳಾರಿ ಎಸಿ. ಎಚ್.ಡಿ.ರಾಜೇಶ್ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿ, ಶಾಲೆಯಲ್ಲಿ ಮೊದಲೇ ಮಹಿಳಾ ಶಿಕ್ಷಕಿಯರು ಉಪಸ್ಥಿತಿಯಲ್ಲಿದ್ದು ಮಕ್ಕಳ ಕಾಳಜಿವಹಿಸಬೇಕು. ಶಾಲೆಯ ಶೌಚಾಲಯಗಳಿಗೆ ಸ್ಥಳೀಯ ಆಡಳಿತದಿಂದ ನೀರು ವ್ಯವಸ್ಥೆ ಪಡೆದುಕೊಂಡು ಸ್ವಚ್ಛವಾಗಿಡುವಲ್ಲಿ, ಮಕ್ಕಳಸ್ನೇಹಿ ಶಾಲೆಯನ್ನಾಗಿ ರೂಪಿಸುವಲ್ಲಿ ಶಿಕ್ಷಕರು ಮುತುವರ್ಜಿವಹಿಸಬೇಕು.

ಬಾಲ್ಯ ವಿವಾಹಗಳು ನಡೆದಲ್ಲಿ ಬಾಲ್ಯವಿವಾಹ ನಿಷೇಧಾಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು.

ಮಹಿಳೆ ಮತ್ತು ಮಕ್ಕಳ ರಕ್ಷಣೆ ಹಕ್ಕುಗಳ ಕುರಿತು ನಿರ್ಲಕ್ಷ ತೋರುವ ಅಧಿಕಾರಿಗಳ ವಿರುದ್ಧ ಸೂಕ್ತಕ್ರಮ ಕೈಗೊಳ್ಳಲಾಗುವುದು ಎಂದರು.

ಈ ಕಾವಲು ಸಮಿತಿಗಳನ್ನು ಈಗಾಗಲೇ ಪ್ರತಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸ್ಥಾಪಿಸಲಾಗಿದೆ. ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ಥಳೀಯ ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳು ಮತ್ತು ನಾಗರಿಕ ಸಮಾಜದ ಸದಸ್ಯರನ್ನು ಹೊಂದಿರುವ ಇದೇ ರೀತಿಯ ಸಮಿತಿಗಳನ್ನು ರಚಿಸುವಂತೆ ಬೇಡಿಕೆ ಹೆಚ್ಚಿತ್ತು. ಅವರ ಬೇಡಿಕೆಯನ್ನು ಪರಿಗಣಿಸಿ, ರಾಜ್ಯ ಸರ್ಕಾರವು ನವೆಂಬರ್ 26 ರಂದು ಸುತ್ತೋಲೆಯನ್ನು ಹೊರಡಿಸಿ, ಮಕ್ಕಳ ಮತ್ತು ಮಹಿಳೆಯರ ಕಳ್ಳಸಾಗಣೆ, ಬಾಲ್ಯ ವಿವಾಹ ಮತ್ತು ಮಕ್ಕಳ ಹಕ್ಕುಗಳ ರಕ್ಷಣೆಯನ್ನು ತಡೆಗಟ್ಟಲು ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಕಾವಲು ಸಮಿತಿಗಳನ್ನು ರಚಿಸುವಂತೆ ನಿರ್ದೇಶಿಸಿದೆ.

ನಗರ ಸ್ಥಳೀಯ ಸಂಸ್ಥೆಯ ಮುಖ್ಯಸ್ಥರು ಅಥವಾ ಅಧ್ಯಕ್ಷರು, ಸಮಿತಿಯ ಅಧ್ಯಕ್ಷರಾಗಿರುತ್ತಾರೆ ಮತ್ತು ಮಹಿಳಾ ನಗರ ಸ್ಥಳೀಯ ಸಂಸ್ಥೆಯ ಸದಸ್ಯರು ಉಪಾಧ್ಯಕ್ಷರಾಗಿರುತ್ತಾರೆ. ನಗರ ಸ್ಥಳೀಯ ಸಂಸ್ಥೆಯ ಇಬ್ಬರು ಸದಸ್ಯರು, ಬ್ಲಾಕ್ ಶಿಕ್ಷಣ ಅಧಿಕಾರಿಗಳು (ಃಇಔ), ತಾಲ್ಲೂಕು ಆರೋಗ್ಯ ಅಧಿಕಾರಿ (ಖಿಊಔ), ಆ ನಿರ್ದಿಷ್ಟ ನಗರ ಸ್ಥಳೀಯ ಸಂಸ್ಥೆಯ ಮಿತಿಯ ಸಬ್-ಇನ್ಸ್‌ಪೆಕ್ಟರ್, ಓಉಔ ಯ ಇಬ್ಬರು ಮಹಿಳಾ ಸದಸ್ಯರು, ಪ್ರೌಢಶಾಲಾ ವಿದ್ಯಾರ್ಥಿನಿ, ಕಾರ್ಮಿಕ ಅಧಿಕಾರಿ, ಸಮಾಜ ಕಲ್ಯಾಣ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತ ಇಲಾಖೆಗಳ ತಲಾ ಒಬ್ಬ ಅಧಿಕಾರಿ, ವಾರ್ಡ್ ಮಟ್ಟದ ಅಧಿಕಾರಿಗಳು ಸಮಿತಿಯ ಸದಸ್ಯರಾಗಿರುತ್ತಾರೆ.

ಕಾವಲು ಸಮಿತಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಬೇಕು ಮತ್ತು ನಗರ ಸ್ಥಳೀಯ ಸಂಸ್ಥೆಯ ಮಟ್ಟದಲ್ಲಿ ಎಲ್ಲಾ ಮಕ್ಕಳ ವಿವರಗಳನ್ನು ಒದಗಿಸುವಂತೆ ಅವರಿಗೆ ಸೂಚಿಸಲಾಗಿದೆ.

ಸಭೆಯಲ್ಲಿ ಮಹಿಳೆಯರ ಮತ್ತು ಮಕ್ಕಳ ಕವಾಲು ಸಮಿತಿ ರಚನೆ, ಸಮಿತಿಯ ಕರ್ತವ್ಯ-ಜವಾಬ್ದಾರಿಗಳು, ಕ್ರಿಯಾ ಯೋಜನೆ ರೂಪಿಸುವುದು, ತಡೆದ ಬಾಲ್ಯವಿವಾಹ ಹಾಗೂ ಪೋಕ್ಸೋ ಪ್ರಕರಣಗಳ ಸ್ಥಿತಿಗತಿ, ಭಿಕ್ಷಾಟನೆಗೆ ಒಳಗಾದ ಮಕ್ಕಳ ರಕ್ಷಣೆ, ಶಾಲೆಯಿಂದ ಹೊರಗುಳಿದ ಮಕ್ಕಳು, ಸಂಕಷ್ಟದಲ್ಲಿರುವ ಮಕ್ಕಳು ಸೇರಿ ನಾನಾ ವಿಷಯಗಳ ಕುರಿತು ಚರ್ಚಿಸಲಾಯಿತು. ಮಕ್ಕಳ ಹಕ್ಕುಗಳ ನಿಗಾ ಘಟಕದ ಸದಸ್ಯ ಡಾ.ಎಚ್.ಸಿ.ರಾಘವೇಂದ್ರ, ರೀಡ್ಸ್ ಸಂಸ್ಥೆ ನಿರ್ದೇಶಕ ಸಿ.ತಿಪ್ಪೇಶಪ್ಪ, ತಹಸೀಲ್ದಾರ್ ಜೂಗಲ ಮಂಜುನಾಯಕ, ಅಧಿಕಾರಿಗಳಾದ ಬಿ.ಮಲ್ಲಿಕಾರ್ಜುನ, ಕೆ.ಬಿ.ವಾಸುಕುಮಾರ್, ಡಾ.ಜಿ.ಅರುಣ್, ಲತೀಫಾಬೇಗಂ, ಸುಜಾತಾ, ಟಿ.ಎಂ.ಬಸವರಾಜ, ಪಿ.ಬಸವರಾಜ, ಮಲ್ಲಪ್ಪ, ಗಾದಿಲಿಂಗಪ್ಪ, ಪ್ರಶಾಂತ ಚಿತ್ರಗಾರ, ಸಾಮಾಜಿಕ ಹೋರಾಟಗಾರ ಟಿ.ಎಚ್.ಎಂ.ರಾಜಕುಮಾರ ಸೇರಿ ಇತರರಿದ್ದರು.

## ಐದೂ ಗ್ಯಾರಂಟಿಗಳ ಜಾಗೃತಿ ಮೂಡಿಸಿ



• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು

ಐದೂ ಗ್ಯಾರಂಟಿ ಯೋಜನೆಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ಪ್ರತಿ ತಿಂಗಳು ತಲುಪಬೇಕು ಹಾಗೂ ಸರಕಾರದ ಯೋಜನೆಗಳ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ ತಲುಪವಂತೆ ತಾಲೂಕು ಮಟ್ಟದ ಅಧಿಕಾರಿಗಳು ಸೂಕ್ತಕ್ರಮ ವಹಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆಇ.ಚಿದಾನಂದಪ್ಪ ಕರೆ ನೀಡಿದರು.

ಅವರು ಪಟ್ಟಣದ ರೈತ ಸಮುದಾಯ ಭವನದಲ್ಲಿ ತಾಪಂ. ಮತ್ತು ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ತಾಲೂಕು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ ಉದ್ಘಾಟಿಸಿ ಮಾತನಾಡಿದರು.

ರಾಜ್ಯ ಸರಕಾರವು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಡವರ, ಮಹಿಳೆಯರ ಸ್ವಾವಲಂಬಿ ಜೀವನ ಸಾಗಿಸಲು ಸಾಧ್ಯವಾಗುತ್ತದೆ ಮತ್ತು ಆರ್ಥಿಕ ಸದೃಢವಾಗಿರುತ್ತದೆ. ರಾಜ್ಯದ ಪ್ರತಿ ವಿಧಾನಸಭಾ ವ್ಯಾಪ್ತಿಯಲ್ಲಿ ವರ್ಷಕ್ಕೆ 233ಕೋಟಿ.ರೂ ಗ್ಯಾರಂಟಿ ಯೋಜನೆಗಳಿಗೆ ವೆಚ್ಚಮಾಡಲಾಗುತ್ತಿದೆ. ಪ್ರತಿಯೊಂದು ಇಲಾಖೆಯ ಅಧಿಕಾರಿಗಳು ಸಾರ್ವಜನಿಕರಿಗೆ ದೊರೆಯುವ ಸೌಲಭ್ಯಗಳನ್ನು ಅಚ್ಚುಕಟ್ಟಾಗಿ ತಲುಪುವಂತೆ ನಿಗವಹಿಸಬೇಕು. ಮಹಿಳಾ ಸಬಲೀಕರಣದ ಮೂಲಕ ಇಡೀ ರಾಜ್ಯವನ್ನು ಪ್ರಗತಿ ಪಥದತ್ತ ನಡೆಸುವ ಸಂಕಲ್ಪ ಹೊಂದಿದ್ದಾರೆ. ಗೃಹಲಕ್ಷ್ಮಿ ಫಲಾನುಭವಿಗಳನ್ನು ಸ್ವಸಹಾಯ ಗುಂಪುಗಳ ಸದಸ್ಯರನ್ನಾಗಿಸಿ ಉಳಿತಾಯ ಮತ್ತು ಉದ್ಯಮಶೀಲತೆ ಹೆಚ್ಚಿಸಲು ಆನೇಕ ಯೋಜನೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ದಿಗೆ ಪೂರಕವೆಂದು ಪ್ರತಿಯೊಬ್ಬರಿಗೂ ಮನವರಿಕೆ ಮಾಡಲು ಮುಂದಾಗಬೇಕು. ತಾಲೂಕಿನ ಸರ್ವತೋಮುಖ ಅಭಿವೃದ್ಧಿಗೆ ಪ್ರತಿಯೊಂದು ಇಲಾಖೆಯ ಅಧಿಕಾರಿಗಳು ಶ್ರಮವಹಿಸಬೇಕು. ಇನ್ನೂ ಸಾರ್ವಜನಿಕರಿಗೆ ಸರಕಾರದ ಪ್ರತಿಯೊಂದು ಯೋಜನೆಗಳನ್ನು ಮುಟ್ಟಿಸವಲ್ಲಿ ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಕರೆ ನೀಡಿದರು.

ನಂತರ ಸಭೆಯಲ್ಲಿ ಕುರುಗೋಡು ತಾಲೂಕು ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಬಸವನಗೌಡ ಮಾತನಾಡಿದರು. ತದನಂತರ ವಿವಿಧ ಇಲಾಖೆಯ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಚರ್ಚಿಸಿ ಅಭಿವೃದ್ಧಿ ಕುರಿತು ಪರಿಶೀಲನೆ ನಡೆಸಿದರು.

ತದನಂತರ ತಾಪಂ. ಇಓ ಕೆವಿ.ನಿರ್ಮಲ ಮಾತನಾಡಿ, ಮಹಿಳಾ ದಿನಾಚರಣೆ ಕುರಿತು ಮಾತನಾಡಿದರು.

ಸಭೆಯಲ್ಲಿ ನರೇಗಾ ಎಡಿ ಶಿವರಾಮರೆಡ್ಡಿ, ಗ್ಯಾರಂಟಿ ಯೋಜನೆಯ ಸದಸ್ಯ ಆನಂದ್, ರವಿಕುಮಾರ್ ರೆಡ್ಡಿ, ಶಿವರಾಜ್, ಜಡೆಪ್ಪ, ಗೋಪಾಲ, ಕಾಶಿನಥಸ್ವಾಮಿ, ಯು.ಗಂಗಾಧರ, ಬಸವಪುರ ಈರಣ್ಣ, ರಾಮಲಿಂಗ, ಬಿ.ಬಾಬು, ಹನುಮಂತ, ಶಾಳೆರು ಕೃಷ್ಣ, ಶೇಕ್ಷವಲಿ, ಲಿಂಗಪ್ಪ, ಹುಲಿಗೇಶ್ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಂದು ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಮನ್ನಾ-ಎ-ಖೇಳಿ ಉಪ-ವಿಭಾಗದ 110 ಕೆ.ವಿ. ಮನ್ನಾ-ಎ-ಖೇಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ಕೆಲಸದ ಅಂಗವಾಗಿ ಟ್ರಾನ್ಸ್ಫಾರ್ಮರ್‌ಗಳ ಮೇಲೆ ದುರಸ್ತಿ ನಿರ್ವಹಣೆ ಕೈಗೊಳ್ಳುತ್ತಿರುವುದರಿಂದ 33 ಕೆ.ವಿ. ಬೆಮಳ್‌ಖೇಡ ವಿದ್ಯುತ್ ವಿತರಣಾ ಕೇಂದ್ರಕ್ಕೆ ಹಾದು ಹೋಗುವ ಲೈನ್‌ಗಳಾದ 11 ಕೆ.ವಿ. ಮರಕುಂದಎನ್.ಜೆ.ವೈ, 11 ಕೆ.ವಿ. ಖೇಣಿ ರಾಜೋಳ ಐ.ಪಿ, 11 ಕೆ.ವಿ. ಮೀನ್‌ಕೇರಾ ಐ.ಪಿ, 11 ಕೆ.ವಿ. ಬೋರಳ ಎನ್.ಜೆ.ವೈ, 11 ಕೆ.ವಿ. ಮನ್ನಾ-ಎ-ಖೇಳಿ ಎನ್.ಜೆ.ವೈ, 11 ಕೆ.ವಿ. ನಿಡವಂಚ ಎನ್.ಜೆ.ವೈ,11 ಕೆ.ವಿ. ಭಂಗೂರ್ ಐ.ಪಿ, 11 ಕೆ.ವಿ. ಮಂಗಲ್ಗಿ ಐ.ಪಿ ಮತ್ತು 11 ಕೆ.ವಿ. ರೇಕುಳಗಿ ಐ.ಪಿ ಫೀಡರಗಳ ವ್ಯಾಪ್ತಿಗೆ ಬರುವ ಸುತ್ತಲಿನ ಗ್ರಾಮಗಳಾದ ಬೆಮಳ್‌ಖೇಡ, ಮರಕುಂದ, ಖೇಣಿರಾಜೋಳ, ಮೀನ್‌ಕೇರಾ, ಬೋರಳ, ನಿಡವಂಚ, ಭಂಗೂರ್, ಮಂಗಲ್ಗಿ, ರೇಕುಳಗಿ ಮತ್ತು ಸುತ್ತಲಿನ ಗ್ರಾಮಗಳಿಗೆ ದಿನಾಂಕ: 14-03-2026 ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.

ಕಾರಣ ಎಲ್ಲಾ ವಿದ್ಯುತ್ ಗ್ರಾಹಕರು ಜೆಸ್ಕಾಂ ಇಲಾಖೆಯೊಂದಿಗೆ ಸಹಕರಿಸಲು ಬೀದರ ಕಾರ್ಯ ಮತ್ತು ಪಾಲನೆ ವೃತ್ತ ಅಧೀಕ್ಷಕ ಇಂಜಿನಿಯರ್(ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲಾವಿದರ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯವತಿಯಿಂದ ' ವಚನ ಕಲ್ಯಾಣ 'ಎಂಬ ಅಹೋರಾತ್ರಿ (ಒಂಬತ್ತು ಗಂಟೆ) ನಾಟಕವನ್ನು ಸಿದ್ಧಪಡಿಸಿ, ನಾಡಿನಾದ್ಯಂತ ಪ್ರದರ್ಶನ ಮಾಡಲು ಇಲಾಖೆ ಉದ್ದೇಶಿಸಿದೆ. ಆ ಸಂಬಂಧ ನುರಿತ ಹಾಗೂ ಆಸಕ್ತ ಯುವಕ ಯುವತಿಯರು ಹಾಗೂ ಅನುಭವಿ ರಂಗಕಲಾವಿದರು/ಗಾಯಕರುಗಳಿಂದ ಅರ್ಜಿಗಳನ್ನು ಅಹ್ವಾನಿಸಿದೆ (ಅರ್ಜಿ ಲಗತ್ತಿಸಿದೆ), ವಯೋಮಿತಿ 18 ರಿಂದ 40 ವರ್ಷಗಳು ರಂಗಶಿಕ್ಷಣದಲ್ಲಿ ತರಬೇತಿ ಪಡೆದ ಹಾಗೂ ನಾಟಕಗಳಲ್ಲಿ ಅಭಿನಯಿಸಿದ ಕಲಾವಿದರಿಗೆ ಅದ್ಯತೆಯನ್ನು ನೀಡಲಾಗುವುದು. ತುಂಬಿದ ಅರ್ಜಿಗಳನ್ನು ದಿನಾಂಕ 20ಮಾರ್ಚ್2026ರ ಒಳಗೆ ಸದಸ್ಯ ಕಾರ್ಯದರ್ಶಿ ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು-560056. ಇಲ್ಲಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪುವಂತೆ ಅಥವಾ ಮೇಲ್ ವಿಳಾಸ: kanakaresearchcentre@gmail.com ದ ಮೂಲಕ ಸಲ್ಲಿಸಲು ಕೋರಿದೆ.

ಆಯ್ಕೆಯಾದ ಅಭ್ಯರ್ಥಿಗಳು ಮೂರು ತಿಂಗಳ ಕಾಲದ ಅವಧಿಯಲ್ಲಿ ಪೂರ್ಣಕಾಲಿಕವಾಗಿ ತರಬೇತಿ-ಪ್ರದರ್ಶನಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ. ಮಾಸಿಕ ಗೌರವಧನ ಮತ್ತು ಊಟ -ವಸತಿ ವ್ಯವಸ್ಥೆಯನ್ನು ಮಾಡಲಾಗುವುದು. ಅರ್ಜಿಯ ನಮೂನೆಯನ್ನು ಕನ್ನಡ ಸಂಸ್ಕೃತಿ ಇಲಾಖೆಯ ವೆಬ್ ಸೈಟ್ kannadasiri.karnataka.gov.inನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿ ವಿವರಗಳಿಗಾಗಿ ಶ್ರೀ ಸಿ. ಬಸವಲಿಂಗಯ್ಯ(ವಚನ ಕಲ್ಯಾಣ ನಾಟಕದ ನಿರ್ದೇಶಕರು) ಇವರಲ್ಲಿ ಮಾಹಿತಿ ಪಡೆಯಬಹುದು ಮೊಬೈಲ್ ಸಂಪರ್ಕ ಸಂಖ್ಯೆ- 94485 38620. ಸಂದರ್ಶನಕ್ಕೆ ಹಾಜರಾಗುವ ಕಲಾವಿದರಿಗೆ ಇಲಾಖೆಯು' ಯಾವುದೇ ಭತ್ಯೆ ನೀಡಲಾಗುವುದಿಲ್ಲ.

## ಸರಸ್ವತಿ ಪೂಜೆ, ವಿದ್ಯಾರ್ಥಿಗಳ ಬೀಳ್ಕೊಡುಗೆ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು: ಶಿವಮ್ಮ



• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಕೊಪ್ಪಳ ಜಿಲ್ಲೆ, ಗಂಗಾವತಿ ತಾಲೂಕಿನ ಹೆಬ್ಬಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ತಂದೆತಾಯಿಗಳಿಗೆ ಪಾದಪೂಜೆ ಸರಸ್ವತಿ ಪೂಜೆ ಹಾಗೂ 7ನೇ ತರಗತಿ ಹಾಗೂ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮ ಉದ್ಘಾಟಿಸಿದರು

ಬಾಲ್ಯ ಜೀವನದಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರಯುತ ಶಿಕ್ಷಣವನ್ನು ನೀಡುವ ಹೊಣೆಗಾರಿಕೆ ಪ್ರಾಥಮಿಕ ಶಾಲೆಯ ಶಿಕ್ಷಕರಿಗೆ ಇದೆ. ಆದ್ದರಿಂದ ಗ್ರಾಮೀಣ ಪ್ರದೇಶಗಳ ಶಾಲೆಗಳು ರಾಷ್ಟ್ರ ಭವಿಷ್ಯವನ್ನು ನಿರ್ಣಯಿಸುವ ಶಕ್ತಿಯನ್ನು ಹೊಂದಿವೆ. ಗ್ರಾಮದ ಶಾಲೆಯ ಅಭಿವೃದ್ಧಿಗಾಗಿ ಸಹಕಾರ ನೀಡಲು ಸಿದ್ಧರಾಗಿರುವುದಾಗಿ ಮುಖ್ಯ ಗುರುಗಳಾದ ರವೀಂದ್ರಕರಣಂ ತಿಳಿಸಿದರು.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಲಿಂಗರಾಜು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಶ್ರೀಮತಿ ರೂಪ ಶ್ರೀಮತಿ ಲಕ್ಷ್ಮಿ ಮರಿಜಡಿಯಪ್ಪ ಡಿ.ಎಸ್. ಕಿರಣ್ ಕುಮಾರ್ ಶ್ರೀಮತಿ ಸರೋಜಾ ಹಾಗೂ ಊರಿನ ಎಲ್ಲಾ ಮುಖಂಡರು ಹಾಗೂ ಎಲ್ಲಾ ಎಸ್ಡಿಎಂಸಿ ಸದಸ್ಯರಾದ ರುದ್ರೇಶ ಶಿಕ್ಷಣ ಪ್ರೇಮಿಗಳಾದ

ತಾಯಪ್ಪ ಹಾಗೂ ಶಾಲೆಯ ವಿದ್ಯಾರ್ಥಿ ವಿದ್ಯಾರ್ಥಿನಿಯರು ಸರಸ್ವತಿ ಪೂಜೆ ಹಾಗೂ ತಂದೆ ತಾಯಿಗಳ ಪಾದ ಪೂಜೆ ಕಾರ್ಯಕ್ರಮ ಹಾಗೂ 7ನೇ ತರಗತಿ ವಿದ್ಯಾರ್ಥಿ ಬೀಳ್ಕೊಡುಗೆ ಸಂಭ್ರಮದಲ್ಲಿ ಪಾಲ್ಗೊಂಡಿದ್ದರು

## ಸದ್ವಿಚಾರ ಸಚ್ಚಾರಿತ್ರ್ಯ, ಸದ್ಗುಣಗಳಿಂದ ಜೀವನ ಆನಂದಮಯ: ಯೋಗಿನಿ ಅಕ್ಕ




• ಮಲ್ಲಮ್ಮನುಡಿವಾರ್ತೆ ಕೊಪ್ಪಳ

ಮಹಿಳೆಯರು ಸದ್ವಿಚಾರ ಸಚ್ಚಾರಿತ್ರ್ಯಸದ್ಗುಣಗಳಿಂದ ತಮ್ಮನ್ನು ಶೃಂಗರಿಸಿಕೊಳ್ಳಿ ಆಗ ಜೀವನವೇ ಸುಖ ಶಾಂತಿ, ಆನಂದಮಯ ಜೀವನವಾಗುತ್ತದೆ ಎಂದು ಬ್ರಹ್ಮಕುಮಾರಿ ಯೋಗಿನಿ ಅಕ್ಕ ಕರೆ ನೀಡಿದರು.

ಅವರು ನಗರದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯ ದಲ್ಲಿ ವಿಶ್ವ ಮಹಿಳಾ ದಿನಾಚರಣೆ-ಯ ಪ್ರಯುಕ್ತ ಏರ್ಪಡಿಸಿದ ಕಾರ್ಯಕ್ರಮದ ಸಾನಿಧ್ಯವನ್ನು ವಹಿಸಿ ಮಾತನಾಡುತ್ತಾ ಮಹಿಳೆಯರು ಸಿನಿಮಾ ಪಾಶ್ಚಿಮಾತ್ಯ ಸಂಸ್ಕೃತಿಯ ಪ್ರಭಾವಗಳಿಗೆ ವಶರಾಗದೆ ಮರ್ಯಾದೆಯ ಚೌಕಟ್ಟಿನಲ್ಲಿ ಇದ್ದಾಗ ಅದೇ ಹೆಣ್ಣಿಗೆ ರಕ್ಷಣೆ-ಯಾಗುತ್ತದೆ ನಮ್ಮ ದೇಶದಲ್ಲಿ ವಿದ್ಯೆಗೆ ಸರಸ್ವತಿ, ಧನ ಸಂಪತ್ತಿಗೆ ಲಕ್ಷ್ಮಿ, ಶಕ್ತಿಗೆ ದುರ್ಗೆಯನ್ನು ತೋರಿಸುತ್ತಾರೆ ಸ್ತ್ರೀಯರಿಗೆ ಭಾರತೀಯ ಸಂಸ್ಕೃತಿಯಲ್ಲಿ ಪೂಜ್ಯ ಗೌರವದ ಸ್ಥಾನವಿದೆ ಎಂದರು,

ಮುಂದುವರೆದು ಮಾತನಾಡಿ ಮಹಿಳೆಯರಿಗೆ ಆಧ್ಯಾತ್ಮ ಬಲವೇ ಸತ್ಯವಾದ ರಕ್ಷಾ ಕವಚ. ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿ ಆಗುವುದರ ಜೊತೆಗೆ ಮಾನಸಿಕವಾಗಿ ಆಂತರಿಕವಾಗಿ ಸಶಕ್ತರಾಗಬೇಕು ಅದಕ್ಕೆ ಆಧ್ಯಾತ್ಮ ಮತ್ತು ಧ್ಯಾನ ಆಧಾರವಾಗಿದೆ. ಮಹಿಳೆ ತ್ಯಾಗ ಸಹನೆ ಪ್ರೀತಿ ವಾತ್ಸಲ್ಯ ಕ್ಷಮೆಯ ಪ್ರತಿರೂಪ. ಮನೆ ಮಂದಿರವಾಗಬೇಕಾದರೆ ಮಹಿಳೆಯರ ಪಾತ್ರ ಬಹಳ ಮುಖ್ಯ ಎಂದರು. ಅತ್ತೆಯರು ಸೊಸೆಯರನ್ನ ಮಗಳಂತೆ ಕಾಣಬೇಕು ಸೊಸೆಯರು ಅತ್ತೆಯರನ್ನು ತಾಯಿಯಂತೆ ಕಾಣಬೇಕು ಈಶ್ವರಿಯ ಜ್ಞಾನಮಾರ್ಗದಲ್ಲಿ ನಡೆಯುತ್ತಾ ಪರಸ್ಪರ ಪ್ರೀತಿ ಸ್ನೇಹ ಹೊಂದಾಣಿಕೆಯಿಂದ ಜೀವನ ನಡೆಸಲು ತಿಳಿ ಹೇಳಿದರು

ಇದೇ ಸಂದರ್ಭದಲ್ಲಿ ಅತ್ತೆ-ಯರಿಗೆ ಸೊಸೆಯರಿಂದ ಸನ್ಮಾನ ಏರ್ಪಡಿಸಲಾಗಿತ್ತು ಸೊಸೆಯರು ತಮ್ಮ ಅತ್ತೆಯರಿಗೆ ಉಡುಗೊರೆ ನೀಡಿ ಸನ್ಮಾನಿಸಿ ಅವರಿಂದ ಆಶೀರ್ವಾದ ಪಡೆದರು ಅತ್ತೆ-ಯರು ಸೊಸೆಯರಿಗೆ ಧನ್ಯವಾದ ಹೇಳಿದರು ಸುಮಾರು 500 ಜನ ಕಾರ್ಯಕ್ರಮದ ಲಾಭ ಪಡೆದು ಅರ್ಥಪೂರ್ಣ ಕಾರ್ಯಕ್ರಮ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು, ಬಿಕೆ ಸ್ನೇಹಕ್ಕ ಕಾರ್ಯಕ್ರಮ ನಿರೂಪಿಸಿದರು.

## ವಿವಿಧೆಡೆ ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ವ್ಯಾಪ್ತಿಯಲ್ಲಿ ಹಳೆ ವಿದ್ಯುತ್ ಕಂಬಗಳ ಬದಲಾವಣೆ ಕಾಮಗಾರಿ ಕೈಗೊಳ್ಳುತ್ತಿರುವ ಪ್ರಯುಕ್ತ ಮಾರ್ಚ್ 14ರ ಬೆಳಿಗ್ಗೆ 11ರಿಂದ ಸಂಜೆ 4ರವರಗೆ ನಗರದ ವಿವಿಧ ಕಡೆ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.ಅಂದು ಬೆಳಿಗ್ಗೆಯಿಂದ ಸಿಟಿ ಟಾಕೀಸ್ ರೋಡ್, ಮಾಂಗಳ್ಯ, ಸಿ.ಎಮ್.ಆರ್ ಶಾಂಪಿಂಗ್ ಮಾಲ್, ಗಾಂಧಿ ಚೌಕ್, ಮಹಾವೀರ್ ಚೌಕ್, ಮಹಾಲೇಶ್ವರ ವೃತ್ತ, ಕುಂಬಾರ್ ಓನಿ, ಮಕ್ತಲ ಪೇಟೆ, ಮದ್ದಿಪೇಟೆ, ವಡ್ಡೆಪ್ಪ ಜಿನ್ನ, ಸುರಕ್ಷ ಆಸ್ಪತ್ರೆ, ಬ್ರೆಸ್ತವಾರ ಪೇಟೆ (ಪಿಂಜಾರ್ ವಾಡಿ), ಗೋಶಾಲ ರಸ್ತೆ, ಅರಬ್ ಮೊಹಲ್ಲಾ, ಸಿಯಾತಲಾಬ, ಆಟೋ ನಗರ, ಶಿವಂ ಆಸ್ಪತ್ರೆ, ಜಿಲ್ಲಾ ಅಗ್ನಿ ಶಾಮಕ ಕಚೇರಿ, ಜಿಲ್ಲಾ ಪಂಚಾಯತಿ, ಗಂಜ್ ರಸ್ತೆ ಯಿಂದ ಬಸವನ ಬಾವಿ, ಜಿಲ್ಲಾ ಅರಣ್ಯ ಕಚೇರಿಯ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ 24*7 ಗ್ರಾಹಕರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಯಂತಿ ಪೂರ್ವಭಾವಿ ಸಭೆ

ರಾಯಚೂರು: ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಮಾರ್ಚ್ 23ರಂದು ದೇವರ ದಾಸಿಮಯ್ಯ ಜಯಂತಿ ಹಾಗೂ ಮಾರ್ಚ್ 31ರಂದು ಭಗವಾನ್ ಮಹಾವೀರ್ ಜಯಂತಿ ನಡೆಯಲಿವೆ.

ಈ ಜಯಂತಿಗಳ ಅಂಗವಾಗಿ ಮಾರ್ಚ್ 17ರ ಬೆಳಿಗ್ಗೆ 11ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗರ್ಭಕಂಠದ ಕ್ಯಾನ್ಸರ್ ಲಸಿಕಾ ಅಭಿಯಾನಕ್ಕೆ ಚಾಲನೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಾದ್ಯಂತ ಇಂದಿನಿಂದ 14 ವರ್ಷದೊಳಗಿನ ಹೆಣ್ಣುಮಕ್ಕಳಿಗೆ ಗರ್ಭಕಂಠದ ಕ್ಯಾನ್ಸರ್ ಬರುವುದನ್ನು ತಡೆಯಲು,ಹೂಮನ್ ಪ್ಯಾಪಿಲೋಮ ಎಂಬ ವೈರಸ್ (ಎಚ್.ಪಿ.ವಿ) ಲಸಿಕೆ ನೀಡುವ ವಿಶೇಷ ಅಭಿಯಾನಕ್ಕೆ ಇಂದು ಜಿಲ್ಲಾ ಆಸ್ಪತ್ರೆಯಲ್ಲಿ ಚಾಲನೆ ನೀಡಲಾಗಿದೆ.

ಜಿಲ್ಲಾ ಪಂಚಾಯ್ತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಇದಕ್ಕೆ ಚಾಲನೆ ನೀಡಿ. ಈ ಲಸಿಕೆ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಬರುವ ತಪ್ಪು ಸುದ್ದಿಗಳನ್ನು ನಂಬಬೇಡಿ. ಇದನ್ನು ಎಲ್ಲಾ ರೀತಿ ಪ್ರಯೋಗ ಮಾಡಿ ಹಾಕಲಾಗುತ್ತಿದೆ. ಇತರೇ ಲಸಿಕೆ ಹಾಕಿಸಿಕೊಂಡಾಗ ಬರುವ ಒಂದಿಷ್ಟು ಜ್ವರ ಕೆಲವರಿಗೆ ಮಾತ್ರ ಬರಬಹುದು. ಯಾವುದೇ ಸೈಡ್ ಎಫೆಕ್ಟ್ ಇಲ್ಲ. ಎಲ್ಲರೂ ಹಾಕಿಸಿಕೊಳ್ಳಿ. ಈಗ ಭಾರತ ಸರ್ಕಾರದಿಂದ 14 ವರ್ಷದೊಳಗಿನ ಮಕ್ಕಳಿಗೆ ನೀಡುತ್ತಿದೆ. ಕೆಎಂಆರ್ ಸಿ ನಿಧಿಯಿಂದ ನಮ್ಮ ಜಿಲ್ಲೆಯಲ್ಲಿ 9 ವರ್ಷದಿಂದ 14 ವರ್ಷದೊಳಗಿನ ಮಕ್ಕಳಿಗೆ ಹಾಕಲು ಉದ್ದೇಶಿಸಿದೆ. ಇದನ್ನು ಒಂದು ಬಾರಿ ಮಾತ್ರ ಹಾಕಿಸುವುದು. ನಿಮ್ಮ ಹೆಸರಲ್ಲಿ ಇದು ಆಬ್ ಲೈನ್ ಪೋರ್ಟಲ್ ನಲ್ಲಿ ನೋಂದಣಿ ಆಗಿ ನಿಮಗೆ ಲಸಿಕೆ ಪ್ರಮಾಣ ಪತ್ರ ದೊರೆ-ಯುತ್ತದೆಂದು ಹೇಳಿದರು.

ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಮಾತನಾಡಿ ಜಿಲ್ಲೆಯಲ್ಲಿ ಈ ಲಸಿಕೆ ಹಾಕಲು 18 ಸಾವಿರ ಮಕ್ಕಳನ್ನು ಗುರುತಿಸಿದೆ, ಭಾರತ ಸರ್ಕಾರದಿಂದ 6 ಸಾವಿರ ಲಸಿಕೆ ಈಗಾಗಲೇ ಬಂದಿದ್ದು ಹಂತ ಹಂತವಾಗಿ ಬರಲಿದ್ದು ಈ ಅಭಿಯಾನ ಮೂರು ತಿಂಗಳ ನಡೆಂಮುತ್ತದೆಂದರು. ಭಾರತೀಯ ಕುಟುಂಬ ಯೋಜನಾ ಸಂಘದ ವ್ಯವಸ್ಥಾಪಕಿ ಡಾ.ಜಯಲಕ್ಷ್ಮಿ ಮಾರುಕಟ್ಟೆಯಲ್ಲಿ ಈ ಹೆಚ್ ಪಿ ವಿ ಲಸಿಕೆ ಬೆಲೆ 4 ಸಾವಿರ ರೂ. ಇದನ್ನು ನಮ್ಮ ಸಂಸ್ಥೆಯಲ್ಲಿ ರಿಯಾಯಿತಿಯಿಂದ 1500 ರೂ ಗೆ ಈ ವರೆಗೆ 256 ಜನರಿಗೆ ನೀಡಿದೆ. ಈಗ ಸರ್ಕಾರ ಉಚಿತವಾಗಿ ನೀಡುತ್ತಿರುವುದು ಸಂತೋಷದ ಸಂಗತಿ ಎಲ್ಲರೂ ಇದರ ಸದುಪಯೋಗ ಪಡೆಯಬೇಕು ಎಂದರು. ಲಸಿಕೆ ಪಡೆದ ಮಕ್ಕಳಾದ ನವ್ಯ ಮತ್ತು ನೇಹ ಸಂಜೆವಾಣಿಯೊಂದಿಗೆ ಮಾತನಾಡಿ ನಮ್ಮ ಸುರಕ್ಷತೆಗಾಗಿ ಲಸಿಕೆ ಪಡೆಯಲು ಸಂತೋಷವಾಗುತ್ತದೆ. ಎಲ್ಲಾ 14 ವರ್ಷದೊಳಗಿನ ಹೆಣ್ಣು ಮಕ್ಕಳು ಹಾಕಿಸಿಕೊಳ್ಳಬೇಕು. ಇದರಿಂದ ಏನೂ ಆಗಲ್ಲ. ನಾನು ಜಿಲ್ಲೆಯಲ್ಲಿ ಮೊದಲ ಲಸಿಕೆ ಪಡೆದಿದ್ದು ಸಂತೋಷವಾಯ್ತು ಎಂದು ಹೇಳಿದರು.

ಈ ವೇಳೆ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎನ್.ಬಸಾರೆಡ್ಡಿ ಮೊದಲಾದವರು ಇದ್ದರು ಜಿಲ್ಲೆಯ ಎಲ್ಲಾ ತಾಲೂಕು, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಈ ಲಸಿಕೆ ಹಾಕಲಾಗುತ್ತದೆ.

ಮಕ್ಕಳು ಪೋಷಕರೊಂದಿಗೆ ಆಗಮಿಸಿ ಹಾಕಿಸಿಕೊಳ್ಳಬೇಕಿದೆ.

# ಅಪ್ರತಿಮ ಕಲಾವಿದ ರಮೇಶಗೌಡ ಇನ್ನಿಲ್ಲ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯ ಹಿರಿಯ ರಂಗಕಲಾವಿದರು, ಉದ್ಯಮಿಗಳು, ಸಮಾಜ ಸೇವಕರೂ ಆಗಿದ್ದ ರಮೇಶಗೌಡ ಪಾಟೀಲ್(78) ಅವರು ಇಂದು ಬೆಳಗಿನ ಜಾವ 1.30 ಕ್ಕೆ ನಿಧನರಾಗಿದ್ದಾರೆ. ಇವರ ಅಂತ್ಯ ಕ್ರಿಯೆ ನಗರದ ವೀರಶೈವ ರುದ್ರಭೂಮಿಯಲ್ಲಿ ಇಂದು ಸಂಜೆ 3.30 ಕ್ಕೆ ಕ್ಕೆ ನೆರವೇರಲಿದೆ. ಪತ್ನಿ ಗಂಗಮ್ಮ ಪಾಟೀಲ್, ಪುತ್ರರಾದ ರಾಜಶೇಖರ ಪಾಟೀಲ್, ರಾಮನಗೌಡ ಪಾಟೀಲ್, ಪುತ್ರಿ ಶ್ರೀದೇವಿ ಸೇರಿದಂತೆ ಅಪಾರ ಬಂಧಗಳನ್ನು, ಅವರ ನೆಚ್ಚಿನ ಕಲಾವಿದರು, ಕಲಾಸಕ್ತರನ್ನು ಅಗಲಿದ್ದಾರೆ.

ಸಾಮಾಜಿಕ, ಐತಿಹಾಸಿಕ, ಪೌರಾಣಿಕದ ನೂರಾರು ನಾಟಕಗಳಲ್ಲಿ ಮನೋಜ್ಞವಾಗಿ ಅಭಿನಯಿಸುವ ಮೂಲಕ ರಂಗಭೂಮಿ ಕ್ಷೇತ್ರ-ಕ್ಕೆ ಮಹತ್ವದ ಕೊಡುಗೆಯನ್ನು ನೀಡಿದ್ದರು. ಹಂಪಿ ಉತ್ಸವದ ಧ್ವನಿ ಬೆಳಕು ಕಾರ್ಯಕ್ರಮದಲ್ಲಿ ಶ್ರೀ ಕೃಷ್ಣದೇವರಾಯನ ಪಾತ್ರ ಅಭಿನಯಿಸಿದ್ದರು. ಜಗಜ್ಯೋತಿ ಬಸವೇಶ್ವರ ನಾಟಕದಲ್ಲಿ ಬಸವಣ್ಣನವರ ಪಾತ್ರ ಕಲಾಸಕ್ತರ ಗಮನಸೆಳೆದಿತ್ತು. ಕೃಷ್ಣ, ಕೌರವ, ಮೊದಲಾದ ಪೌರಾಣ8ಕ ಪಾತ್ರದಲ್ಲೂ ಅವರ ಅಭಿನಯ ಮನೋಜ್ಞವಾಗಿತ್ತು. ಆಡು ಮುಟ್ಟದ ಸೊಪ್ಪಿಲ್ಲ. ರಮೇಶಗೌಡ ಅಭಿನಯಿಸದ ಪಾತ್ರವಿಲ್ಲ ಎಂಬಂತೆ ಅವರು ನೂರಾರು ಕನ್ನಡ, ತೆಲುಗು ಭಾಷೆಯ ನಾಟಕಗಳಲ್ಲಿ ಅಭಿನಯಿಸಿದ್ದರು. ಅಚರ ಅಸ್ಖಲಿತ ಡೈಲಾಗ್ ಗಳಿಂದ ಪ್ರೇಕ್ಷಕರನ ಸೂರೆಗೊಳ್ಳುತ್ತಿದ್ದರು. ನಾಟಕದ ಪದ್ಯಗಳನ್ನು ಸುಲಲಿತವಾಗಿ ಹಾಡುತ್ತಿದ್ದರು. ಅವರು ಯಾವುದೇ ಪಾತ್ರಕೊಟ್ಟರು ಅದನ್ನು ಲೀಲಾಜಾಲವಾಗಿ ಅಭಿನಯಿಸುವ ಪೌಡಿಮೆ ಅವರದ್ದಾಗಿತ್ತು. ಇತ್ತೀಚೆಗೆ ಅವರ ಮೆದುಳಿನಲ್ಲಿ ರಕ್ತ ಹೆಪ್ಪುಗಟ್ಟುವಿಕೆಯಿಂದ ನೆನಪಿನ ಮರೆವು ಹೆಚ್ಚಿ ಅಭಿನಯದಿಂದ ದೂರಸರಿದರು. ಡಾ.ಜೋಳದರಾಶಿ ದೊಡ್ಡನಗೌಡರ "ಸಾಯದವನ ಸಮಾಧಿ" ಎಂಬ ನಾಟಕವನ್ನು ರಾಘವ ಕಲಾಮಂದಿರದಲ್ಲಿ ಕಿರಿಯ ಕಲಾವಿದ ಸುಯೋಗಗೌಡ ಅವರ ಜೊತೆ ಅಭಿನಯಿಸಿದ್ದು ಅವರ ಕಲಾ ಬದುಕಿನ ಕೊನೆಯ ರಂಗ ಪ್ರಯೋಗ ಆಗಿತ್ತು. **ಪ್ರಶಸ್ತಿಗಳು:** ರಮೇಶಗೌಡ ಪಾಟೀಲರಿಗೆ ನಾಟಕ ಅಕಾಡೆಮಿ ಪ್ರಶಸ್ತಿ, ಮತ್ತು ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ಅನೇಕ ಸಂಘ ಸಂಸ್ಥೆಗಳು ಗೌರವ ಪ್ರಶಸ್ತಿ ನೀಡಿ ಗೌರವಿಸಿದ್ದವು. 2023 ರಲ್ಲಿ ಬಳ್ಳಾರಿ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು.

**ಅಕಾಡೆಮಿ ಸದಸ್ಯರಾಗಿ:** ಇವರ ರಂಗಭೂಮಿ ಸೇವೆಯನ್ನು ಗುರುತಿಸಿ ಕರ್ನಾಟಕ ಸರ್ಕಾರ ನಾಟಕ ಅಕಾಡೆಮಿ ಸದಸ್ಯರನ್ನಾಗಿ ನೇಮಕ ಮಾಡಿತ್ತು.

ಉದ್ಯಮಿಯಾಗಿ: ಇವರು ಗೋದಿ ಸೋಜಿಯ ಪ್ಯಾಕ್ಟರಿಯನ್ನು ಹೊಂದಿದ್ದರು. ಇದರಿಂದಾಗಿ ಚೇಂಬರ್ ಆಫ್ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.

**ಸಾಮಾಜಿಕ, ಶಿಕ್ಷಣ ಸೇವೆ:** ರಾಘವ ಮೆಮೋರಿಯಲ್ ಅಸೋಸಿಯೇಷನ್ ಕಾರ್ಯದರ್ಶಿಯಾಗಿ, ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯಕಾರಿ ಸಮಿತಿ ಸದಸ್ಯರಾಗಿ, ಹೀರದ ಸೂಗಮ್ಮ ಪ್ರೌಢ ಶಾಲಾ ಆಡಳಿತ ಮಂಡಳಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಅಲ್ಲದೆ ರಾಮೇಶಗೌಡ ಕಲಾ ಟ್ರಸ್ಟ್ ಮೂಲಕ ವಿವಿಧ ಕಾರ್ಯಕ್ರಮಗಳ ಆಯೋಜನೆ ಮಾಡಿದ್ದರು.

# ಪಿ.ಯು.ಕಾಲೇಜ್ ಉಪನ್ಯಾಸಕರ ಬೇಡಿಕೆಗಳ ಮನವಿ ಪತ್ರ ಸಲ್ಲಿಕೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿಯಲ್ಲಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ ಹಾಗೂ ಬಳ್ಳಾರಿ ಜಿಲ್ಲಾ ಪ್ರಾಂಶುಪಾಲರ ಸಂಘದ ವತಿಯಿಂದ ಪದವಿ ಪೂರ್ವ ಉಪನ್ಯಾಸಕರ ಹಲವಾರು ಬೇಡಿಕೆಗಳ ಮನವಿ ಪತ್ರವನ್ನು ಸರ್ಕಾರಕ್ಕೆ ತಲುಪಿಸಲು ಬಳ್ಳಾರಿ ಜಿಲ್ಲಾ ಅಪಾರ ಜಿಲ್ಲಾಧಿಕಾರಿಗಳಾದ ಮಹಮ್ಮದ್ ಜುಬೇರ್ ರವರಿಗೆ ಉಪನ್ಯಾಸಕ ಸಂಘದ ಜಿಲ್ಲಾ ಅಧ್ಯಕ್ಷ ಡಾ. ಎನ್ ರಾಜಣ್ಣ ಮತ್ತು ತಾಲೂಕು ಉಪನ್ಯಾಸಕ ಸಂಘದ ಅಧ್ಯಕ್ಷ ಬಿ.ಪಿ. ಕಲ್ಲಪ್ಪ ಹಾಗೂ ಪ್ರಾಚಾರ್ಯ ಸಂಘದ ಅಧ್ಯಕ್ಷರಾದ ಸಣ್ಣ ಶಿವರಾಂ ಕಾರ್ಯಾಧ್ಯಕ್ಷರಾದ ಎಂ ಶ್ರೀಶೈಲ, ಕಾರ್ಯದರ್ಶಿಗಳಾದ ಪಿ ನಾಗೇಶ್ವರರಾವ್ ಹಾಗೂ ವಿವಿಧ ಕಾಲೇಜಿನ ಉಪನ್ಯಾಸಕರು ಹಾಗೂ ಪ್ರಾಚಾರ್ಯರ ಸಮ್ಮುಖದಲ್ಲಿ ವಿನಂತಿಸಿಕೊಂಡರು.

ಜಿಲ್ಲಾ ಉಪನಿರ್ದೇಶಕರ ಕಚೇರಿಗಳ ಮೇಲಿನ ಆಡಳಿತಾತ್ಮಕ ನಿಯಂತ್ರಣವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವಹಿಸುವ ಕುರಿತು ಪ್ರಸ್ತಾಪಿತ ಸರ್ಕಾರದ ಕಡತ ಸಂಖ್ಯೆ ಇಕ 10 2026 ಅನ್ನು ಕೂಡಲೇ ಹಿಂಪಡೆಯಬೇಕು. ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿದ್ದ ಪರೀಕ್ಷಾ ವಿಭಾಗವನ್ನು ಹಿಂದಿನಂತೆ ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶನಾಲಯಕ್ಕೆ ಮರಳಿ ವರ್ಗಾಯಿಸಬೇಕು. ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ ಇರುವ 320:1 ವಿದ್ಯಾರ್ಥಿ ಉಪನ್ಯಾಸಕರ ಅನುಪಾತವನ್ನು ಓಇಖಖಿ ಮಾರ್ಗಸೂಚಿಗಳನ್ವಯ ಮರುನಿಗದಿಪಡಿಸಬೇಕು. ಕಳೆದ ಮೂರು ವರ್ಷಗಳಿಂದ ಪರಿಷ್ಕರಿಸದಿರುವ ದ್ವಿತೀಯ ಪಿಯುಸಿ ಉತ್ತರಪತ್ರಿಕೆ ಮೌಲ್ಯಮಾಪನ ಭತ್ಯೆ ಹಾಗೂ ಪರೀಕ್ಷಾ ಸಂಭಾವನೆಯನ್ನು ತಕ್ಷಣ ಪರಿಷ್ಕರಿಸಿ, ಹಿಂದಿನ ವರ್ಷದ ಬಾಕಿ ಇರುವ ಸಂಭಾವನೆಗಳನ್ನು ತಕ್ಷಣ ಪಾವತಿಸಬೇಕು.

ಪ್ರಥಮ ಅದ್ಯತೆಯಾಗಿ ಸಂಭವಾನೆಗಳನ್ನು ಖಾಸಗಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ಹಾಗೂ ಅತಿಥಿ ಉಪನ್ಯಾಸಕರಿಗೆ ವಿತರಿಸಬೇಕು. ಕಾರ್ಯಭಾರ ಕೊರತೆ ಇರುವ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರನ್ನು ಸೇವೆಯಿಂದ ವಿಮುಕ್ತಿಗೊಳಿಸುವ ಆದೇಶವನ್ನು ಹಿಂಪಡೆದು, ಅವರಿಗೆ ಸಮೀಪದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರ ನೀಡುವ ಕುರಿತು ಸಲ್ಲಿಸಲಾದ ಪ್ರಸ್ತಾವನೆಗೆ ಅನುಮೋದನೆ ನೀಡಬೇಕು. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವರ್ಗಾವಣೆ ಹಾಗೂ ಪದೋನ್ನತಿ ಹೊಂದಿದ ಪ್ರಾಂಶುಪಾಲರ ಸ್ಥಳನಿಯುಕ್ತಿಯ ಸಂದರ್ಭದಲ್ಲಿ ಎಲ್ಲಾ ಖಾಲಿ ಹುದ್ದೆಗಳನ್ನು ಯಾವುದೇ ನಿರ್ಬಂಧವಿಲ್ಲದೆ ಆಯ್ಕೆ ಮಾಡಲು ಮುಕ್ತ ಅವಕಾಶ ನೀಡಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

## ಅನುದಾನಕ್ಕೆ ಆಗ್ರಹಿಸಿ ಖಾಸಗಿ ಶಾಲಾ-ಕಾಲೇಜುಗಳ ಬಂದ್

# ಬಳ್ಳಾರಿಯಲ್ಲಿ ಜಿಲ್ಲಾ ಮಟ್ಟದ ಪ್ರತಿಭಟನೆ




• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

1995ರ ನಂತರ ಆರಂಭವಾದ ಕನ್ನಡ ಮಾಧ್ಯಮ ಖಾಸಗಿ ಶಾಲೆಗಳು ಹಾಗೂ ಕಾಲೇಜುಗಳಿಗೆ ವೇತನ ಅನುದಾನ ನೀಡುವಂತೆ ಆಗ್ರಹಿಸಿ ರಾಜ್ಯಾದ್ಯಂತ ಖಾಸಗಿ ಶಿಕ್ಷಣ ಸಂಸ್ಥೆಗಳು ಬಂದ್ ಆಚರಿಸಿದ ಹಿನ್ನೆಲೆಯಲ್ಲಿ ಬಳ್ಳಾರಿಯಲ್ಲಿ ಜಿಲ್ಲಾ ಮಟ್ಟದ ಬೃಹತ್ ಪ್ರತಿಭಟನೆ ನಡೆಯಿತು.

ಅಖಿಲ ಕರ್ನಾಟಕ ಅನುದಾನ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ನೇತೃತ್ವದಲ್ಲಿ ಇಂದು ಜಿಲ್ಲಾಣಟಿಜಜಜಿಟಿಜಜಧಿಕಾರಿ ಕಚೇರಿ ಎದುರು ಶಾಲಾ-ಕಾಲೇಜುಗಳ ಆಡಳಿತ ಮಂಡಳಿ ಸದಸ್ಯರು, ಶಿಕ್ಷಕರು ಹಾಗೂ ಸಿಬ್ಬಂದಿ ಪ್ರತಿಭಟನೆ ನಡೆಸಿದರು. ಬಳಿಕ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನಾಕಾರರು ಮಾತನಾಡಿ, 1995ರಿಂದ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕನ್ನಡ ಶಾಲೆಗಳನ್ನು ಉಳಿಸಿ ಬೆಳೆಸಿಕೊಂಡು ಬರುತ್ತಿದ್ದರೂ ಕಳೆದ ಮೂರು ದಶಕಗಳಿಂದ ಯಾವುದೇ ಸರ್ಕಾರಿ ಅನುದಾನ ದೊರಕಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕಳೆದ ಒಂದು ವರ್ಷದಿಂದ ಸರ್ಕಾರ ಅನುದಾನ ನೀಡುವ ಭರವಸೆ ನೀಡಿದ್ದರೂ ಇತ್ತೀಚಿನ ರಾಜ್ಯ ಬಜೆಟ್‌ನಲ್ಲಿ ಈ ಕುರಿತು ಪ್ರಸ್ತಾಪ ಇಲ್ಲದಿರುವುದು ಶಿಕ್ಷಣ ಸಂಸ್ಥೆಗಳನ್ನು ಸಂಕಷ್ಟಕ್ಕೆ ದೂಡಿದೆ ಎಂದು ಆರೋಪಿಸಿದರು.

ಸಂಘದ ಪ್ರಮುಖ ಬೇಡಿಕೆಗಳಾಗಿ 1995ರ ನಂತರ ಆರಂಭವಾದ ಕನ್ನಡ ಮಾತೃಭಾಷಾ ಶಾಲೆಗಳನ್ನು ವೇತನ ಅನುದಾನಕ್ಕೆ ಒಳಪಡಿಸುವುದು, ಬಡ ವಿದ್ಯಾರ್ಥಿಗಳಿಗೆ ಸಹಾಯಕವಾಗಿರುವ ಶಿಕ್ಷಣ ಹಕ್ಕು ಕಾಯ್ದೆ (ಖಖಿಇ)ಯನ್ನು ಪುನಃ ಜಾರಿಗೆ ತರುವುದು ಹಾಗೂ ಖಾಸಗಿ ಶಾಲೆಗಳ ಮಾನ್ಯತೆ ನವೀಕರಣ ಪ್ರಕ್ರಿಯೆಯನ್ನು ಸರಳಗೊಳಿಸುವುದನ್ನು ಒತ್ತಾಯಿಸಿದರು.

ಬೇಡಿಕೆಗಳನ್ನು ತಕ್ಷಣ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರಾಮಮೋಹನ್ ಮೌಲಾಲಿ, ಮಾರುತಿ ಮಾದಳಹಟ್ಟಿ, ಶಾಂತನ್ ಗೌಡ, ಸುರೇಶ್, ವೈ.ಡಿ. ವೆಂಕಟೇಶ್ ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಿಶ್ವ ಮಹಿಳಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ ದಿನಾಂಕ 10-03-2026 ರಂದು ವಿಶ್ವ ಮಹಿಳಾ ದಿನಾಚರಣೆ ಯನ್ನು "ಗೆಲುವಿಗೆ ಕೊಡುಗೆ " ಎಂಬುವ ಶೀರ್ಷಿಕೆಯಡಿ ಆಚರಿಸಲಾಯಿತು.

ಕಿಷ್ಕಿಂದ ಟ್ರಸ್ಟ್ ನ ಸಂಸ್ಥಾಪಕರಾದ ಶಾಮ ಪವಾರ್, ಮಾತನಾಡುತ್ತಾ "ಪ್ರತಿಯೊಬ್ಬ ಮಹಿಳೆಯೂ ಲಭ್ಯವಿರುವ ಸಂಪನ್ಮೂಲಗಳನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳಬೇಕು ಮತ್ತು ಸಮಾಜಕ್ಕೆ ಹೊಸನಾವೀನ್ಯತೆಯನ್ನು ಸೃಷ್ಟಿಸಬೇಕು ಮತ್ತು ಮಹಿಳೆಯರ ಶ್ರೇಷ್ಠತೆಯ ಪರಿಣಾಮವನ್ನು ಸೃಷ್ಟಿಸಬೇಕು." ವಿಜ್ಞಾನಿ ಡಾ. ಶಿಲ್ಪಾ ಎಚ್, ಮಾತನಾಡುತ್ತಾ "ಪ್ರತಿಯೊಬ್ಬ ಮಹಿಳೆಯೂ, ಅದು ಮಗುವಾಗಲಿ, ದೊಡ್ಡವರಾಗಲಿ ಅಥವಾ ವೃದ್ಧರಾಗಲಿ, ಮೊದಲು ತಮ್ಮ ಉಳಿವಿಗಾಗಿ ಉತ್ತಮ ಪೌಷ್ಟಿಕ ಆಹಾರವನ್ನು ತೆಗೆದುಕೊಳ್ಳಬೇಕು, ಆಗ ಮಾತ್ರ ಭಾರತವು ಕುಟುಂಬದಿಂದ ಸಮಾಜಕ್ಕೆ ಬಲವಾಗಿ ಬೆಳೆಯಲು ಸಾಧ್ಯ " ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ವೀ.ವಿ.ಸಂಘದ ಕಾರ್ಯದರ್ಶಿ ಡಾ.ಅರವಿಂದ್ ಪಟೇಲ್, ಮಾತನಾಡುತ್ತಾ "ಶತಮಾನಗಳಿಂದ ಯಾವುದೇ ಕಠಿಣ ಪರಿಸ್ಥಿತಿಗಳಲ್ಲಿ ತಮ್ಮ ಮಹೀಳೆಯರಲ್ಲಿ ಚರ್ಚಿಸಿ ಅಂತಿಮ ನಿರ್ಣಯಗಳನ್ನು ತೆಗೆದುಕೊಳ್ಳುತ್ತಾರೆ. ಹಾಗಾಗಿ ಮಹೀಳೆಯರುನ್ನು ನೀರ್ಣಯಾತ್ಮಕ ಸ್ಥಾನದಲ್ಲಿ ನಡೆದು-ಕೊಂಡು ಬಂದಿರುತ್ತಾರೆ." ಉಪಪ್ರಾಂಶುಪಾಲರಾದ ಡಾ.ಸವಿತಾ ಸೊನೋಳಿ, ಇವರು "ಎಂಜಿನೀರಿಂಗ್ ಕಾಲೇಜುಗಳಂತಹ ವೃತ್ತಿಪರ ಸಂಸ್ಥೆಗಳಲ್ಲಿ ಕೆಲಸಮಾಡುತ್ತಿರುವ ಮಹಿಳೆಯರಿಗೆ ಸರ್ಕಾರದ ಅನುದಾನಗಳ ಬಗ್ಗೆ ಆಳವಾಗಿ ವಿವರಿಸುತ್ತಾ "ಮಹಿಳೆಯರಿಗೆ ಪ್ರಕೃತಿಯು ನೀಡಿದ ವರ ಮಲ್ಟಿಟಾಸ್ಕಿಂಗ್ -ಬಹುಕಾರ್ಯರಗಳು ಮಾಡಬಲ್ಲರು, ಅವರಲ್ಲಿ ಹೆಚ್ಚಿನ ನಂಬಿಕೆ ಹೋಂದಿದೆ. ಹಾಗು ಮಾತೃತ್ವದ ಜವಾಬ್ದಾರಿಯನ್ನು ನೀಡಿದೆ" ಎಂದು ನುಡಿದರು. ಮಹಾವಿದ್ಯಾಲಯದ ಮಹಿಳಾ ಕೋಶದ ಸಂಯೋಜಕರು ಡಾ.ಎಂಎಸ್. ಶೋಭಾ, "2026ರ ಅಂತರರಾಷ್ಟ್ರೀಯ ಮಹಿಳಾ ದಿನದ ಥೀಮ್ "ಗೆಲುವಿಗೆ ಕೊಡುಗೆ". ಈ ಅಭಿಯಾನವು ಸಾಮೂಹಿಕ ಬೆಂಬಲದ ಶಕ್ತಿಯನ್ನು ಎತ್ತಿ ತೋರಿಸುತ್ತದೆ,

ವ್ಯಕ್ತಿಗಳು ಮತ್ತು ಸಂಸ್ಥೆಗಳು ಎಲ್ಲರಿಗೂ ಆರ್ಥಿಕ ಮತ್ತು ಸಾಮಾಜಿಕ ಬೆಳವಣಿಗೆಯನ್ನು ಹೆಚ್ಚಿಸಲು ಮಹಿಳೆಯರಲ್ಲಿ ಸಮಯ, ಸಂಪನ್ಮೂಲಗಳು, ಮಾರ್ಗದರ್ಶನ ಮತ್ತು ಅವಕಾಶಗಳನ್ನು ಹೂಡಿಕೆ ಮಾಡಲು ಪ್ರೋತ್ಸಾಹಿಸುತ್ತದೆ. ಮಹಿಳೆಯರು ಅಭಿವೃದ್ಧಿ ಹೊಂದಿದಾಗ, ಸಮಾಜವು ಲಾಭ ಪಡೆಯುತ್ತದೆ ಎಂದು ಇದು ಒತ್ತಿಹೇಳುತ್ತದೆ." ಎಂದು ನುಡಿದರು ""ಈ ಎಂಜಿನೀರಿಂಗ್ ಕಾಲೇಜುನಲ್ಲಿ ಕೆಲಸ ಮಾಡುತ್ತಿರುವ, ಉನ್ನತ ಡಾ-ಕ್ಟರೇಟ್ ಪದವಿ ಪಡೆದಿರುವ, ಅಲ್ಲದೇ ವಿಶೇಷ ಸಾಧನೆಗಳು ಮಾಡಿರುವ ಮಹಿಳೆಯರಾದ ಡಾ ಶಿವಮ್ಮ, ಡಾ ದೀಪಾ.ಬಿ, ಡಾ ಸಾಯಿ ಮಾಧವಿ, ಮಹಾವಿದ್ಯಾಲಯದ ಮಹಿಳಾ ಕೋಶ -ಆರ್.ವೈ.ಎಂ.ಈ.ಸಿ ವಿಭಾಗದಿಂದ ಸನ್ಮಾನಿಸಲಾಯಿತು. ಈ ಸಮಾರಂಭದಲ್ಲಿ ಎಲ್ಲಾ ವಿಭಾಗಗಳಿಂದ, ಮಹೀಳಾ ಶಿಕ್ಷಕ ಮತ್ತು ವಿದ್ಯಾರ್ಧಿಗಳು ವೃಂದದವರು ಭಾಗವಹಿಸಿದರು ಕು. ಅಪೂರ್ವ ಮತ್ತು ತಂಡದವರು ಪ್ರಾರ್ಥಿಸಿದರು. ಶ್ರೀಮತಿ ಸೌಮ್ಯ ನಿರೂಪಿಸಿದರು,



ಹುಣಸೂರು ಒಳ ಮೀಸಲಾತಿಯಲ್ಲಿ ಹೊಲಯ .ಸಮುದಾಯಕ್ಕೆ ರೋಸ್ಟರ್ ಬಿಂದು ಉದ್ಯೋಗದಲ್ಲಿ ವಿದ್ಯಾಭ್ಯಾಸದಲ್ಲಿ ಒಳ ಮೀಸಲಾತಿ ಗೊಂದಲ ಸರಿ ಪಡಿಸುವಂತೆ ಹಾಗೂ ಅಸ್ಪೃಶ್ಯ ಸಮುದಾಯಕ್ಕೆ ಸಾಮಾಜಿಕ ಅಸಮಾನತೆ ಹೋಗುವರೆಗೆ ಪ್ರತ್ಯೇಕ ಮೀಸಲಾತಿ ನಿಗದಿಪಡಿಸುವಂತೆ ಒತ್ತಾಯಿಸಿ ಶೇಕಡ 15ರಲ್ಲಿ 12/3 ರಂತೆ ಒಳ ಮೀಸಲಾತಿ ನಿಗದಿ ಪಡಿಸುವುದಕ್ಕಾಗಿ ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ ಹಾಗೂ ಮೈಸೂರು ಜಿಲ್ಲಾ ಶಾಖೆ, ಮೈಸೂರು ವತಿಯಿಂದ ಉಪ ವಿಭಾಗ ಅಧಿಕಾರಿಗಳಾದ . ಕಾವ್ಯರಾಣಿ ರವರ ಮುಖಾಂತರ ಸರ್ಕಾರಕ್ಕೆ ಮನವಿ ಪತ್ರವನ್ನು ಸಲ್ಲಿಸಲಾಯಿತು

ಈ ಸಂದರ್ಭದಲ್ಲಿ ತಾಲೂಕಿನ ಸರ್ಕಾರಿ ನಿವೃತ್ತ. ಸೈನಿಕರಾದ ನಾಗರಾಜು ಡಿ.ನಿವೃತ್ತ ಪ್ರಾಂಶುಪಾಲರು ವೆಂಕಟೇಶಯ್ಯ . ನಿವೃತ್ತ ಇನ್ಸೆಕ್ಟರ್ ಶೇಖರ್ ಬೀಜಗನಹಳ್ಳಿ. ಕಾಲೇಜು ಶಿಕ್ಷಣ ಇಲಾಖೆ ನಿವೃತ್ತ ಡಿ ಗ್ರೂಪ್ ನೌಕರರಾದ ಗಂಗಾಧರ ಕನ್ನಡಪ್ರಾಧ್ಯಾಪಕರಾದ ಎಚ್. ಕೆ. ಗೋವಿಂದರಾಜು ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಘಟನಾ ಸಂಚಾಲಕ ಕಿರಂಗೂರುಸ್ವಾಮಿ ಹಾಗೂ ಇನ್ನಿತರ ಹಾಜರಿದ್ದರು



ಹುಣಸೂರು ಭಾರತ ಜನಗಣತಿ- 2026ರ ಪೂರ್ವಭಾವಿಯಾಗಿ ಹುಣಸೂರು ನಗರಸಭಾ ವ್ಯಾಪ್ತಿಯಲ್ಲಿ ಬ್ಲಾಕ್ ಗಳ ವಿಂಗಡಣಾ ಕಾರ್ಯವು ನಗರಸಭೆ ವ್ಯಾಪ್ತಿಯ 31 ವಾರ್ಡ್‌ಗಳಲ್ಲಿ ನಗರ ಜನಗಣತಿ ಸ್ಥಳ ಪರಿಶೀಲನೆ ಕಾರ್ಯ ಕೈಗೊಳ್ಳಲಾಯಿತು ಈ ಸಂದರ್ಭದಲ್ಲಿ ಉಪ ವಿಭಾಗಾಧಿಕಾರಿಗಳಾದ ಕಾವ್ಯರಾಣಿ ನಗರ ಸಭೆಯ ಆಯುಕ್ತರು ಮಾನಸ ಎಂ ನಗರಸಭಾ ಅಧಿಕಾರಿಗಳಾದ ಪ್ರಭಾರ ಎಇಇ ಲೋಕೇಶ್ ಕಂದಾಯ ಅಧಿಕಾರಿ ಸಿದ್ದಯ್ಯ ಕಂದಾಯ ನಿರೀಕ್ಷಕ ಜೋಯಲ್. ಜನಗಣತಿ ಕ್ಲರ್ಕ್ .ಎನ್ ಚಂದ್ರು ನೋಡಲ್ ಇಂಜಿನಿಯರ್ ಸೋಮಸುಂದರ್ ನೌಕರರಾದ ಸುರೇಂದ್ರ ಸುಧೀರ್ ನವೀನ .ಶಶಿಕುಮಾರ್. ಹಾಗು ಇನ್ನಿತರು ಹಾಜರಿದ್ದರು.

# ಬಲ್ಡೋಟ ಕಾರ್ಖಾನೆ ತೊಲಗಿಸಿ ಧರಣಿ 131ನೇ ದಿನ ಪೂರ್ಣಗೊಳಿಸಿತು




• ಮಲ್ಲಮ್ಮ ನುಡಿವಾರ್ತೆ ಕೊಪ್ಪಳ

ನಗರಸಭೆ ಆವರಣದಲ್ಲಿ ಬಲ್ಡೋಟ ತೊಲಗಿಸಿ, ಕೊಪ್ಪಳ ಉಳಿಸಿ ಧರಣಿ 131 ದಿನ ಪೂರೈಸಿತು.

ಜಂಟಿ ಕ್ರಿಯಾ ವೇದಿಕೆ ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು ಮಾತನಾಡಿ, ಪ್ರಸ್ತುತ ಅಧಿವೇಶನದಲ್ಲಿ ನಾಯಕರು ಮೌನವಹಿಸಿದ್ದು ಸರಿಯಲ್ಲ. ಎಂ.ಎಲ್.ಸಿ ಹೇಮಲತಾ ಅವರು ತಮ್ಮ ಪ್ರಯತ್ನ ಮುಂದುವರಿಸಿ ಪರಿಷತ್ತಿನಲ್ಲಿ ಮಾತನಾಡಿರುವುದು ಸ್ವಾಗತ, ಆದ-ರೆ ಬಹುಮುಖ್ಯ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ, ಛಲವಾದಿ ನಾರಾಯಣಸ್ವಾಮಿ, ಬಿ.ವೈ. ವಿಜಯೇಂದ್ರ ಉಳಿದ ಜೆಡಿಎಸ್ ಪಕ್ಷದ ನಾಯಕರೂ ಮಾತನಾಡುತ್ತಿಲ್ಲ. ಅವರಿಗೆ ಇಲ್ಲಿರುವ ಎರಡು ಲಕ್ಷ ಜನರ ಜೀವಾತಂಕದ ಸಮಸ್ಯೆ ತಿಳಿಯುತ್ತಿಲ್ಲವೇನು? ಹೇಮಲತಾ ಅವರು ಮಾಡುವ ಪ್ರಯತ್ನ ಸಾಲುತ್ತಿಲ್ಲ . ನಾರಾಯಣಸ್ವಾಮಿ ಧರಣಿಗೆ ಬೆಂಬಲಿಸಿ ಮಾತನಾಡಿ ನಾನು ಸದನದಲ್ಲಿ ಚರ್ಚೆ ಮಾಡುತ್ತೇನೆ ಎಂದು ಹೇಳಿದ್ದರು. ಅವರು ಈಗ ಮೌನ ಮುರಿದು ಚರ್ಚೆ ಮಾಡಿ ರಾಜ್ಯದ ಜನರ ಗಮನ ಸೆಳೆಯಬೇಕು. ಇಂತಹ ಗಂಭೀರ ಸಮಯದಲ್ಲಿ ಸರ್ಕಾರ ಮೌನವಾಗಿರುವಾಗ ವಿರೋಧ ಪಕ್ಷದಿಂದ ಸದನದಲ್ಲಿ ಹೋರಾಟ ಮಾಡಿ ಬೆಂಬಲಕ್ಕೆ ಬರಬೇಕೆಂದು ಕೇಳಿಕೊಂಡರು.

ಭಾಗ್ಯನಗರ ಯುವ ಮುಖಂಡರಾದ ಗ್ಯಾನೇಶ ಹ್ಯಾಟಿ ಅವರು ಮಾತನಾಡಿ, ಕಾರ್ಖಾನೆ ಸ್ಥಾಪನೆಯ ಅನುಮತಿಯಲ್ಲಿ ಕೇಂದ್ರದ ಕಡೆ ಕೈಮಾಡಿ ತೋರಿಸುವ ಬುದ್ದಿವಂತಿಕೆ ನಡೆಯುತ್ತಿದೆ. ನಾವು ಕೂಡಲೇ ರೈಲ್ ರೋಖೋ ಚಳವಳಿ ಮಾಡಿ ಅವರನ್ನು ಕೂಡ ಪ್ರಶ್ನೆ ಮಾಡೋಣ ಎಂದರು.

ಧರಣಿಯಲ್ಲಿ ಸಂಚಾಲಕರಾದ ಮಲ್ಲಿಕಾರ್ಜುನ ಬಿ. ಗೋನಾಳ, ಪ್ರಕಾಶಕ ಡಿ.ಎಂ. ಬಡಿಗೇರ, ಶಂಭುಲಿಂಗಪ್ಪ ಹರಗೇರಿ, ಡಾ. ಬಸವರಾಜ ಪೂಜಾರ, ಸುಭಾನ್ ಸಾಬ್ ನೀರಲಗಿ, ನಿವೃತ್ತ ನ್ಯಾಯಾಂಗ ಅಧಿಕಾರಿ ಜಿ.ಬಿ. ಪಾಟೀಲ್, ಗಂಗಾಧರ ಖಾನಾಪುರ, ರಾಜಶೇಖರ ಏಳುಬಾವಿ, ಮಹಾಂತೇಶ ಕೊತಬಾಳ, ಶರಣು ಶೆಟ್ಟರ್, ಶರಣು ಗಡ್ಡಿ, ಮಹಾದೇವಪ್ಪ ಮಾವಿನಮಾಡು, ವೈ. ಸತ್ಯನಾರಾಯಣ, ಮಂಗಳೇಶ ರಾಠೋಡ, ಶಿವಪ್ಪ ಜಲ್ಲಿ, ಶಿವಪ್ಪ ಬನಪ್ಪನವರ, ಹನುಮಪ್ಪ ಕಟಗಿ, ಉಮೇಶ ಗಣಪಾ, ನಾಗರಾಜ ಕುಷ್ಟಗಿ, ಪಂಪಣ್ಣ ಚಿಂತಪಲ್ಲಿ, ರಂಗನಾಥ ಕೋಳೂರು, ರೇವಣಸಿದ್ದಯ್ಯ ಚಿತ್ರಗಾರ, ಹೈದರ್ ಅಲಿ ಖಾನ್ ಇದ್ದರು.

# ಸಿಲಿಂಡರ್ ಕೊರತೆಯಿಲ್ಲ: ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆಯಲ್ಲಿ ಮನೆಬಳಕೆಯ ಅಡುಗೆ ಅನಿಲ (ಎಲ್.ಪಿ.ಜಿ) ಪೂರೈಕೆಯಲ್ಲಿ ಯಾವುದೇ ಕೊರತೆಯಿಲ್ಲ. ಸಾರ್ವಜನಿಕರು ಯಾವುದೇ ರೀತಿಯ ಆತಂಕಕ್ಕೆ ಒಳಗಾಗಬಾರದು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಸ್ತುತ ಗ್ಯಾಸ್ ಸಿಲಿಂಡರ್ ಪೂರೈಕೆ ಮತ್ತು ವಿತರಣೆಯಲ್ಲಿ ಉಂಟಾಗಿರುವ ಅಥವಾ ಉಂಟಾಗಬಹುದಾದ ಪರಿಸ್ಥಿತಿ ಕುರಿತು ಚರ್ಚಿಸಲು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರು ಆತಂಕದಿಂದ ಅತಿಯಾಗಿ ಗ್ಯಾಸ್ ಬುಕಿಂಗ್

ಮಾಡುತ್ತಿರುವುದು ಕಂಡುಬಂದಿದೆ. ಇದರಿಂದಾಗಿ ವ್ಯವಸ್ಥೆಯ ಮೇಲೆ ಒತ್ತಡ ಉಂಟಾಗುತ್ತದೆ. ಜಿಲ್ಲೆಯಲ್ಲಿ ವಿವಿಧ ಏಜೆನ್ಸಿಗಳು ಕಾರ್ಯನಿರ್ವಹಿಸುತ್ತಿದ್ದು, ದಾಸ್ತಾನು ಲಭ್ಯವಿದೆ. ಕಮರ್ಷಿಯಲ್ ಸಿಲಿಂಡರ್ ಪೂರೈಕೆಯಲ್ಲಿ ವ್ಯತ್ಯಯವಾಗಬಹುದು.

ಆದರೆ ಗೃಹ ಉಪಯೋಗಿ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗಿರುವುದಿಲ್ಲ. ಗೃಹಉಪಯೋಗಿ ಅಡುಗೆ ಅನಿಲ ಸಿಲಿಂಡರ್ ಅನ್ನು ಬುಕ್ ಮಾಡಿದ 25 ದಿನದೊಳಗೆ ವಿತರಣೆ ಮಾಡಲಾಗುವುದು ಎಂದರು.

ಹೋಟೆಲ್‌ಗಳಲ್ಲಿ ಗ್ಯಾಸ್ ಹೊರತಾಗಿ ಸೋಲಾರ್ ಬಳಕೆ, ಬಯೋಗ್ಯಾಸ್ ಬಳಕೆಯನ್ನು ಮಾಡಲು ಅವಕಾಶವಿದ್ದು, ಈ ಬಗ್ಗೆ ಹೋಟೆಲ್‌ಗಳಿಗೆ ಸೂಕ್ತ ಅರಿವು ಮೂಡಿಸಬೇಕು. ಖಾಸಗಿ ಕಂಪನಿಗಳು ಗ್ಯಾಸ್ ಬಳಕೆಯನ್ನು ತಾತ್ಕಾಲಿಕವಾಗಿ ನಿಲ್ಲಿಸಿ, ಇದರ ಬದಲಿಗೆ ಸೋಲಾರ್ ಹಾಗೂ ಇತರೆ ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳುವಂತೆ ತಿಳಿಸಬೇಕು. ಅಗತ್ಯತೆಗಳಿಗೆ ತಕ್ಕಂತೆ ಅಡುಗೆ ಅನಿಲವನ್ನು ಬಳಕೆ ಮಾಡಲು ಮತ್ತು ಯಾವುದೇ ರೀತಿಯ ಗ್ಯಾಸ್ ವೇಸ್ಟ್ ಮಾಡದಿರಲು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಅಗತ್ಯ ಸೇವೆಗಳಾದ ಆಸ್ಪತ್ರೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಗೆ ಅನಿಲ ಪೂ-ರೈಕೆಗೆ ಮೊದಲ ಆದ್ಯತೆ ನೀಡಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

## ಆಸ್ತಿ ತೆರಿಗೆ ಶೇ.3ರಷ್ಟು ಹೆಚ್ಚಳ





• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ವಿಜಯಪುರ : ಕರ್ನಾಟಕ ಪೌರನಿಗಮಗಳ ಅಧಿನಿಯಮಯನ್ವಯ ಸ್ವತ್ತಿನ ಮಾರ್ಗಸೂಚಿ ಮೌಲ್ಯದ ಪರಿಷ್ಕರಣೆಯಾಗದ ವರ್ಷದಲ್ಲಿ ಪ್ರತಿ ಹಣಕಾಸು ವರ್ಷಕ್ಕೆ ಶೇಕಡಾ 3% ರಿಂದ 5% ರಷ್ಟು ಆಸ್ತಿ ತೆರಿಗೆಯನ್ನು ಹೆಚ್ಚಳ ಮಾಡಲು ಅವಕಾಶ ಇರುವುದರಿಂದ 2026–27ನೇ ವರ್ಷಕ್ಕೆ ಅನ್ವಯವಾಗುವಂತೆ 01–4–2026ರಿಂದ 31–03–2027ರವರೆಗೆ ಆಸ್ತಿ ತೆರಿಗೆಯನ್ನು ಪರಿಷ್ಕರಣೆ ಮಾಡಲಾಗಿದೆ ಎಂದು ಮಹಾನಗರ ಪಾಲಿಕೆ ಆಯುಕ್ತರು ತಿಳಿಸಿದ್ದಾರೆ.

ವಿಜಯಪುರ ಮಹಾನಗರ ಪಾಲಿಕೆಯ ಆಸ್ತಿ ತೆರಿಗೆಯನ್ನು ದಿ:01–04–2026ರಿಂದ ಜಾರಿಗೆ ಬರುವಂತೆ ವಾಸದ ಕಟ್ಟಡಗಳು, ವಾಣಿಜ್ಯ ಕಟ್ಟಡಗಳು,

ಖಾಲಿ ನಿವೇಶನಗಳು ಹಾಗೂ ಕೈಗಾರಿಕಾ ಪ್ರದೇಶಕ್ಕೆ ಶೇ.3 ರಷ್ಟು, ಹೆಚ್ಚಿಸಿ ಪರಿಷ್ಕರಣೆ ಮಾಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದ್ರಾಕ್ಷಿ ವಿಮೆ ಬಿಡುಗಡೆಗೆ ಬಿಜೆಪಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

2024–25ನೇ ಸಾಲಿನ ಹವಾಮಾನ ಆಧಾರಿತ ವಿಮಾ ಯೋಜನೆಯಡಿ ವಿಮೆ ಕಂತು ಪಾವತಿಸಿದ್ದರೂ ಪರಿಹಾರದಿಂದ ವಂಚಿತರಾಗಿರುವ ಜಿಲ್ಲೆಯ 931 ದ್ರಾಕ್ಷಿ ಬೆಳೆಗಾರರಿಗೆ ತಕ್ಷಣವೇ ವಿಮಾ ಪರಿಹಾರ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿ ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಶುಕ್ರವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಬಿಜೆಪಿ ಜಿಲ್ಲಾಧ್ಯಕ್ಷರಾದ ಶ್ರೀ ಗುರುಲಿಂಗಪ್ಪ ಅಂಗಡಿ ಅವರ ನೇತೃತ್ವದ ನಿಯೋಗವು ಜಿಲ್ಲಾಧಿಕಾರಿಗಳನ್ನು ಭೇಟಿಯಾಗಿ ಮನವಿ ಪತ್ರ ಅರ್ಪಿಸಿತು. ಕಳೆದ ಸಾಲಿನಲ್ಲಿ ಅತಿವೃಷ್ಟಿ, ಅನಾವೃಷ್ಟಿ ಹಾಗೂ ರೋಗಬಾಧೆಯಿಂದ ದ್ರಾಕ್ಷಿ ಬೆಳೆ ನಷ್ಟವಾಗಿತ್ತು. ಜಿಲ್ಲೆಯಲ್ಲಿ 15 ಸಾವಿರಕ್ಕೂ ಅಧಿಕ ಬೆಳೆಗಾರರು ವಿಮೆ ಮಾಡಿಸಿದ್ದರು. ಆದರೆ, ನಿಯಮಾನುಸಾರ ವಿಮೆ ಕಂತು ಪಾವತಿಸಿದ್ದರೂ, ನಕಲಿ ಕ್ಷೇತ್ರ ಎಂಬ ನೆಪವೊಡ್ಡಿ ವಿಮಾ ಕಂಪನಿಗಳು ಜಿಲ್ಲೆಯ 931 ಬೆಳೆಗಾರರಿಗೆ (ವಿಶೇಷವಾಗಿ ಬಬಲೇಶ್ವರ ತಾಲೂಕಿನ ರೈತರಿಗೆ) ಪರಿಹಾರ ನೀಡದೆ ಸತಾಯಿಸುತ್ತಿವೆ ಎಂದು ಮುಖಂಡರು ಆರೋಪಿಸಿದರು.

ಈ ಕೂಡಲೇ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಜಿಲ್ಲಾಡಳಿತ ವಿಮಾ ಕಂಪನಿಯೊಂದಿಗೆ ಮಾತನಾಡಿ, ಬಾಕಿ ಉಳಿದಿರುವ ಎಲ್ಲಾ ಅರ್ಹ ದ್ರಾಕ್ಷಿ ಬೆಳೆಗಾರರ ಖಾತೆಗಳಿಗೆ ತಕ್ಷಣವೇ ವಿಮೆ ಪರಿಹಾರ ಪಾವತಿಸಲು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಪರಿಹಾರ ವಂಚಿತ ರೈತರೊಂದಿಗೆ ಸೇರಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಲಾಯಿತು.

ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸುವ ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಎಸ್.ಕೆ. ಬೆಳ್ಳುಬ್ಬಿ, ಪಕ್ಷದ ಮುಖಂಡರಾದ ಸಂಜಯ ಪಾಟೀಲ ಕನಮಡಿ, ಉಮೇಶ ಕೊಳಕೂರ, ಚಿದಾನಂದ ಚಲವಾದಿ, ಸೇರಿದಂತೆ ಪಕ್ಷದ ಅನೇಕ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಪಿಎಮ್‌ಎನ್‌ಎಮ್ ಡೆಂಟಲ್ ಕಾಲೇಜ್ ವಿದ್ಯಾರ್ಥಿಗಳ ಪರೀಕ್ಷಾ ಸಾಧನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಬಿ.ವಿ.ವಿ ಸಂಘದ ಪಿ.ಎಮ್.ಎನ್.ಎಮ್ ಡೆಂಟಲ್ ಕಾಲೇಜಿನ ವಿದ್ಯಾರ್ಥಿಗಳಾದ ಡಾ.ಮಿತಾಲಿ ಜಿ.ಕರ್ವಾ ಮತ್ತು ಡಾ.ಮಹಮದ್ ಫಾಝಿಲ್ ವಿಶ್ವವಿದ್ಯಾಲಯದ ಅಂತಿಮ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗಿರುವರು.

ಬೆಂಗಳೂರಿನ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ 2025–26 ನೇ ಸಾಲಿನಲ್ಲಿ ನಡೆದ ಬಿ.ಡಿ.ಎಸ್ ಕೋರ್ಸಿನ ಅಂತಿಮ ಪರೀಕ್ಷೆಯಲ್ಲಿ ಡಾ.ಮಿತಾಲಿ ಜಿ.ಕರ್ವಾ ಓರಲ್ ಮೆಡಿಸಿನ್ ಆ್ಯಂಡ್ ರೇಡಿಯಾಲಜಿ ವಿಷಯದಲ್ಲಿ ಅತ್ಯಧಿಕ ಅಂಕಗಳನ್ನು ಪಡೆದಿರುವರು. ವಿದ್ಯಾರ್ಥಿನಿಯು ಬಿ.ಡಿ.ಎಸ್ ಕೋರ್ಸಿನ ಅಂತಿಮ ಪರೀಕ್ಷೆಯ ಓರಲ್ ಮೆಡಿಸಿನ್ ಆ್ಯಂಡ್ ರೇಡಿಯಾಲಜಿ ವಿಷಯದಲ್ಲಿ ಪಡೆದ ಅಂಕಗಳು ಈ ವಿಷಯದಲ್ಲಿ ರಾಷ್ಟ್ರಮಟ್ಟದಲ್ಲಿ ವಿದ್ಯಾರ್ಥಿಯೊಬ್ಬರು ಪಡೆದ ಅತ್ಯಧಿಕ ಅಂಕಗಳಾಗಿವೆ. ಈ ಸಾಧನೆಗಾಗಿ ಇಂಡಿಯನ್ ಅಕಾಡೆಮಿ ಆಫ್ ಓರಲ್ ಮೆಡಿಸಿನ್ ಆ್ಯಂಡ್ ರೇಡಿಯಾಲಜಿ ಸಂಘವು ವಿದ್ಯಾರ್ಥಿನಿಯನ್ನು ಸನ್ಮಾನಿಸಿ ಪ್ರಮಾಣ ಪತ್ರ ನೀಡಿದೆ.

ನವೆಂಬರ್ 2025 ರಲ್ಲಿ ನಡೆದ ಎಮ್.ಡಿ.ಎಸ್ (ಸ್ನಾತಕೋತ್ತರ) ಪರೀಕ್ಷೆಯಲ್ಲಿ ಕಾಲೇಜಿನ ಡಾ.ಮಹಮದ್ ಫಾಝಿಲ್ ಓರಲ್ ಮೆಡಿಸಿನ್ ಆ್ಯಂಡ್ ರೇಡಿಯಾಲಜಿ ಕೋರ್ಸ್‌ನಲ್ಲಿ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಪ್ರಥಮ ರ್‍ಯಾಂಕ್‌ನಲ್ಲಿ ಉತ್ತೀರ್ಣರಾಗಿರುವರು.

ಈ ಶೈಕ್ಷಣಿಕ ಸಾಧನೆಗಾಗಿ ಡಾ.ಮಿತಾಲಿ ಜಿ.ಕರ್ವಾ ಮತ್ತು ಡಾ.ಮಹಮದ್ ಫಾಝಿಲ್ ಅವರನ್ನು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ. ವೀರಣ್ಣ ಸಿ. ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಪಿ.ಎಮ್.ಎನ್.ಎಮ್ ಡೆಂಟಲ್ ಕಾಲೇಜಿನ ಪ್ರಾಚಾರ್ಯ ಡಾ.ರವಿರಾಜ ದೇಸಾಯಿ, ಮತ್ತು ಓರಲ್ ಮೆಡಿಸಿನ್ ಆ್ಯಂಡ್ ರೇಡಿಯಾಲಜಿ ವಿಭಾಗದ ಮುಖ್ಯಸ್ಥ ಡಾ.ಪ್ರವೀಣಕುಮಾರ ರಾಮದುರ್ಗ ಅಭಿನಂದಿಸಿರುವರು.

## ವಿವಿಧ ನಗರಸಭೆ ಆಯವ್ಯಯ ಅಂದಾಜು ಪತ್ರಿಕೆಗಳಿಗೆ ಡಿಸಿ ಅನುಮೋದನೆ




• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯ ಬಾಗಲಕೋಟೆ, ಮುಧೋಳ, ಜಮಖಂಡಿ ಹಾಗೂ ರಬಕವಿ–ಬನಹಟ್ಟಿ ನಗರಸಭೆಗಳ 2026–27ನೇ ಸಾಲಿನ ಆಯ–ವ್ಯಯ ಅಂದಾಜು ಪತ್ರಿಕೆಗೆ ಜಿಲ್ಲಾಧಿಕಾರಿ ಹಾಗೂ ನಗರಸಭೆ ಆಡಳಿತಾಧಿಕಾರಿ ಸಂಗಪ್ಪ ಅವರು ಅನುಮೋದನೆ ನೀಡಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಈ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ, ನಗರಸಭೆ ವತಿಯಿಂದ ತಯಾರಿಸಲಾದ ಬಜೆಟ್ ಪ್ರಸ್ತಾವನೆಗಳನ್ನು ಪರಿಶೀಲನೆ ಮಾಡಿದರು. ಆದಾಯ ಮತ್ತು ವೆಚ್ಚದ ವಿವಿಧ ವಿಭಾಗಗಳನ್ನು ಪರಿಶೀಲಿಸಿದ ಬಳಿಕ ಅನುಮೋದನೆ ನೀಡಲಾಯಿತು. ನಗರ ಮೂಲಸೌಕರ್ಯ ಅಭಿವೃದ್ಧಿ, ಕುಡಿಯುವ ನೀರು, ರಸ್ತೆ ಸುಧಾರಣೆ, ಸ್ವಚ್ಛತೆ ಸೇರಿದಂಥೆ ವಿವಿಧ ಯೋಜನೆಗಳಿಗೆ ಅನುದಾನ ಮೀಸಲಿಡಲಾಗಿದೆ ಎಂದರು.

ನಗರದ ಸಮಗ್ರ ಅಭಿವೃದ್ಧಿಗೆ ಪೂರಕವಾಗುವಂತೆ ಬಜೆಟ್ ರೂಪಿಸಲಾಗಿದೆ. ಸಾರ್ವಜನಿಕರಿಗೆ ಉತ್ತಮ ನಾಗರಿಕ ಸೌಲಭ್ಯಗಳನ್ನು ಒದಗಿಸುವ ದಿಸೆಯಲ್ಲಿ ನಗರಸಭೆ ಅಧಿಕಾರಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಬಾಗಲಕೋಟೆ ನಗರಸಭೆ ಆಯವ್ಯಯ ಪತ್ರಿಕೆಯಲ್ಲಿ ನಿರೀಕ್ಷಿತ ಸ್ವೀಕೃತಿಗಳು 49.97 ಕೋಟಿ ರೂ. ಇದ್ದು, ನಿರೀಕ್ಷಿತ ವೆಚ್ಚಗಳು 49.80 ಕೋಟಿ ರೂ.ಗಳಷ್ಟು ಇದೆ. ಉಳಿತಾಯ 17.50 ಲಕ್ಷ ರೂ.ಗಳಷ್ಟಿದೆ. ಮುಧೋಳ ನಗರಸಭೆ ಅಂದಾಜು ಪತ್ರಿಕೆಯಲ್ಲಿ ನಿರೀಕ್ಷಿತ ಸ್ವೀಕೃತಿಗಳು 44.20 ಕೋಟಿ ರೂ, ನಿರೀಕ್ಷಿತ ವೆಚ್ಚ 44.18 ಕೋಟಿ ರೂ, ಹಾಗೂ ಉಳಿತಾಯ 2.18 ಲಕ್ಷ ರೂ.ಗಳಷ್ಟಿದೆ. ಜಮಖಂಡಿ ನಗರಸಭೆ ಬಜೆಟ್‌ನಲ್ಲಿ ನಿರೀಕ್ಷಿತ ಸ್ವೀಕೃತಿಗಳು 40.15 ಕೋಟಿ ರೂ., ನಿರೀಕ್ಷಿತ ವೆಚ್ಚ 40.10 ಕೋಟಿ ರೂ, ಹಾಗೂ ಉಳಿತಾಯ 5.36 ಲಕ್ಷ ರೂ.ಗಳಷ್ಟಿದೆ. ರಬಕವಿ ಬನಹಟ್ಟಿ ಬಜೆಟ್‌ನಲ್ಲಿ ನಿರೀಕ್ಷಿತ ಸ್ವೀಕೃತಿಗಳು 36.13 ಕೋಟಿ ರೂ, ನಿರೀಕ್ಷಿತ ವೆಚ್ಚಗಲು 36.12 ಕೋಟಿ ರೂ ಹಾಗೂ ಉಳಿತಾಯ 1.03 ಲಕ್ಷಗಳಷ್ಟು ಇರುತ್ತದೆ.

ಸಭೆಯಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಣುಕಾ ಎಂ, ನಗರಸಭೆ ಪೌರಾಯುಕ್ತರಾದ ವಾಸಣ್ಣ ಆರ್, ಜ್ಯೋತಿ ಗಿರೀಶ, ಗೋಪಾಲ ಕಾಸೆ, ರಮೇಶ ಜಾದವ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಲಿಂಗ ಸಾಮರಸ್ಯದಿಂದ ಮಹಿಳಾ ಸಬಲೀಕರಣ ಸಾಧ್ಯ: ಸುಷ್ಮಾ




• ಮಲ್ಲಮ್ಮ ನುಡಿ ವಾರ್ತೆ ಹೊಸಪೇಟೆ

ವಿಜಯನಗರ ಮಹಾವಿದ್ಯಾಲಯ, ಹೊಸಪೇಟೆ ಎನ್.ಎಸ್.ಎಸ್ ಘಟಕದಿಂದ ಆಯೋಜಿಸಿದ ವಿಶೇಷ ವಾರ್ಷಿಕ ಶಿಬಿರದ ಮೂರನೇ ದಿನದ ವಿಶೇಷ ಉಪನ್ಯಾಸಕ ಕಾರ್ಯಕ್ರಮದಲ್ಲಿ

ಮಹಿಳೆ ಮತ್ತು ಪುರುಷ ತಮ್ಮ ನ್ಯೂನ್ಯತೆ ಮತ್ತು ಶಕ್ತಿಗಳನ್ನು ಅರಿತುಕೊಂಡು ಇಬ್ಬರೂ ಸಮ ಎಂದು ಸ್ವೀಕಾರ ಮಾಡಿಕೊಂಡು ಹೊಂದಾಣಿಕೆಯನ್ನು ರೂಢಿಸಿಕೊಂಡಲ್ಲಿ ಮಾತ್ರ ಬದುಕು ಅರ್ಥಪೂರ್ಣ ಎಂದು ವಿಜಯನಗರ ಕಾಲೇಜಿನ ಆಂಗ್ಲ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ಸೂಷ್ಮಾಹೂಗಾರ್ ಮಾಹಿತಿ ನೀಡಿದರು.ವಿಜಯನಗರ ಕಾಲೇಜಿನ ಆಂಗ್ಲ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ. ಸೂಷ್ಮಾಹೂಗಾರ್ ಅವರು ಮಹಿಳಾ ಸಬಲೀಕರಣ ಹಾಗೂ ಲಿಂಗಸಾಮರಸ್ಯದ ಅನಿವಾರ್ಯತೆಯ ಕುರಿತು ಮಾತನಾಡಿದರು.ಇಂದಿನ ಕಾಲದ ಮಹಿಳೆ,ಶಿಕ್ಷಣ ಪಡೆದಿದ್ದಾಳೆ,ಆರ್ಥಿಕವಾಗಿ ಸ್ವಾವಲಂಬಿಯಾಗಿದ್ದಾಳೆ. ಆದರೆ ಇವುಗಳ ಆಧಾರದ ಮೇಲೆ ಮಹಿಳೆ ಸಬಲೆಯಾಗಿದ್ದಾಳೆ ಎಂದರೆ ಅದು ಕೇವಲ ಕಲ್ಪನೆ , ಮೊದಲಿನ ಕಾಲಕ್ಕೂ ಈಗಿನ ಕಾಲಕ್ಕೂ ಹೋಲಿಸಿದರೆ ಕೇವಲ ಶೋಷಣೆ ಆಯಾಮಗಳು ಬದಲಾಗಿವೆ, ಹೊರತು ಕಡಿಮೆಯಾಗಿಲ್ಲ. ಮಹಿಳಾ ಸಬಲೀಕರಣದ ಪ್ರಕ್ರಿಯೆ ನಡೆಯಬೇಕಾಗಿರುವುದು ಸಮಾಜದಲ್ಲಲ್ಲ ಸ್ತ್ರೀ ಹಾಗೂ ಪುರುಷನ ವೈಚಾರಿಕತೆಯಲ್ಲಿ ಮತ್ತು ಅವರ ದೃಷ್ಟಿಕೋನದಲ್ಲಿ ಬದಲಾವಣೆ ಅನಿವಾರ್ಯತೆ ಇದೆ. ಆತ್ಮವಿಶ್ವಾಸ ಆತ್ಮ ಗೌರವ ಮನುಷ್ಯನ ಅತಿ ದೊಡ್ಡ ಸಂಪತ್ತು, ಪ್ರತಿ ಮಹಿಳೆ ಆತ್ಮವಿಶ್ವಾಸ ಮತ್ತು ಆತ್ಮ ಗೌರವದಿಂದ ಜೀವನ ನಡೆಸಬೇಕು ಹಾಗೆಯೇ ಪ್ರತಿ ಸವಾಲುಗಳನ್ನು ಅವಕಾಶಗಳನ್ನಾಗಿ ಬದಲಾಯಿಸುವ ಛಲ ಹೊಂದಿರಬೇಕು ಎಂದು ಕರೆ ನೀಡಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕರಿಬಸಯ್ಯ ಅವರು ಮಹಿಳೆ ಮತ್ತು ಪುರುಷ ಎಂಬ ಭೇದಭಾವನ್ನು ಮಾಡದೇ ಎಲ್ಲರೂ ಮುನ್ನಡದರೆ ಸಮಸಮಾಜವನ್ನು ಕಾಣಲು ಸಾಧ್ಯ ಎಂದು ಹೇಳಿದರು. ಈ ವೇಳೆ ಎನ್. ಎಸ್. ಎಸ್ ನ ಕಾರ್ಯಕ್ರಮಾಧಿಕಾರಿ ಡಾ.ಗಾದೆಪ್ಪ ಹಾಗೂ ಡಾ. ವಿರೇಶ್ ಉಪಸ್ಥಿತರಿದ್ದರು ಮತ್ತು ಶಿಬಿರಾರ್ಥಿಗಳು, ಕಾಲೇಜಿನ ಉಪನ್ಯಾಸಕರು ಭಾಗವಹಿಸಿದ್ದರು.

## ಜಿಲ್ಲಾ ಮಟ್ಟದ ಉದ್ಯೋಗ ಮೇಳ: ತಿಮ್ಮಾಪೂರ




• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಮಾರ್ಚ 17 ರಂದು ಬೆಳಿಗ್ಗೆ 9 ರಿಂದ ಸಂಜೆ 5 ವರೆಗೆ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ–2026 ಹಮ್ಮಿಕೊಳ್ಳಲಾಗುತ್ತಿದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿಂದು ಉದ್ಯೋಗ ಮೇಳದ ಪ್ರಚಾರ ಪೋಸ್ಟರಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು ಜಿಲ್ಲೆಯ ಉದ್ಯೋಗಾಕಾಂಕ್ಷಿಗಳಿಗೆ ಸುವರ್ಣಾವಕಾಶ ಒದಗಿಸುವ ಉದ್ದೇಶದಿಂದ ಜಿಲ್ಲಾ ಪಂಚಾಯತ ವತಿಯಿಂದ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗುತ್ತಿದೆ. ಮೇಳದಲ್ಲಿ ವಿವಿಧ ಕ್ಷೇತ್ರದ 50 ಕ್ಕೂ ಹೆಚ್ಚು ಪ್ರತಿಷ್ಠಿತ ಕಂಪನಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ಜಿ.ಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಮೇಳದಲ್ಲಿ ಉತ್ಪಾದನಾ ವಲಯ, ಬ್ಯಾಂಕಿಂಗ್ ಕ್ಷೇತ್ರ, ಮಾರಾಟ, ಮಾಹಿತಿ ತಂತ್ರಜ್ಞಾನ, ಗಾರ್ಮೆಂಟ್ಸ್, ಸೇವಾ ಹಾಗೂ ಪ್ರವಾಸೋದ್ಯಮ, ಹಣಕಾಸು ಮತ್ತು ನಿರ್ವಹಣಾ ಕ್ಷೇತ್ರ ಸೇರಿದಂತೆ ಹಲವಾರು ವಿಭಾಗಗಳಲ್ಲಿ ಉದ್ಯೋಗ ಅವಕಾಶಗಳಿವೆ. ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮಾ, ಪದವಿ ಹಾಗೂ ಸ್ನಾತ–ಕೋತ್ತರ ಪದವೀಧರರಿಗೆ ನೂರಾರು ಅವಕಾಶಗಳು ಸೇರಿದಂತೆ ವಿವಿಧ ವಿದ್ಯಾರ್ಹತೆಗಳಿಗೆ ಉದ್ಯೋಗ ಅವಕಾಶವಿರುತ್ತದೆ ಎಂದರು.

ಕೋಟೆನಾಡಿನ ಯುವಜನತೆಗೆ ಉದ್ಯೋಗ ಅವಕಾಶ ಸಿಗುವ ನಿಟ್ಟಿನಲ್ಲಿ ಬೃಹತ್ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದ್ದು, 18 ವರ್ಷ ಮೇಲ್ಪಟ್ಟ ಯಾವುದೇ ವಿದ್ಯಾರ್ಹತೆಯ ಹೊಂದಿರುವ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ನೇರ ಸಂದರ್ಶನದ ಮೂಲಕ ಉದ್ಯೋಗ ಪಡೆಯಬಹುದು. ಆಸಕ್ತರು ಗೂಗಲ್ ಫಾರ್ಮ್ಃಣಣಠಿ://ಜಿಂಡಿಟ.ರಟಜ/ಃ೦4ಘ3ಒಜಇಇಥಿಛಿಕ61ಊ7 ಮೂಲಕ ಪೂರ್ವ ನೋಂದಣಿ ಮಾಡಿಕೊಳ್ಳಬಹುದಾಗಿದೆ. ನೋಂದಣಿ ಮಾಡಿದವರು ಮೇಳದಿನದಂದು ನೇರವಾಗಿ ಹಾಜರಾಗಿ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಈ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ಉದ್ಯೋಗ ಪಡೆದುಕೊಳ್ಳಲು ತಿಳಿಸಿದರು. ಹೆಚ್ಚಿನ ಮಾಹಿತಿಗಾಗಿ ಪ್ರಭುದೇವ ರೆಡ್ಡಿ (8147111236), ಅನ್ನಪೂರ್ಣ ಭಗವತಿ (9611640206) ಗೆ ಸಂಪರ್ಕಿಸಬಹುದಾಗಿದೆ.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಯುಕೆಪಿ ಮಹಾವ್ಯವಸ್ಥಾಪಕ ಗಜಾನನ ಬಾಲೆ, ಜಿಲ್ಲಾ ಕೌಶಲ್ಯಾಧಿಕಾರಿ ಹಿರೇಮಠ, ಜಿ.ಪಂ ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಭಿವೃದ್ಧಿಗೆ ಅನುದಾನ ನೀಡಲು ಮನವಿ



ಮುದಗಲ್ : ಲಿಂಗಸಗೂರು ಕ್ಷೇತ್ರದ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನ ನೀಡುವಂತೆ ಬೆಂಗಳೂರಿನ ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಗುರುವಾರ ಮಾಜಿ ಶಾಸಕ ಹಾಗೂ ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಡಿ.ಎಸ್ ಹೂಲಗೇರಿ ಮನವಿ ಪತ್ರ ಸಲ್ಲಿಸಿದರು.

ಲಿಂಗಸಗೂರು ತಾಲೂಕ ವ್ಯಾಪ್ತಿಗೆ ಒಳಪಡುವ ಮುದಗಲ್, ಹಟ್ಟಿ. ಲಿಂಗಸಗೂರು ಸೇರಿದಂತೆ ವಿವಿಧ ಪಟ್ಟಣ ಹಾಗೂ ಗ್ರಾಮೀಣ ಭಾಗಗಳ ಅಭಿವೃದ್ಧಿಗಾಗಿ ಸರಕಾರ ಹೆಚ್ಚಿನ ಅನುದಾನ ನೀಡಿ ವಿಶೇಷ ಗಮನ ಹರಿಸಬೇಕು ಎಂದು ಒತ್ತಾಯಿಸಿದರು. ಕ್ಷೇತ್ರದಲ್ಲಿ ಮುದಗಲ್ ಪಟ್ಟಣಕ್ಕೆ ಕುಡಿಯುವ ನೀರಿನ ಸಮಸ್ಯೆ ಬಹುದಿನಗಳ ಬೇಡಿಕೆಯಾಗಿದೆ. ಲಿಂಗಸಗೂರು ಕ್ಷೇತ್ರದಲ್ಲಿ ಶೈಕ್ಷಣಿಕವಾಗಿ ಖಾಲಿ ಇರುವ ಹುದ್ದೆಗಳನ್ನು ಪೂರ್ಣಗೊಳಿಸುವದು. ವಿವಿಧಗ್ರಾಮೀಣ ಭಾಗಗಳ ರಸ್ತೆ ಅಭಿವೃದ್ಧಿ ಮಾಡುವುದು. ವಿವಿಧ ಇಲಾಖೆಯಲ್ಲಿ ನಿಂತು ಹೋಗಿರುವ ಯೋಜನೆಗಳನ್ನು ಸಮಗ್ರವಾಗಿ ತನಿಕೆ ಮಾಡಿ ಪೂರ್ಣಗೊಳಿಸಬೇಕು . ರೈತರ ಬೆಳೆ ಹಾಗೂ ಸಾರ್ಜನಿಕರಿಗೆ ಕುಡಿಯಲು ಕೃಷ್ಣನದಿಯಿಂದ ಸಮರ್ಪಕವಾಗಿ ನೀರು ಒದಗಿಸಬೇಕು. ಹಟ್ಟಿ ಚಿನ್ನದ ಗಣಿ ಕಾರ್ಮಿಕರ ನೇಮಕಾತಿ ಹಾಗೂ ಸೇವೆಯಲ್ಲಿರುವ ಕಾರ್ಮಿಕರ ಸ್ಥಿತಿಗತಿಗಳ ಸಮಸ್ಯೆಗೆ ಸ್ಪಂದಿಸುವ ಕಾರ್ಯವಾಗಬೇಕಾಗಿದೆ ಎಂದು ಮನವಿ ಮಾಡಿದರು. ಮಾಜಿ ಸಚಿವ ಮಲ್ಲಿಕಾರ್ಜುನ ನಾಗಪ್ಪ, ಕೆಪಿಸಿಸಿ ಸದಸ್ಯ ಅಮರಗುಂಡಪ್ಪ ಮೇಟಿ, ಕೆಡಿಪಿ ಸದಸ್ಯ ಪರಮೇಶ ಗೋರ್ ರವಿ ನಾಯಕ, ಎಂ.ಡಿ ಶಫೀ, ಶಾಂತಪ್ಪ, ಮೈನುದ್ದಿನ್ ಸೇರಿದಂತೆ ಇತರರಿದ್ದರು.

## ಅಡುಗೆ ಅನಿಲ ಕೊರತೆ ವದಂತಿ: ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ

• ಮಲ್ಲಮ್ಮ ನುಡಿ ವಾರ್ತೆ ಹೊಸಪೇಟೆ



ಇತ್ತೀಚಿನ ಜಿಲ್ಲೆಯಲ್ಲಿ ಗೃಹ ಬಳಕೆ ಅನಿಲ ಸಿಲಿಂಡರ್‌ಗಳ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂಬ ಸುಳ್ಳು ವದಂತಿಗಳು ಹಬ್ಬಿದೆ. ಜಿಲ್ಲೆಯಲ್ಲಿ ಯಾವುದೇ ರೀತಿಯ ಅನಿಲ ಕೊರತೆಯಾಗದೇ ಎಂದಿನಂತೆ ಪೂರೈಕೆಯಾಗಲಿದೆ ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಸ್ಪಷ್ಟಪಡಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗುರುವಾರ ಅಡುಗೆ ಅನಿಲ ಪೂರೈಕೆಗೆ ಸಂಬಂಧಿಸಿದಂತೆ ಆಯೋಜಿಸಲಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಾಶ್ಚಿಮಾತ್ಯ ದೇಶಗಳಲ್ಲಿ ಯುದ್ಧದ ಸನ್ನಿವೇಶವನ್ನು ಮುಂದಿಟ್ಟುಕೊಂಡು ಅನಿಲದ ಕೊರತೆಯಾಗಲಿದೆ ಎಂಬ ವದಂತಿಗಳಿಗೆ ಕಿವಿಗೊಡಬಾರದು. ಜಿಲ್ಲೆಯಲ್ಲಿ ಯಾವುದೇ ರೀತಿಯ ಅನಿಲ ಕೊರತೆ ಉಂಟಾಗಿಲ್ಲ. ಸರ್ಕಾರದ ನಿಯಮಾನುಸಾರ ಅನಿಲ ವಿತರಕ ಸಂಸ್ಥೆಗಳ ಮೂಲಕ ಪೂರೈಕೆಯು ಎಂದಿನಂತೆ ಸುಗಮವಾಗಿ ನಡೆಯಲಿದೆ. ಒಂದು ವೇಳೆ ಜಿಲ್ಲೆಯಲ್ಲಿ ಯಾರಾದರೂ ಅಕ್ರಮವಾಗಿ ಸಿಲಿಂಡರ್‌ಗಳನ್ನು ಸಂಗ್ರಹಿಸಿರುವುದು ಕಂಡುಬಂದಲ್ಲಿ, ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಅನಿಲ ಪೂರೈಕೆಗೆ ಸಂಬಂಧಿಸಿದಂತೆ ಯಾವುದೇ ಸಮಸ್ಯೆಗಳಿದ್ದಲ್ಲಿ ತಕ್ಷಣವೇ ಆಯಾ ಅನಿಲ ವಿತರಕ ಸಂಸ್ಥೆಗಳನ್ನು ಸಂಪರ್ಕಿಸಬೇಕು. ಯಾವುದೇ ಕಾರಣಕ್ಕೂ ಮಧ್ಯವರ್ತಿಗಳ ಮೊರೆ ಹೋಗಬಾರದು ಎಂದು ತಿಳಿಸಿದರು.

ಈ ವೇಳೆ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಉಪನಿರ್ದೇಶಕ ರಿಯಾಜ್, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಅನಿಲ ಪೂರೈಕೆ ಉದ್ಯಮದ ಮುಖ್ಯಸ್ಥರು ಉಪಸ್ಥಿತರಿದ್ದರು.


## ಮಾ.15 ರಂದು ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ನಗರ ಜೆಸ್ಕಾಂ ನಗರ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 110/11ಕೆವಿ ಸೌತ್ ವಿದ್ಯುತ್ ಎಂಯುಎಸ್‌ಎಸ್ ನಿಂದ ವಿದ್ಯುತ್ ಸರಬರಾಜು ಆಗುವ ಫೀಡರ್ ಎಫ್–24, ಎಫ್–25, ಎಫ್–46 ಮತ್ತು ಎಫ್–47 ಫೀಡರ್ ಗಳಲ್ಲಿ ನಿರ್ವಹಣಾ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಮಾ.15 ರಂದು ಬೆಳಿಗ್ಗೆ 10 ರಿಂದ ಸಂಜೆ 06 ಗಂಟೆಯವರೆಗೆ ನಗರದ ಬೆಂಗಳೂರು ರಸ್ತೆ, ಅಂಧ್ರಾಳ್ ರಸ್ತೆ, ಕೊಲಮಿ ಚೌಕ್, ಕಾರ್ಕಲ ತೋಟ, ಬಾಪೂಜಿ ನಗರ, ಮಿಲ್ಲರ್ ಪೇಟೆ, ತೇರು ಬೀದಿ, ಇಂಡಸ್ಟ್ರಿಯಲ್ ಏರಿಯಾ ಹಂತ–1, ಸಾಯಿ ಕಾಲೋನಿ, ಎಪಿಎಮ್‌ಸಿ, ರಾಣಿತೋಟ, ಮರಿಸ್ವಾಮಿ ಮಠ, ದೊಡ್ಡ ಮಾರ್ಕೆಟ್, ತೋಪಿಗಲ್ಲಿ, ಬೊಮ್ಮನಾಳ್ ರಸ್ತೆ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚತುಷ್ಪಥ ರಸ್ತೆಗೆ ಗಡ್ಕರಿ ಸಮ್ಮತಿ: ತುಕರಾಂ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನವದೆಹಲಿಯಲ್ಲಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ರವರನ್ನು ಲೋಕಸಭಾ ಸದಸ್ಯ ಈ.ತುಕರಾಂ ನಿನ್ನೆ ಭೇಟಿ ಮಾಡಿ. ಬಳ್ಳಾರಿ ನಗರದ ಪ್ರಮುಖ ಸಮಸ್ಯೆಯಾಗಿರುವ ರಾಷ್ಟ್ರೀಯ ಹೆದ್ದಾರಿ 67 ರ ರಸ್ತೆ ಸಂಚಾರ ದಟ್ಟಣೆ ಮತ್ತು ಮೂಲಸೌಕರ್ಯ ಕೊರತೆಯನ್ನು ಶಾಶ್ವತವಾಗಿ ಪರಿಹರಿಸಲು. ಹೈವೇ ಬೈ–ಪಾಸ್ ನಿಂದ ಸುಧಾ ಕ್ರಾಸ್ ವರೆಗಿನ ರಸ್ತೆಯನ್ನು ಎರಡು ಲೇನ್ನಿಂದ ನಾಲ್ಕು ಲೇನ್ಗೆ ಅಭಿವೃದ್ಧಿಪಡಿಸಲು ಸುಮಾರು 90 ಕೋಟಿ. ಬಳಿ ಹಗರಿ ನದಿಗೆ ಸೇತುವೆ ನಿರ್ಮಾಣಕ್ಕೆ 60 ಕೋಟಿ ಅನುದಾನ ನೀಡುವಂತೆ ಮನವಿ ಮಾಡಿದ್ದಾರೆ.

ಮನವಿಗೆ ಸಕಾರತ್ಮಕವಾಗಿ ಸ್ಪಂದಿಸಿದ ಸಚಿವರು ಬಳ್ಳಾರಿ ಬೈ–ಪಾಸ್ ನಿಂದ ಸುಧಾ ಕ್ರಾಸ್ ರೆಗಿನ ರಸ್ತೆಯನ್ನು ಎರಡು ಲೇನ್ನಿಂದ ನಾಲ್ಕು ಲೇನ್ಗೆ ಅಭಿವೃದ್ಧಿಪಡಿಸಲು ಕೂಡಲೇ ಅನುಮೋದನೆ ನೀಡುವುದಾಗಿ ಹಾಗೂ ಗುಳ್ಯಂ ಸೇತುವೆ ನಿರ್ಮಾಣಕ್ಕೆ ಕೇಂದ್ರ ರಸ್ತೆ ಮತ್ತು ಮೂಲಸೌಕರ್ಯ ನಿಧಿ ಅಡಿಯಲ್ಲಿ ಅನುದಾನ ನೀಡಲು ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದ್ದಾರೆ .ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಕೈಗಾರಿಕಾ ಬೆಳವಣಿಗೆ, ರಾಜ್ಯಾಂತರ ಸಂಪರ್ಕ ಮತ್ತು ಸಾರ್ವಜನಿಕರ ಸುರಕ್ಷತೆಗಾಗಿ ಈ ರಸ್ತೆ ಅತ್ಯಂತ ಮಹತ್ವದ್ದಾಗಿದ್ದು, ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಟ್ರಾಫಿಕ್ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಅಗತ್ಯವನ್ನು ಸ್ಪಷ್ಟವಾಗಿ ಸರ್ಕಾರದ ಮುಂದೆ ಮಂಡಿಸಿದೆ ಎಂದು ತುಕರಾಂ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಖಾತಾ ಆಂದೋಲನ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್




: ಮೊಬೈಲ್ ಮತ್ತು ವೆಬ್ ಆಧಾರಿತ ತಂತ್ರಾಂಶದ ಮೂಲಕ ಇ– ಪೌತಿ ಖಾತಾ ಆಂದೋಲನದಡಿ ಸರಳವಾಗಿ ಅಸ್ತಿವರ್ಗಾವಣೆ ಮಾಡಲಾಗುವದು ಎಂದು ಲಿಂಗಸುಗೂರ ಸಹಾಯಕ ಆಯುಕ್ತರಾದ ಬಸಣೆಪ್ಪ ಕಲ್ಲಶೆಟ್ಟಿ ಹೇಳಿದರು.

ಕರ್ನಾಟಕ ಸರಕಾರ ಕಂದಾಯ ಇಲಾಖೆ,ತಹಶೀಲ್ದಾರ ಕಾರ್ಯಾಲಯ ಲಿಂಗಸುಗೂರ ಸಂಯೋಗದಲ್ಲಿ ಪಟ್ಟಣ ಸಮೀಪದ ಬನ್ನಿಗೋಳ, ವ್ಯಾಕರನಾಳ ಛತ್ತರರೋಡ್ ತಾಂಡದಲ್ಲಿ ಇ– ಪೌತಿ ಖಾತಾ ಆಂದೋಲನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ ಅವರು ರೈತರು ಆಸ್ತಿಗಳ ಪೌತಿ ಖಾತೆಗಾಗಿ

ತಾಲ್ಲೂಕು ಕಚೇರಿಗೆ ಅಲೆದಾಡುವುದನ್ನು ತಪ್ಪಿಸಲು ಈ ಜಾರಿಗೆ ಸರಕಾರ ಜಾರಿಗೆ ತಂದಿದೆ ಪೌತಿ ಖಾತೆ ಮಾಡಿಸಿಕೊಳ್ಳಲು ಅಗತ್ಯ ದಾಖಲೆಗಳಾದ ವಂಶಾವಳಿ, ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ ಮತ್ತು ಪಹಣಿ ಮೂಲಕ ಆಸ್ತಿ ಬದಲಾವಣೆ ಮಾಡಿಕೊಂಡು ಈ ಯೋಜನೆಯನ್ನು ಈ ಭಾಗದ ರೈತರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಉಪತಹಶೀಲ್ದಾರ ತುಳಜಾರಮ ಸಿಂಗ್, ಕಂದಾಯ ನಿರೀಕ್ಷಕ ಶಂಕ್ರಪ್ಪ ಪಟ್ಟಣಶೆಟ್ಟಿ ನಾಗಲಾಪುರು ,ಗ್ರಾಮ ಆಡಳಿತಾಧಿಕಾರಿ ಮಾಬೂಬಸಾಬ ಹಲ್ಕಾವಟಗಿ, ಸೇರಿದಂತೆ ವಿವಿಧ ಗ್ರಾಮಗಳ ರೈತರು ಇದ್ದರು.

## ಕಾರು ಪಲ್ಟಿ: ಪ್ರಯಾಣಿಕರ ಸಾವು



**ವಿಜಯಪುರ:** ಕಾರು ಪಲ್ಟಿಯಾಗಿ ಇಬ್ಬರು ಪ್ರಯಾಣಿಕರ ಸಾವನ್ನಪ್ಪಿದ ಘಟನೆ ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಳಿಕೋಟೆ ಹೆದ್ದಾರಿಯ ಬಸವನಹಟ್ಟಿ ಕ್ರಾಸ್ ಬಳಿ ನಡೆದಿದೆ.

ಸ್ವಿಫ್ಟ್ ಡಿಜೈರ್ ಕಾರಿನಲ್ಲಿ ನಾಲ್ವರು ಕಾಗವಾಡದಿಂದ ಶ್ರೀಶೈಲಕ್ಕೆ ಪ್ರಯಾಣಿಸುತ್ತಿದ್ದರು, ಅಪಘಾತದಲ್ಲಿ ಕಾರಿನಲ್ಲಿದ್ದ ನಾಲ್ವರ ಪೈಕಿ ಇಬ್ಬರು ಪ್ರಯಾಣಿಕರು ಸಾವೀಗಿಡಾಗಿ ಇನ್ನಿಬ್ಬರಿಗೆ ಗಂಭೀರ ಗಾಯಗಳಾಗಿವೆ. ಕಾಗವಾಡದ ಚಂದ್ರವ್ವ ಟಕ್ಕೆನ್ನವರ (70) ಹಾಗೂ ಕಾಮಪ್ಪ ಅವರಾದಿ (65) ಮೃತ ಪ್ರಾಮಾಣಿಕರಾಗಿದ್ದರೆ. ಬಸವನ ಬಾಗೇವಾಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ.

## ಬಿಜೆಪಿ ನಾಯಕರಿಗೆ ಹೊಟ್ಟೆಕಿಚ್ಚು: ಸಿದ್ದುಗೌಡ

**ಚಿತ್ತಾಪುರ:** ಕ್ಷೇತ್ರದ ಅಭಿವೃದ್ಧಿಗೆ ಕಲ್ಬುರ್ಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಸಾವಿರ ಕೋಟಿಗೂ ಹೆಚ್ಚು ಅನುದಾನ



ತಂದು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ್ದು, ಬಿಜೆಪಿ ನಾಯಕರಿಗೆ ಸಹಿಸಿಕೊಳ್ಳಲು ಆಗದೆ ಹೊಟ್ಟೆಕಿಚ್ಚಿನಿಂದ ಇಲ್ಲಸಲ್ಲದ ಹೇಳಿಕೆ ನೀಡುತ್ತಿದ್ದಾರೆ ಎಂದು ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ದುಗೌಡ ಅಫಜಲಪೂರಕರ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದ 224 ಶಾಸಕರಲ್ಲಿ ಅತೀ ಹೆಚ್ಚು ಅನುದಾನ ತಂದಂಥ ಸಚಿವ ಪ್ರಿಯಾಂಕ್ ಖರ್ಗೆ ಅವರ ಅಭಿವೃದ್ಧಿ ನೋಡಲು ಆಗದೇ ಬಿಜೆಪಿ ನಾಯಕರು ಹತಾಶೆಗೊಂಡು ಏನೇನೋ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ಸಚಿವರ ಬಗ್ಗೆ ಮಾತನಾಡುವ ಬಿಜೆಪಿ ಅವರಿಗೆ ಯಾವುದೇ ನೈತಿಕತೆ ಇಲ್ಲ ಎಂದು ಹೇಳಿದರು.

ಕಾರ್ಯಕರ್ತರಿಗೆ ಜೇಬು ತುಂಬುತ್ತಿದ್ದಾರೆ ಎಂಬ ಬಿಜೆಪಿ ಮುಖಂಡರ ಹೇಳಿಕೆ ಹಾಸ್ಯಾಸ್ಪದವಾಗಿದೆ. ಸರ್ಕಾರದ ಯಾವುದೇ ಅನುದಾನವನ್ನು ನಿಯಮಾನುಸಾರವಾಗಿ ಕಾರ್ಯರೂಪಕ್ಕೆ ಬರುವಂತಹ ಒಂದು ಪ್ರಕ್ರಿಯೇ, ಅದನ್ನು ಯಾರು ಬದಲಾವಣೆ ಮಾಡುವಂತಿಲ್ಲಾ ಎಂಬ ಸಾಮಾನ್ಯ ಅರಿವು ಬಿಜೆಪಿ ನಾಯಕರಿಗೆ ಇಲ್ಲ ಎಂದು ತಿರುಗೇಟು ನೀಡಿದ್ದಾರೆ.

ಪ್ರಿಯಾಂಕ್ ಖರ್ಗೆಯವರು ಯಾವತ್ತೂ ಅಭಿವೃದ್ಧಿಯ ವಿಷಯದಲ್ಲಿ ನಾಟಕ ಮಾಡುವುದಿಲ್ಲ, ಯಾವುದು ಹೇಳುತ್ತಾರೆ ಆ ಕೆಲಸ ಮಾಡುತ್ತಾರೆ. ನುಡಿದಂತೆ ನಡೆಯುವ ಏಕೈಕ ನಾಯಕರು. ಸಾವಿರ ಕೋಟಿ ಅನುದಾನ ತಂದಿರುವುದು ನಾಟಕವಲ್ಲ, ಸಾವಿರಾರು ಜನರ ಸಮ್ಮುಖದಲ್ಲಿ ಡಿಸಿಎಂ ಡಿ.ಕೆ.ಶಿವುಕುಮಾರ್ ಹಾಗೂ ರಾಜ್ಯಸಭಾ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರಿಂದ ಉದ್ಘಾಟನೆ ಮಾಡಿಸಿದ್ದಾರೆ. ಇಷ್ಟು ದೊಡ್ಡ ಮೊತ್ತದ ಅನುದಾನವನ್ನು ತಂದಿರುವುದು ನೋಡಿ ಬಿಜೆಪಿ ಮುಖಂಡರು ದಿಗ್ಭಮೆಗೊಂಡಿದ್ದಾರೆ ಎಂದು ತಿಳಿಸಿದ್ದಾರೆ.

ತೊಗರಿ ಬೆಳೆ ನೇಟೆರೋಗಕ್ಕೆ ತುತ್ತಾಗಿ ರೈತರು ಕಂಗಾಲಾದಾಗ ಒಬ್ಬ ಬಿಜೆಪಿ ನಾಯಕರು ಧ್ವನಿ ಎತ್ತಲಿಲ್ಲ, ಆಗ ಬಿಜೆಪಿಯ ಸರ್ಕಾರ ಇತ್ತು ಇದನ್ನು ಅರಿತು ಪ್ರಿಯಾಂಕ್ ಖರ್ಗೆ ರೈತಪರ ಹೋರಾಟಕ್ಕಿಳಿದು ಸರ್ಕಾರದ ವಿರುದ್ಧ ಹೋರಾಡಿ ತೊಗರಿ ಬೆಳೆ ನೇಟೆರೋಗಕ್ಕೆ ತುತ್ತಾಗಿ ರೈತರು ಕಂಗಾಲಾದಾಗ ಒಬ್ಬ ಬಿಜೆಪಿ ನಾಯಕರು ಧ್ವನಿ ಎತ್ತಲಿಲ್ಲ, ಆಗ ಬಿಜೆಪಿಯ ಸರ್ಕಾರ ಇತ್ತು ಇದನ್ನು ಅರಿತು ಪ್ರಿಯಾಂಕ್ ಖರ್ಗೆ ರೈತಪರ ಹೋರಾಟಕ್ಕಿಳಿದು ಸರ್ಕಾರದ ವಿರುದ್ಧ ಹೋರಾಡಿ ರೈತರಿಗೆ ಬೆಳೆ ಪರಿಹಾರ ಕೊಡಿಸಿದ್ದಾರೆ. ಚಿತ್ತಾಪುರಿನಲ್ಲಿ ಹುಟ್ಟಿ ಬೆಳೆದಂತಹ ಬಿಜೆಪಿ ನಾಯಕರು ಅಲ್ಲಿಯ ಶಾಲಾ–ಕಾಲೇಜುಗಳು ಯಾವ ರೀತಿ ಅಭಿವೃದ್ಧಿ ಹೊಂದಿವೆ ಎಂದು ನೋಡಿಯಾದರೂ ತಿಳಿದುಕೊಂಡು ಹೇಳಿಕೆ ನೀಡಬೇಕು, ಅಭಿವೃದ್ಧಿಯ ಹೆಸರಿನಲ್ಲಿ ಇಂತಹ ಹೇಳಿಕೆಗಳು ಕೊಡುವುದು ನಾಯಕರು ಎನಿಸಿಕೊಂಡವರಿಗೆ ಶೋಭೆ ತರುವಂಥದ್ದಲ್ಲ ಎಂದು ಕಿವಿಮಾತು ಹೇಳಿದ್ದಾರೆ.

## ಸನದದ್ಲೂ ನಿಲ್ಲದ ಕುರ್ಚಿಯ ಸ್ವಾರಸ್ಯ

**ಬೆಂಗಳೂರು:** ನೀವು ರಾಜ್ಯದ ಮುಖ್ಯಮಂತ್ರಿ ಅಗಬೇಕು ಎಂಬುವುದು ನಮ್ಮ ಅಪೇಕ್ಷೆ ಎಂದು ಬಿಜೆಪಿ ಶಾಸಕರಿಗೆ ತಿರುಗೇಟು ನೀಡಿದ ಡಿಸಿಎಂ ಡಿಕೆ ಶಿವಕುಮಾರ್ ನನ್ನ ಹೆಸರಿನಲ್ಲಿ ನೀವು ನಿತ್ಯ ಅರ್ಚನೆ ಮಾಡಿ ಎಂದ ಪ್ರಸಂಗ ಸದನದ ಗಮನ ಸೆಳೆಯಿತು. ಶುಕ್ರವಾರ ಬಜೆಟ್ ಮೇಲಿನ ಚರ್ಚೆಯಲ್ಲಿ ಬಿಜೆಪಿ ಸದಸ್ಯ ಸುರೇಶ್ ಗೌಡ ಮಾತನಾಡುತ್ತಾ, ಡಿಕೆ ಶಿವಕುಮಾರ್ ಅವರು ಸಿಎಂ ಆಗಬೇಕು ಎಂಬುವುದು ನನ್ನ ಅಪೇಕ್ಷೆ ಎಂದು ಕಾಲೆಳೆದರು. ಇದು ವಿಧಾನಸಭೆಯಲ್ಲಿ ಚರ್ಚೆಗೆ ಗ್ರಾಸವಾಯಿತು. ಬಜೆಟ್ ಮೇಲಿನ ಚರ್ಚೆ ವೇಳೆ ಸುರೇಶ್ ಗೌಡ ಪವರ್ ಶೇರಿಂಗ್ ವಿಚಾರ ಉಲ್ಲೇಖಿಸಿ ಸಿಎಂ ಹಾಗೂ ಡಿಸಿಎಂ ಕಾಲೆಳೆಯುವ ಪ್ರಯತ್ನ ನಡೆಸಿದರು. 'ನಾನು ಮತ್ತೆ ಡಿಕೆ ಶಿವಕುಮಾರ್ ಹಾಲಿ ಜೇನಿನಂತೆ ಅಂತಾರೆ ಮುಖ್ಯಮಂತ್ರಿ ಗಳು. ಅವರಿಗೆ ನಾವು ಹುಳಿ ಹಿಂಡುತ್ತೇವಂತೆ. ನಾವು ಯಾಕಾಗಿ ಅವರಿಗೆ ಹುಳಿ ಹಿಂಡಬೇಕು? ನಮಗೆ ರಾಜ್ಯ ಹಾಗೂ ಕ್ಷೇತ್ರದಲ್ಲಿ ಮಾಡುವ ಕೆಲಸ ಸಾಕಷ್ಟಿದೆ' ಎಂದರು.

ಮುಂದುವರಿದು, 'ಇವರಿಬ್ಬರ ಸಂಬಂಧ ಹದಗೆಟ್ಟಿ ಹೋಗಿದೆ. ಅಕ್ಕಪಕ್ಕದಲ್ಲಿ 45 ನಿಮಿಷಗಳ ಕೂತ್ಕೊಂಡ್ರು ಕೂಡ ಪರಸ್ಪರ ಒಬ್ಬರಿಗೊಬ್ಬರು ಮಾತಾಡೋದಿಲ್ಲ. ನಗೋದಿರಲಿ, ಮುಖ ಗಂಟಿ ಹಾಕೊಂಡು ಕುಳಿತುಕೊಂಡಿರುತ್ತಾರೆ. ಇವರಿಬ್ಬರೂ ಜೋಡೆತ್ತು ಇದ್ದಂತೆ ಅಂತಾರೆ' ಎಂದು ಕಿಚಾಯಿಸಿದರು. ಈ ವೇಳೆ ಮಧ್ಯಪ್ರವೇಶ ಮಾಡಿದ ಪ್ರಿಯಾಂಕ್ ಖರ್ಗೆ ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದರು. ಇದು ಬಜೆಟ್ ಮೇಲಿನ ಅಭಿಪ್ರಾಯ ಅಲ್ಲ, ಬದಲಾಗಿ ರಾಜಕೀಯ ಹೇಳಿಕೆಯಾಗಿದೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರು ರಾಜ್ಯದಲ್ಲಿ ಎಚ್ ಡಿ ಕುಮಾರಸ್ವಾಮಿ ಅವರನ್ನು ಸಿಎಂ ಮಾಡ್ತಾರಂತೆ. ಆದರೆ ನೀವು ಎಲ್ಲರೂ ಸುಮ್ಮನೆ ಕೂತಿದ್ದೀರಲ್ಲ. ಪಾಪ ಇವರನ್ನೆಲ್ಲಾ ಮುಂದಿನ ಸಾಲಿನಲ್ಲಿ ಕೂರಿಸಿದ್ದೀರಲ್ಲ. ಇವರು ಯಾರು ಸಿಎಂ ಆಗೋದಿಲ್ಲವಂತೆ. ಅಲ್ಲಿರುವ ಕುಮಾರಸ್ವಾಮಿಯವರನ್ನೇ ಮಾಡ್ತಾರಂತೆ ಎಂದು ತಿರುಗೇಟು ನೀಡಿದರು.

ಈ ವೇಳೆ ಮಧ್ಯ ಪ್ರವೇಶ ಮಾಡಿದ ಡಿಸಿಎಂ ಡಿಕೆಶಿ 'ಬಿಜೆಪಿ ಯಲ್ಲಿರುವವರೆಲ್ಲ ನನಗೆ ಸ್ನೇಹಿತರೇ. ನನ್ನನ್ನು ನೆನಪಿಸಿಕೊಳ್ಳದೆ ಇದ್ದರೆ ಅವರಿಗೆ ಸಮಾಧಾನವಿಲ್ಲ. ನಿದ್ದೆ ಬರೋದಿಲ್ಲ, ಖುಷಿ ಬರೋದಿಲ್ಲ, ಸ್ಪೂರ್ತಿ ಬರೋದಿಲ್ಲ. ಅದಕ್ಕಾಗಿ ನನ್ನನ್ನು ಯಾವಾಗಲೂ ನೆನಪು ಮಾಡಿಕೊಳ್ಳುತ್ತಲೇ ಇರುತ್ತಾರೆ. ಬಜೆಟ್ ಮೇಲೆ ಮಾತಾಡೋಕೆ ಏನಿಲ್ಲವಲ್ಲ ಅವರಿಗೆ. ಅದಕ್ಕಾಗಿ ನನ್ನ ಹೆಸರು ಹೇಳ್ಕೊಂಡು ಖುಷಿ ಪಡ್ತಿದ್ದಾರೆ' ಎಂದರು.

# ಕಾಂಗ್ರೆಸ್ ಕಾರ್ಯಾಗಾರ 15ರಂದು: ಮಲ್ಲಿಕಾರ್ಜುನ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ




ಕಾಂಗ್ರೆಸ್ ಪಕ್ಷದ ಸಿದ್ಧಾಂತ, ಪಕ್ಷ ನಡೆದು ಬಂದ ದಾರಿ ಹಾಗೂ ಸರ್ಕಾರದ ಸಾಧನೆ ಕುರಿತಾಗಿ ಇದೇ ದಿ.15 ರಂದು ಕಾಂಗ್ರೆಸ್ ಕಾರ್ಯಕರ್ತರಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಹೇಳಿದರು.

ವಿಜಯಪುರ ನಗರದ ಕಾಂಗ್ರೆಸ್ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಂ–ದು ಬೆಳಿಗ್ಗೆ 10 ಗಂಟೆಗೆ ವಿಜಯಾ ಪಂಕ್ಷನ್ ಹಾಲ್‌ನಲ್ಲಿ ಕರ್ನಾಟಕ ಪ್ರಚಾರ ಸಮಿತಿ ಅಧ್ಯಕ್ಷ ವಿನಾಯಕುಮಾರ ಸೊರಕೆ ನೇತೃತ್ವದಲ್ಲಿ ಕಾರ್ಯಾಗಾರ ನಡೆಯಲಿದ್ದು ಕಾರ್ಯಕ್ರಮದ ಉದ್ಘಾಟಕರಾಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಭಾಗವಹಿಸಲಿದ್ದಾರೆ. ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ, ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ, ಸಿಂದಗಿ ಶಾಸಕ ಅಶೋಕ ಮನಗೂಳಿ, ಮುದ್ದೇಬಿಹಾಳ ಶಾಸಕ ಅಪ್ಪಾಜಿ ನಾಡಗೌಡ, ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ ಸೇರಿದಂತೆ ಪಕ್ಷದ ಪರಾಜಿತ ಅಭ್ಯರ್ಥಿಗಳು ಹಾಗೂ ಹಿರಿಯ ಮುಖಂಡರು ಭಾಗವಹಿಸಲಿದ್ದಾರೆ.

ಜಿಲ್ಲೆಯ ಪ್ರತಿ ಭೂತ್ ನಿಂದಲೂ 100 ಜನ ನಿಷ್ಠಾವಂತ ಕಾರ್ಯಕರ್ತರು ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದಾರೆ. ಸುಮಾರು 1600 ಜನ ಜಿಲ್ಲೆಯ ಕಾರ್ಯಕರ್ತರು ಸೇರುವ ನೀರೀಕ್ಷೆ ಇದ್ದು, ಕಾರ್ಯಾಗಾರದಲ್ಲಿ ಕಾಂಗ್ರೆಸ್ ಸರ್ಕಾರ್ 140 ವರ್ಷಗಳ ಇತಿಹಾಸ, ಉದ್ದೇಶ ಹಾಗೂ ವಿವಿಧ ರಾಜ್ಯಗಳಲ್ಲಿ ಸರ್ಕಾರ ನಡೆಸಿರುವ ಅನುಭವ, ಕಾರ್ಯತಂತ್ರಗಳ ಬಗ್ಗೆ ಅರಿವು ಮೂಡಿಸುವ ಕಾರ್ಯ ನಡೆಯಲಿದೆ ಎಂದರು.

ಕೇಂದ್ರ ಸರ್ಕಾರದ ವಿರುದ್ಧ ಜನ ಸಾಮಾನ್ಯರ ಪರವಾಗಿ ಹೋರಾಟ ಹಮ್ಮಿಕೊಳ್ಳುವುದು. ನಮ್ಮ ಸರ್ಕಾರದ ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವುದು ಸೇರಿದಂತೆ ಕೇಂದ್ರ ಸರ್ಕಾರದ ವಿರುದ್ಧ ಜನಪರ ಹೋರಾಟವನ್ನು ತೀವ್ರಗೊಳಿಸುವ ಕುರಿತಾಗಿ ಕಾರ್ಯಕರ್ತರಲ್ಲಿ ಶಕ್ತಿ ತುಂಬುವ ಕಾರ್ಯ ವಿವಿಧ ಗೋಷ್ಠಿಗಳ ಮೂಲಕ ನಡೆಯಲಿದೆ ಎಂದರು.

ಕಾಂಗ್ರೆಸ್ ಮುಖಂಡ ಎ.ಮುನೀರ್ ಅವರು ಒಂದು ಗೋಷ್ಠಿ ನಡೆಸಲಿದ್ದು, ಕೆಪಿಸಿಸಿ ಪ್ರಚಾರ ಸಮಿತಿ ಸಂಯೋಜಕ ಚಂದು ಶೆಟ್ಟಿ ಹಾಗೂ ಮುರುಳಿ ಎನ್ನುವವರು ಗೋಷ್ಠಿಯಲ್ಲಿ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಪ್ರತಿ ಭೂತ್ ನಲ್ಲಿನ ಕನಿಷ್ಠ 100 ಜನ ಕಾರ್ಯಕರ್ತರು ಈ ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ರಫೀಕ್ ಟಪಾಲ ಮಾತನಾಡಿ, ಪ್ರಚಾರ ಸಮಿತಿಯ ಈ ಕಾರ್ಯಾಗಾರ ಚುನಾವಣೆಗಾಗಿ ಅಲ್ಲ, ಕಾರ್ಯಕರ್ತರಲ್ಲಿ ಶಿಸ್ತು, ಪಕ್ಷದ ನೀತಿ ನಿಯಮಗಳ ಕುರಿತು ಹಾಗೂ ಸರ್ಕಾರದ ಕಾರ್ಯಕ್ರಮಗಳ ಕುರಿತಾಗಿ ಮಾಹಿತಿ ನೀಡಲಾಗುತ್ತದೆ. ಬೆಲೆ ಏರಿಕೆ, ನಿರುದ್ಯೋಗದಂತಹ ಜ್ವಲಂತ ಸಮಸ್ಯೆಗಳ ಬಗ್ಗೆ ಕೇಂದ್ರ ಸರ್ಕಾರದ ವಿರುದ್ಧ ನಮ್ಮ ಹೋರಾಟ ಹೇಗೆ ಇರಬೇಕು ಎನ್ನುವುದರ ಬಗ್ಗೆ ಚರ್ಚೆ ನಡೆಯಲಿದೆ. ವಿನಾಯಕುಮಾರ ಸೊರಕೆ ಪ್ರಚಾರ ಸಮಿತಿ ಅಧ್ಯಕ್ಷರಾದ ನಂತರ ಕಾರ್ಯಕರ್ತರನ್ನು ಸಿದ್ದಗೊಳಿಸುವಲ್ಲಿ ಅತೀ ಹೆಚ್ಚು ಕ್ರಿಯಾಶೀಲತೆ ಬಂದಿದೆ. ಆ ಹಿನ್ನೆಲೆಯಲ್ಲಿ ಈ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಸಂತ ಹೊನಮೋಡೆ, ಪ್ರಚಾರ ಸಮಿತಿ ನಗರ ಬ್ಲಾಕ್ ಅಧ್ಯಕ್ಷ ಮೈಬುಬ್ ಕಲಾದಗಿ, ಜಿಲ್ಲಾ ಪ್ರಚಾರ ಸಮಿತಿ ಸರ್ಪರಾಜ್ ಮಿರ್ಧೆ, ಎಂ.ಎ.ಮುಲ್ಲಾ ಮತ್ತಿತರರು ಇದ್ದರು.

## ಅವಹೇಳನಕಾರಿ ಪೋಸ್ಟ್: ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ




ಸಾಮಾಜಿಕ ಜಾಲತಾಣದಲ್ಲಿ ವಿಶ್ವಗುರು ಬಸವಣ್ಣ ಹಾಗೂ ವೈರಾಗ್ಯನಿಧಿ ಅಕ್ಕ ಮಹಾದೇವಿ ಅವರ ಬಗ್ಗೆ ಅವಹೇಳನಕಾರಿ ಪೋಸ್ಟ್ ಹಂಚಿಕೊಂಡಿರುವ ರಮಾಕಾಂತ ಎಂ. ಎಂಬುವವರ ವಿರುದ್ಧ ಸೂಕ್ತ ಕ್ರಮಕ್ಕೆ ಆಗ್ರಹಿಸಿ ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕ ಹಾಗೂ ಬಸವಪರ ಸಂಘಟನೆಗಳ ಒಕ್ಕೂಟದ ಆಶ್ರಯದಲ್ಲಿ ಶುಕ್ರವಾರ ಪ್ರತಿಭಟನೆ ನಡೆಯಿತು.

ಜಗತ್ ವೃತ್ತದ ಬಸವೇಶ್ವರ ಪುತ್ಥಳಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ಹೊರಟು ಜಿಲ್ಲಾಧಿಕಾರಿ ಕಚೇರಿವರೆಗೆ ಆಗಮಿಸಿ ಮನವಿ ಪತ್ರ ಸಲ್ಲಿಸಲಾಯಿತು.

ಸಾಮಾಜಿಕ ಜಾಲತಾಣದಲ್ಲಿ ಮಹಾಪುರಷರ ಬಗ್ಗೆ ಅವಹೇಳಳನಕಾರಿ ಬರಹ ಬರೆದು ಅವರ ವ್ಯಕ್ತಿತ್ವಕ್ಕೆ ಧಕ್ಕೆ ತರುತ್ತಿರುವ ವ್ಯಕ್ತಿ ಹಾಗೂ ಸಂಘಟನೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಘೋಷಣೆ ಕೂಗಿ ಕ್ರಮಕ್ಕೆ ಆಗ್ರಹಿಸಿದರು.

ಅವಹೇಳನಕಾರಿಯಾದ ಇಂತಹ ಪೋಸ್ಟ್ ಗಳು ಅಸಮಾಧಾನಕ್ಕೆ ಕಾರಣವಾಗಿ ಸಾಮಾಜಿಕ ಸಂಘರ್ಷಕ್ಕೆ ನಾಂದಿ ಹಾಡಿದಂತಾಗುತ್ತದೆ. ಕೂಡಲೇ ರಮಾಕಾಂತ ಅವರನ್ನು ಬಂಧಿಸಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು. ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ಆರ್.ಜಿ. ಶೆಟಗಾರ, ಪ್ರಧಾನ ಕಾರ್ಯದರ್ಶಿ ಅಶೋಕ ಘೂಳಿ, ಗೌರವಾಧ್ಯಕ್ಷ ಪ್ರಭುಲಿಂಗ ಮಹಾಗಾಂವಕರ, ಬಸವಪರ ಸಂಘಟನೆಗಳ ಒಕ್ಕೂಟದ ರವೀಂದ್ರ ಶಾಬಾದಿ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಡಾ. ಮಲ್ಲಿಕಾರ್ಜುನ ವಡ್ಡನಕೇರಿ, ಶಿವಶರಣಪ್ಪ ದೇಗಾಂವ, ಹಣಮಂತರಾಯ ಕುಸನೂರ, ದಿನೇಶ ದೊಡ್ಡಮನಿ, ಸಿದ್ದರಾಮ ಯಳವಂತಗಿ, ಬಸವರಾಜ ಧೂಳಾಗುಂಡಿ, ಸಿದ್ರಾಮಪ್ಪ ಲದ್ದೆ, ಜಗನ್ನಾಥ ರಾಚಟ್ಟೆ, ಶಾಂತಪ್ಪ ಪಾಟೀಲ, ಅಂಬಾರಾಯ ಪಾಟೀಲ ಬಿರಾದಾರ, ಸತೀಶ ಸಜ್ಜನ್, ಸೇರಿದಂತೆ ಅನೇಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಶಿಕ್ಷಣದ ಜೊತೆಗೆ ಸಂಸ್ಕಾರ ಬೆಳೆಸಿಕೊಳ್ಳಿ

• ಮಲ್ಲಮ್ಮ ನುಡಿ ವಾರ್ತೆ ಯಲಬುರ್ಗಾ



ಮಕ್ಕಳಲ್ಲಿ ಶಿಕ್ಷಣ ಒಂದೇ ಇದ್ದರೆ ಸಾಲದು ಅದರ ಜೋತೆಗೆ ,ಗುರು ಹಿರಿಯರಿಗೆ ಗೌರವ ಕೊಡಬೇಕು, ಉತ್ತಮ ಸಂಸ್ಕಾರ ಸಂಸ್ಕೃತಿ ಬೆಳೆಸಿಕೊಂಡು , ಪಾಲಕರಿಗೆ ಶಾಲೆಗೆ ಕೀರ್ತಿ ತರುವ ಕಾರ್ಯ ಮಾಡಬೇಕು ಎಂದು ನಿವೃತ್ತ ಶಿಕ್ಷಕ ವೈ .ಬಿ .ಮೇಟಿ ಅವರು ತಾಲೂಕಿನ ದಮ್ಮೂರ ಗ್ರಾಮದ ಸರ್ಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಸರಸ್ವತಿ ಪೂಜಾ ಕಾರ್ಯಕ್ರಮ, ಬೀಳ್ಕೊಡಿಗೆ ಕಾರ್ಯಕ್ರಮ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕಿ ಮಾತನಾಡಿದರು.

ಉತ್ತಮ ಸಾಧಕರನ್ನು ಗುರುತಿಸಿ ಬೆಳಕಿಗೆ ತರುವ ಕಾರ್ಯವನ್ನು, ಬನಶ್ರೀ ಸಾಹಿತ್ಯ ಬಳಗವು ಪ್ರತಿವರ್ಷ ಶಿವ ಬಸವ ಪ್ರಶಸ್ತಿಯನ್ನು ನೀಡಿ ಗೌರವ ನೀಡುವ ಕಾರ್ಯ ಶ್ಲಾಘನೀಯವಾದದು ಎಂದು ಸಾಹಿತಿ ಶರಣಬಸಪ್ಪ ದಾನಕೈ ಅವರು ಮಾತನಾಡಿ, ಈ ವರ್ಷ ಯಲಬುರ್ಗಾ ಆರೋಗ್ಯ ಇಲಾಖೆಯ ಡಾ. ಶೇಖರ ಭಜಂತ್ರಿ, ಶಿಕ್ಷಣ ಇಲಾಖೆಯ ದಮ್ಮೂರ ಮುಖ್ಯ ಶಿಕ್ಷಕ ಎಫ್. ಎಂ.ಕಳ್ಳಿ, ನಾಟಕ ರಂಗದ ಬಾಲ ಪ್ರತಿಭೆ ತರ್ಲಕಟ್ಟಿಯ ಯಶ್ವಂತ ಪಾಟೀಲ್, ನಂದಿಹಾಳ ಪತ್ರಕರ್ತ ಶರಣಪ್ಪ ಕಾಟಕಾರ ಇವರನ್ನು ಸನ್ಮಾನಿಸಿ ಪ್ರಶಸ್ತಿ ಕೊಡುವ ಸಮಯದಲ್ಲಿ ದಾನಕೈ ಅವರು ಮಾತನಾಡಿದರು.

ಶಿಕ್ಷಣ ಎಂಬುದು ಹುಲಿಯ ಹಾಲು ಇದ್ದಂತೆ ಇದನ್ನು ಕುಡಿದರೆ ಹುಲಿಯಂತೆ ಗರ್ಜಿಸಲು ಸಾಧ್ಯ ಆದ್ದರಿಂದ ವಿದ್ಯಾರ್ಥಿಗಳು ಈ ಹಂತದಲ್ಲಿ ಓದಿನ ಕಡೆ ಹೆಚ್ಚು ಗಮನಹರಿಸಿದಾಗ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಲು ಸಾಧ್ಯ ಎಂದು ಮುಖ್ಯ ಗುರು ಕನಕಪ್ಪ ಕಂಬಳಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು .ಈ ವೇಳೆ ಪಿಡ್ಡಪ್ಪ ಹಳ್ಳಿ, ರಿಜ್ವಾನಸಾಬ ದಮ್ಮೂರ,ಸವಿತಾ ಕಮ್ಮಾರ, ಹೊಳೆಯಮ್ಮ ಹಳ್ಳಿಕೇರಿ, ಶಂಕ್ರಪ್ಪ ಹೊನ್ನಳ್ಳಿ, ಲಕ್ಷ್ಮಣ ಚಲವಾದಿ, ಮಾನಪ್ಪ ಬಡಿಗೇರ, ಹನುಮಂತಪ್ಪ ಹಡಪದ, ಪತ್ರಕರ್ತರಾದ ವಿ ಎಸ್ ಶಿವಪ್ಪಯ್ಯನಮಠ, ಶ್ರೀಕಾಂತಗೌಡ ಪಾಟೀಲ, ನೀಲಪ್ಪ ಖಾನವಳಿ ಸೇರಿದಂತೆ ಇತರರು ಇದ್ದರು.

# ಗಡಿ ಭಾಗದ ಕನ್ನಡಿಗರ ಬಗ್ಗೆ ಬೇಕು ಸರ್ಕಾರಕ್ಕೆ ಕಾಳಜಿ

• ಮಲ್ಲಮ್ಮ ನುಡಿ ವಾರ್ತೆ ಹೈದರಾಬಾದ



ತೆಲಂಗಾಣ ರಾಜ್ಯದ ಗಡಿ ಭಾಗಗಳಲ್ಲಿ ಇರುವ ಕನ್ನಡ ಮಾಧ್ಯಮ ಶಾಲೆಗಳ ಸ್ಥಿತಿಗತಿ ಅಧ್ಯಯನವನ್ನು ಕರ್ನಾಟಕ ಸರ್ಕಾರದ ಅಧಿಕಾರಿಗಳ ನಿಯೋಗ ಮಾಡಿ ಕನ್ನಡಿಗರ ಆಸ್ಮಿತೆ ಉಳಿಸುವ ನಿಟ್ಟಿನಲ್ಲಿ ಕಾರ್ಯ ಮಾಡಬೇಕು. ಕನ್ನಡದ ಸ್ಥಿತಿ ಚಿಂತಾಜನಕವಾಗಿದೆ. ಇನ್ನೂ ಕೆಲವೆ ದಿನಗಳಲ್ಲಿ ಕನ್ನಡ ಭಾಷೆಯ ಮಾಧ್ಯಮಗಳ ಶಾಲೆಗಳು ಮಾಯವಾಗುವ ಅಳಿವಿನ ಅಂಚಿಗೆ ತಲುಪ್ಪಿದು ಶೀಘ್ರವೇ ಸರ್ಕಾರದ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಎಚ್ಚೆತುಕೊಂಡು ಕನ್ನಡ ಶಾಲೆಗಳು ಉಳಿಸುವಲ್ಲಿ ಪ್ರಯತ್ನ ಮಾಡಬೇಕು ಎಂದು ಕನ್ನಡಿಗರ ಕಲ್ಯಾಣ ಅಭಿವೃದ್ಧಿ ಸಂಘದ ಅಧ್ಯಕ್ಷ ಧರ್ಮೇಂದ್ರ ಪೂಜಾರಿ ಬಗ್ದೂರಿಯವರು ಆಕ್ರೋಶ ವ್ಯಕ್ತ ಪಡಿಸಿದರು.

ಅವರು ಸೋಮವಾರ ತೆಲಂಗಾಣ ಕನ್ನಡ ಸಾಹಿತ್ಯ ಪರಿಷತ್ ರಾಜ್ಯ ಘಟಕ ಹಾಗೂ ಕನ್ನಡಿಗರ ಕಲ್ಯಾಣ ಅಭಿವೃದ್ಧಿ ಸಂಘ ಹೈದರಾಬಾದ್ ಮತ್ತು ಬೀದರನ ಕರ್ನಾಟಕ ಸಾಹಿತ್ಯ ಸಂಘದ ಸಹಯೋಗದಲ್ಲಿ ದಿನಾಂಕ 2–3–2026 ರಂದು ಸಂಗಾರೆಡ್ಡಿ ಜಿಲ್ಲೆಯ ನಾರಾಯಣಖೇಡ ತಾಲ್ಲೂಕಿನ ಗಡಿಭಾಗದ ಕಾರಮುಂಗಿ ಹಾಗೂ ಔದತಪೂರ ಪ್ರಾಥಮಿಕ ಪ್ರೌಢಶಾಲೆಯಲ್ಲಿ ಕನ್ನಡ ಶಾಲೆಗಳ ಸ್ಥಿತಿಗತಿ ಕುರಿತು ಶಿಕ್ಷಕರೊಂದಿಗೆ ಆಪ್ತ ಸಮಾಲೋಚನೆ ಸಭೆಯಲ್ಲಿ ಮಾತನಾಡಿದರು.

ಸ್ಥಳೀಯ ಸರ್ಕಾರ ಹಾಗೂ ಕರ್ನಾಟಕ ಸರ್ಕಾರದಿಂದ ಈ ಭಾಗಕ್ಕೆ ಏನು ಅನುಕೂಲವಾಗಬೇಕು ಅದನ್ನು ಪ್ರಮಾಣಿಕ ಪ್ರಯತ್ನ ಮಾಡುವುದ್ದಾಗಿ ಆಶ್ವಾಸನೆ ನೀಡಿದರು. ಮುಂದಿನ ದಿನಗಳಲ್ಲಿ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳ, ಕನ್ನಡ ಅಭೀವೃದ್ದಿ ಪ್ರಾಧಿಕಾರದ ಅಧ್ಯಕ್ಷರ ಮತ್ತು ಕಾರ್ಯದರ್ಶಿಗಳ ನಿಯೋಗ ಗ್ರಾಮಗಳಿಗೆ ಭೇಟಿ ನೀಡುವಂತೆ ಒತ್ತಾಯಿಸಿ ಕರೆಸುವಂತೆ ಮಾಡುವುದಾಗಿ ತಿಳಿಸಿದರು.

**ಸ್ವತಂತ್ರದ ನಂತರ ನಮ್ಮ ಕಾರಾಮುಂಗಿ ಗ್ರಾಮದಲ್ಲಿ ಪೂಜ್ಯ ಚನ್ನಬಸವ ಪಟ್ಟದೇವರು ಹಚ್ಚಿರುವ ಕನ್ನಡದ ಜ್ಯೋತಿಯನ್ನು ಆರಿಸಲು ಬಿಡುವುದಿಲ್ಲ. ನಿರಂತರವಾಗಿ ಕನ್ನಡ ಉಳಿಸಲು ನಾನು ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಸರ್ವ ರೀತಿಯಿಂದ ದಾಖಲೆಗಳನ್ನು ಸಲ್ಲಿಸಿ ಕನ್ನಡ ಹೋರಾಟಕ್ಕೆ ಇಳಿದು ಕನ್ನಡ ಮಾಧ್ಯಮವನ್ನು ರಕ್ಷಣೆ ಮಾಡುತ್ತೇನೆ.**

**–ಕಾಶಿನಾಥ ಗಡ್ಡೆ**
**ಹಿರಿಯ ಹೋರಾಟಗಾರರು,**
**ಮಾಜಿ ಸರಪಂಚ ಕಾರಾಮುಂಗಿ**

# ನ್ಯಾಯ ಬೆಲೆ ಅಂಗಡಿ ರಾಘವೇಂದ್ರ ಕ್ಯಾಂಪ್ ನಿವಾಸಿಗಳದ್ದು

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ತಾಲ್ಲೂಕಿನ ತುರುವಿಹಾಳ ಹೋಬಳಿ ವ್ಯಾಪ್ತಿಯ ರಾಘವೇಂದ್ರ ಕ್ಯಾಂಪ್ ನಿವಾಸಿಗಳು ಹಾಗೂ ತುರುವಿಹಾಳ ಮತ್ತು ಗುಂಜಳ್ಳಿ ಕ್ಯಾಂಪ್ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ನಮ್ಮ ಕ್ಯಾಂಪ್ ನಿಂದ ತುರುವಿಹಾಳ ನ್ಯಾಯಬೆಲೆ ಅಂಗಡಿ ಸುಮಾರು 2 ಕಿ.ಮೀ ದೂರದಲ್ಲಿದ್ದು ಗುಂಜಳ್ಳಿ ಕ್ಯಾಂಪ್ ನ್ಯಾಯಬೆಲೆ ಅಂಗಡಿ ಸಹ ಸುಮಾರು 2 ಕಿ.ಮೀ ದೂರದಲ್ಲಿರುತ್ತದೆ. ನಮ್ಮ ಕ್ಯಾಂಪಿನಲ್ಲಿ ಒಟ್ಟು 83 ಪಡಿತರ ಚೀಟಿದಾರರು ಇದ್ದು, ಅದರಲ್ಲಿ ಸುಮಾರು ಅರ್ಧ ಚೀಟಿಗಳು ತುರುವಿಹಾಳ ನ್ಯಾಯಬೆಲೆ ಅಂಗಡಿಗೆ ಹಾಗೂ ಉಳಿದ ಅರ್ಧ ಚೀಟಿಗಳು ಗುಂಜಳ್ಳಿ ಕ್ಯಾಂಪ್ ನ್ಯಾಯಬೆಲೆ ಅಂಗಡಿಗಳ ಸಂಬಂಧಪಟ್ಟಿದ್ದು. ಸ್ಥಳಿಯ ಮುಖಂಡರುಗಳು ಹೇಳಿದರು.

ಈ ಪರಿಸ್ಥಿತಿಯಲ್ಲಿ ನಮಗೆ ಹಲವು ತೊಂದರೆಗಳು ಎದುರಾಗುತ್ತಿದ್ದು, ವಿಶೇಷವಾಗಿ ನಮ್ಮ ಕ್ಯಾಂಪಿನಲ್ಲಿ ಸಾರಿಗೆ ವ್ಯವಸ್ಥೆ ಸೌಲಭ್ಯ ಸಮರ್ಪಕವಾಗಿ ಲಭ್ಯವಿಲ್ಲ, ಮಧ್ಯದಲ್ಲಿ ರಾಜ್ಯ ಹೆದ್ದಾರಿ ಇರುವುದರಿಂದ ವಾಹನಗಳು ನಿಲ್ಲಿಸುವುದಿಲ್ಲ, ಈ ಪ್ರದೇಶವನ್ನು ಅಪಘಾತ ಸಂಭವಿಸುವ ವಲಯವೆಂದು ಗುರುತಿಸಲಾಗಿದೆ, ಬಹುತೇಕ ಕುಟುಂಬಗಳು ಕೂಲಿ ಕಾರ್ಮಿಕರು, ವಯೋವೃದ್ಧರು ಹಾಗೂ ಮಹಿಳೆಯರ ಮೇಲೆ ಅವಲಂಬಿತವಾಗಿವೆ ಎಂದು ಹೇಳಿದರು.

ಈ ಕಾರಣಗಳಿಂದಾಗಿ ಎರಡು ಕಿಲೋಮೀಟರ್ ದೂರದ ನ್ಯಾಯಬೆಲೆ ಅಂಗಡಿಗೆ ತೆರಳಿ ಪಡಿತರ ಎತ್ತುವಳಿ ಮಾಡಿಕೊಂಡು ಮರಳಿ ತರುವುದು ಅತ್ಯಂತ ಕಷ್ಟಕರವಾಗಿದೆ. ಈ ಸಂಬಂಧವಾಗಿ ನಾವು ಹಲವು ಬಾರಿ ಗುಂಜಳ್ಳಿ ಕ್ಯಾಂಪ್ ನ್ಯಾಯಬೆಲೆ ಅಂಗಡಿಯ ಸಂಚಾಲಕರಾದ ಶ್ರೀ ಜಿ. ರಾಜಶೇಖರ್ ಅವರಿಗೆ ಮನವಿ ಸಲ್ಲಿಸಿ, ನಮ್ಮ ಕ್ಯಾಂಪಿಗೆ ಬಂದು ಪಡಿತರ ವಿತರಣೆ ಮಾಡುವಂತೆ ವಿನಂತಿಸಿಕೊಂಡಿದ್ದೇವೆ ಎಂದು ಹೇಳಿದರು. ಅದಕ್ಕೆ ಅವರು ಸರ್ಕಾರದ ನಿಯಮಾನುಸಾರ ಅಧಿಕಾರಿಗಳ ಅನುಮತಿ ಇಲ್ಲದೆ ಬೇರೆ ಸ್ಥಳಕ್ಕೆ ತೆರಳಿ ಪಡಿತರ ವಿತರಣೆ ಮಾಡಲು ಅವಕಾಶವಿಲ್ಲ ಎಂದು ತಿಳಿಸಿ, ದಯವಿಟ್ಟು ನ್ಯಾಯಬೆಲೆ ಅಂಗಡಿಗೆ ಬಂದು ಪಡಿತರ ಸ್ವೀಕರಿಸಬೇಕು, ಇಲ್ಲವಾದರೆ ಅಂಗಡಿಯಲ್ಲಿ ದಾಸ್ತಾನು ವ್ಯತ್ಯಾಸ ಉಂಟಾಗಿ ಎದುರಾಗುತ್ತದೆ ಎಂದು ಸ್ಪಷ್ಟಪಡಿಸಿದರು. ಜೊತೆಗೆ ಅಗತ್ಯವಿದ್ದಲ್ಲಿ ಈ ವಿಷಯವನ್ನು ಮಾನ್ಯ ತಹಶೀಲ್ದಾರರ ಗಮನಕ್ಕೆ ತರಿಸಿ ಆಡಳಿತಾತ್ಮಕ ತೊಂದರೆ ಮುಂದಿನ ದಿನಗಳಲ್ಲಿ ಅಧಿಕೃತ ಅನುಮತಿ ಪಡೆದು ಕ್ಯಾಂಪಿನಲ್ಲಿ ವಿತರಣೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಬಹುದು ಎಂದು ತಿಳಿಸಿದ್ದರು. ಕಳೆದ ಎರಡು ತಿಂಗಳ ಅವಧಿಗೆ ನಮ್ಮ ಕ್ಯಾಂಪಿಗೆ ಸೇರಬೇಕಾಗಿದ್ದ ಸುಮರಣೆ 40 ಕ್ವಿಂಟಲ್ ಆಹಾರಧಾನ್ಯ ದಾಸ್ತಾನುವನ್ನು ನ್ಯಾಯಬೆಲೆ ಅಂಗಡಿಗಳಲ್ಲಿಯೇ ಸ್ವೀಕರಿಸದೆ ಬಿಟ್ಟು ಬಂದಿರುತ್ತವೆ ಎಂದು ತಿಳಿಸಿದರು.

ತಾವುಗಳು ದಯವಿಟ್ಟು ಈ ವಿಷಯ. ಕ್ಯಾಂಪ್‌ನಲ್ಲಿಯೇ ಪಡಿತರ ವಿತರಣೆ ಮಾಡುವ ವ್ಯವಸ್ಥೆ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಲು, ಸಮಕ್ಷಮದಲ್ಲಿ ನಮಗೆ ವಿತರಣೆ ಮಾಡಲು ಅವಕಾಶ ಕಲ್ಪಿಸಲು, ಮುಂದಿನ ದಿನಗಳಲ್ಲಿ ನಮ್ಮ ರಾಘವೇಂದ್ರ ನ್ಯಾಯಬೆಲೆ ಅಂಗಡಿ ಸಂಚಾಲಕರ ಮೇಲೆ ಬಂದಿರುವ ದೂರನ್ನು ವಾಸ್ತವ ಸ್ಥಿತಿಯನ್ನು ಪರಿಗಣಿಸಿ ಗಮನಿಸದಿರಲು, ತಾವುಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ತಾಲೂಕು ತಹಶೀಲ್ದಾರ್ ಗ್ರೇಡ್ 2 ತಹಸೀಲ್ದಾರ್ ಅವರಿಗೆ ರಾಘವೇಂದ್ರ ಕ್ಯಾಂಪ್ ನಿವಾಸಿಗಳು ಹಾಗೂ ಪಡಿತರ ಕಾರ್ಡ್ ದಾರರು ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ. ಸೋಮನಾಥ ಗುಂಜಳ್ಳಿ, ವೆಂಕಟೇಶ್ ನಾಯಕ್ ಮರಿಯಪ್ಪ ಯಮನಪ್ಪ ಮುದುಕಪ್ಪ ರಮೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)